₹ 4 ಪುಟ: 4 ಸಂಪುಟ: 4 ಸಂಚಿಕೆ 75 newsbelagavi@gmail.com 9900332089 9900332089



# ಬೆಳಗಾವಿ ವರದಿ

ಕನ್ನಡ ದಿನಪತ್ರಿಕೆ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

BELAGAVI VARADI KANNADA DAILY

Volume : 4 Issue: 75 Friday, 05, MAY, 2023 RNI: KARKAN/2020/79084 Regn,No:G-2/PMG/KA/NK/BM/139/2021-23



## ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಅಂಜನಾದ್ರಿ ಅಭಿವೃದ್ಧಿ ಮಂಡಳಿ ಸ್ಥಾಪನೆ

## ಹನುಮ ಜನ್ಮಸ್ಥಳ ಅಭಿವೃದ್ಧಿಗೆ ಕ್ರಮ: ಡಿ.ಕೆ.ಶಿವಕುಮಾರ್

ಮೈಸೂರು: ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದ ನಂತರ ಅಂಜನಾದ್ರಿ ಅಭಿವೃದ್ಧಿ ಮಂಡಳಿ ಸ್ಥಾಪಿಸಿ, ಹನುಮ ಜನ್ಮಸ್ಥಳ ಅಭಿವೃದ್ಧಿ ಮಾಡುತ್ತೇವೆ.

ನಾವು ಕೂಡ ಹನುಮ ಭಕ್ತರು. ದೇವರ ಹೆಸರಿನಲ್ಲಿ ಸಂಘಟನೆ ಮಾಡಿಕೊಂಡು ಕಾನೂನು ಕೈಗೆತ್ತಿಕೊಂಡು ಸಮಾಜದಲ್ಲಿ ಅಶಾಂತಿ ಮೂಡಿಸಿದರೆ ಕಾನೂನು ಕ್ರಮ ಕೈಗೊಳ್ಳುತ್ತೇವೆ ಎಂದಷ್ಟೇ ನಾವು ಹೇಳಿದ್ದೇವೆ ಎಂದು ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

ಚಾಮುಂಡಿ ಬೆಟ್ಟದಲ್ಲಿ ದೇವರ ದರ್ಶನ ಪಡೆದ ಸಂದರ್ಭದಲ್ಲಿ ಮಾಧ್ಯಮಗಳ ಪ್ರಶ್ನೆಗಳಿಗೆ ಉತ್ತರಿಸಿದ ಡಿ.ಕೆ. ಶಿವಕುಮಾರ್ ಅವರು, 'ಬಿಜೆಪಿ ಅವರು ಈ ವಿಚಾರವನ್ನು ಭಾವನಾತ್ಮಕವಾಗಿ ಸೆಳೆಯಲು ಮುಂದಾಗಿದೆ' ಎಂದು ತಿಳಿಸಿದರು.

ನಮ್ಮ ನಾಡ ದೇವತೆ ಚಾಂಮುಂಡೇಶ್ವರಿ. ರಾಜ್ಯಕ್ಕೆ ಬಂದಿರುವ ದುಖಃವನ್ನು ದೂರ ಮಾಡುವ ದೇವಿ ದುರ್ಗಾದೇವಿ. ಚುನಾವಣೆ ಪ್ರಚಾರದ ವೇಳೆ ಮತಯಾಚನೆ ವೇಳೆ ತಾಯಿ ದರ್ಶನ ಪಡೆದು ನಮ್ಮ ಸಂಕಷ್ಟಗಳು ಬಗೆಹರಿದು ಯಶಸ್ಸು ಸಿಗಲಿ ಎಂದು ಪ್ರಾರ್ಥ ನೆ ಮಾಡಿದ್ದೇವೆ.

ಆರಂಭದಲ್ಲಿ ಗಣೇಶ, ತಾಯಿ ಚಾಮುಂಡೇಶ್ವರಿ ಹಾಗೂ ಆಂಜನೇಯನ ಬಳಿ ಪ್ರಾರ್ಥನೆ ಮಾಡಿ ಪ್ರಚಾರಕ್ಕೆ ಹೊರಟಿದ್ದೇನೆ. ಯಶಸ್ಸು ಖಂಡಿತವಾಗಿಯೂ ಸಿಗಲಿದೆ ಎಂದು ನಂಬಿದ್ದೇನೆ ಎಂದರು.

ಬಜರಂಗದಳ ವಿಚಾರ ನಿಮ್ಮ ವೇಗಕ್ಕೆ ಬ್ರೇಕ್ ಹಾಕಿದೆಯೇ ಎಂಬ ಪ್ರಶ್ನೆಗೆ, 'ನಮ್ಮ ಪ್ರಣಾಳಿಕೆ ಕಂಡು ಬಿಜೆಪಿಯವರು ಗಾಬರಿ ಯಾಗಿದ್ದಾರೆ.

ಆಂಜನೇಯನಿಗೂ ಬಜರಂಗದಳಕ್ಕೂ ಸಾಕಷ್ಟು ವ್ಯತ್ಯಾಸವಿದೆ. ಬಜರಂಗದಳ ಒಂದು ಸಂಘಟನೆ. ಹುಟ್ಟಿದ ಕುರುಗಳೆಲ್ಲಾ ಬಸವ ಆಗುವುದಿಲ್ಲ, ಅದೇ ರೀತಿ



ಆಂಜನೇಯನ ಹೆಸರಿಟ್ಟುಕೊಂಡ ಮಾತ್ರಕ್ಕೆ ಎಲ್ಲರೂ ಹನುಮಂತನಾಗುತ್ತಾರೆ.

ಅವರು ಹನುಮಂತನ ಹೆಸರಿಟ್ಟುಕೊಂಡು ಸಂಘಟನೆ ಮಾಡಿ ನೈತಿಕ ಪೊಲೀಸ್ ಗಿರಿ ಮಾಡಿಕೊಂಡು ಬಂದಿದ್ದಾರೆ.

ಯಾರು ಸಮಾಜದಲ್ಲಿ ಕಾನೂನ ಕೈಗೆತ್ತಿಕೊಂಡು ಅಶಾಂತಿ ಮೂಡಿಸುತ್ತಾರೋ ಅಂತಹವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದ್ದೇವೆ.

ನಾವು ಕೂಡ ಹನುಮಂತನ ಭಕ್ತರು. ರಾಮನ ತಂದೆ ದಶರಥನ ದೇವಾಲಯ ಇಲ್ಲ. ಆದರೆ ರಾಮನ ಭಂಟ ಹನುಮಂತನ ದೇವಾಲಯ ಎಲ್ಲೆಡೆ ಇದೆ. ಈ ನಾಡಿನಲ್ಲಿ ಹನುಮಂತ ಹುಟ್ಟಿದ್ದಾನೆ.

ಅದಕ್ಕೆ ಶಕ್ತಿ ತುಂಬಲು ನಾವು ಬದ್ಧವಾಗಿದ್ದು, ಇದಕ್ಕಾಗಿ ಕಾರ್ಯಕ್ರಮ ರೂಪಿಸುತ್ತಿದ್ದೇವೆ.

ಎಲ್ಲಾ ಪ್ರಮುಖ ಆಂಜನೇಯ ದೇವಾಲಯ ಅಭಿವೃದ್ಧಿಗೆ ವಿಶೇಷ ಯೋಜನೆ ರೂಪಿಸುತ್ತದೆ.

ಆಂಜನೇಯನ ಹೆಸರಲ್ಲಿ ಪ್ರತಿ ತಾಲೂಕಿನಲ್ಲಿ ಯುವಕರಿಗೆ ಕಾರ್ಯಕ್ರಮ ರೂಪಿಸುತ್ತೇವೆ. ಅಂಜನಾದ್ರಿ ಅಭಿವೃದ್ಧಿ ಮಂಡಳಿ ಸ್ಥಾಪನೆ ಮಾಡುತ್ತೇವೆ. ಪ್ರಧಾನಮಂತ್ರಿಗಳು ಸೇರಿದಂತೆ ಬಿಜೆಪಿ ನಾಯಕರು ದೇವರ ಹೆಸರನ್ನು ರಾಜಕೀಯವಾಗಿ ಬಳಸಿಕೊಳ್ಳಲು ಪ್ರಯತ್ನಿಸುತ್ತಿದ್ದಾರೆ.

ಅವರು ಭಾವನಾತ್ಮಕವಾಗಿ ವಿಚಾರ ತೆಗೆದುಕೊಂಡು ಹೋಗುತ್ತಿದ್ದಾರೆ. ನಾವು ದೇವರನ್ನು ಭಕ್ತಿ, ಭಾವನೆಗೆ ಸೀಮಿತ ಗೊಳಿಸಿದ್ದೇವೆ.

ಕೆಂಗಲ್ ಹನುಮಂತಯ್ಯ ಅವರು ಕಟ್ಟಿದ ಆಂಜನೇಯನ ದೇವಾಲಯ ಸೇರಿದಂತೆ ಬೆಂಗಳೂರಿನಿಂದ ಮೈಸೂರಿಗೆ ಆಗಮಿಸುತ್ತಾ ಸುಮಾರು 25 ಆಂಜನೇಯ ದೇವಾಲಯ ಗಳಿವೆ. ಬಿಜೆಪಿಯವರು ಯಾವುದಾದರೂ ಒಂದು ಆಂಜನೇಯನ ದೇವಾಲಯ ಕಟ್ಟಿದ್ದಾರಾ? ಬಿಜೆಪಿಯವರು ಜನರ ದಾರಿ ತಪ್ಪಿಸಲು ಪ್ರಯತ್ನಿಸುತ್ತಿದ್ದು, ಯಾವುದೂ ಫಲ ನೀಡುವುದಿಲ್ಲ.

ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬರಲಿದೆ. ಕಾಂಗ್ರೆಸ್ ಸರ್ಕಾರ ಹನುಮ ಜನಿಸಿದ ಅಂಜನಾದ್ರಿ ಅಭಿವೃದ್ಧಿ ಮಾಡಲಿದೆ. ಬಿಜೆಪಿಯವರು ರಾಮದೇವರ ಬೆಟ್ಟದಲ್ಲಿ ರಾಮ ಮಂದಿರ ಕಟ್ಟುವುದಾಗಿ ಈಗ ಹೇಳುತ್ತಿದ್ದಾರೆ. ಇಷ್ಟು ದಿನ ಏನು ಮಾಡುತ್ತಿದ್ದರು?' ಎಂದು ಪ್ರಶ್ನಿಸಿದರು.

## ಕೈ ಪ್ರಣಾಳಿಕೆ ಸುಟ್ಟ ಈಶ್ವರಪ್ಪ



ಕಲಬುರಗಿ: ಕಾಂಗ್ರೆಸ್ನ ಚುನಾವಣಾ ಪ್ರಣಾಳಿಕೆಯು ಮೊಹ್ಮದ್ ಅಲಿ ಜಿನ್ನಾ ಪ್ರಣಾಳಿಕೆ ಆಗಿದೆ ಎಂದು ಮಾಜಿ ಸಚಿವ ಕೆ. ಎಸ್. ಈಶ್ವರಪ್ಪ ವೇದಿಕೆಯಲ್ಲೇ ಕಾಂಗ್ರೆಸ್ ಪ್ರಣಾಳಿಕೆಯನ್ನು ಸುಟ್ಟು ಆಕ್ರೋಶ ಹೊರಹಾಕಿದ್ದಾರೆ.

ಕಲಬುರಗಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ಚುನಾವಣಾ ಪ್ರಚಾರದಲ್ಲಿ ಬಜರಂಗದಳ ನಿಷೇಧ ವಿಚಾರವಾಗಿ ಕಿಡಿಕಾರಿದರು. ಯುವಜನರಿಗೆ ಸ್ಫೂರ್ತಿ ತುಂಬುವ ಕೆಲಸವನ್ನು ಬಜರಂಗದಳ ಮಾಡುತ್ತಿದೆ. ಗೋಹತ್ಯೆ ತಡೆಯಲು ಮುಂದಾಗಿರುವ ಬಜರಂಗದಳ ಬ್ಯಾನ್ ಮಾಡ್ತಿರಾ? ಈ ಹಿನ್ನೆಲೆಯಲ್ಲಿ ಕಾಂಗ್ರೆಸ್ ಪ್ರಣಾಳಿಕೆಯನ್ನು ನಿಮ್ಮ ಎದುರೇ ಸುಟ್ಟು ಹಾಕುತ್ತಿದ್ದೇನೆ. ಕಾಂಗ್ರೆಸ್ ಬರೀ ಸುಳ್ಳಿನ ಪ್ರಣಾಳಿಕೆಯನ್ನು ಬಿಡುಗಡೆ ಮಾಡಿದೆ. ಹೀಗಾಗಿ ಈ ಪ್ರಣಾಳಿಕೆಯಿಂದ ಯಾವ ಪ್ರಯೋಜನ ಇಲ್ಲ ಎಂದು ಕಿಡಿಕಾರಿದರು.

ಬಜರಂಗದಳ ದಳ ಬ್ಯಾನ್ ಮಾಡುತ್ತೇನೆ ಎಂದು ಹೇಳಿದ್ದಕ್ಕೆ ಹಿಂದೂಗಳಿಗೆ ನೋವಾಗಿದೆ. ಕಾಂಗ್ರೆಸ್ನ ಮನಸ್ಥಿತಿ ರಾಜ್ಯದ ಜನರಿಗೆ ಗೊತ್ತಾಗಿದೆ. ಎಲ್ಲಾ ಮುಸ್ಲಿಮರು ಒಂದೇ ಥರ ಅಲ್ಲ. ಕೆಲ ಮುಸ್ಲಿಮರು ಕಾಂಗ್ರೆಸ್ನ ವಿರುದ್ಧವಾಗಿದ್ದಾರೆ. ಇದು ಮುಸ್ಲಿಂ ಲೀಗ್ನ ಪ್ರಣಾಳಿಕೆ, ಮಹ್ಮದ್ ಅಲಿ ಜಿನ್ನಾನ ಪ್ರಣಾಳಿಕೆಯಾಗಿದೆ. ಬಜರಂಗದಳ ಬ್ಯಾನ್ ಮಾಡಿ ಮುಸ್ಲಿಮರ ತುಷ್ಟೀಕರಣ ಮಾಡಲು ಕಾಂಗ್ರೆಸ್ ಹೊರಟಿದೆ ಎಂದ ಅವರು, ಎಲ್ಲಾ ರಾಷ್ಟ್ರಭಕ್ತ ನಾಗರಿಕರು ರಾಷ್ಟ್ರದ್ರೋಹಿ ಪ್ರಣಾಳಿಕೆ ಬಹಿಷ್ಕರಿಸಲು ಮನವಿ ಮಾಡಿದರು.

ಬಜರಂಗದಳ ಅಂದರೆ ಆಂಜನೇಯ. ಆಂಜನೇಯನ ಬಾಲಕ್ಕೆ ಬೆಂಕಿ ಹಚ್ಚಿದ್ದು ರಾವಣ. ಹೀಗಾಗಿ ಆಂಜನೇಯ ಬಾಲಕ್ಕೆ ಬೆಂಕಿ ಹಚ್ಚಲು ಮುಂದಾಗಿರುವ ಕಾಂಗ್ರೆಸ್ ದೇಶದೆಲ್ಲೆಡೆ ಸರ್ವನಾಶವಾಗಲಿದೆ. ಈ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ವಿಪಕ್ಷ ಸ್ಥಾನ ಕೂಡ ಕಳೆದುಕೊಳ್ಳಲಿದೆ ಎಂದು ಗುಡುಗಿದರು.

## ಶಾಸಕ ಬಸನಗೌಡ ಯತ್ನಾಳ್‌ಗೆ ಶೋಕಾಸ್ ನೋಟಿಸ್ ಜಾರಿ



ಬೆಂಗಳೂರು: ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರಿಗೆ ಚುನಾವಣಾ ಆಯೋಗ ಶೋಕಾಸ್ ನೋಟಿಸ್ ಜಾರಿ ಮಾಡಿದೆ.

ಕಾಂಗ್ರೆಸ್ ನಾಯಕರು ದೂರು ನೀಡಿದ ಹಿನ್ನೆಲೆಯಲ್ಲಿ ಕೊಪ್ಪಳ ಜಿಲ್ಲೆಯ ಯಲಬುರ್ಗಾ ದಲ್ಲಿ ಮಾಡಿದ ಭಾಷಣದ ವೇಳೆ ಮಾದರಿ ನೀತಿ ಸಂಹಿತೆ ಉಲ್ಲಂಘಿಸಿದ್ದಕ್ಕಾಗಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್‌ಗೂ ನೋಟಿಸ್ ಜಾರಿ ಮಾಡಲಾಗಿದೆ.

ಕೊಪ್ಪಳ ಜಿಲ್ಲಾ ಚುನಾವಣಾಧಿಕಾರಿಗಳು ಯತ್ನಾಳ್ ಅವರಿಗೆ ಶೋಕಾಸ್ ನೋಟಿಸ್ ನೀಡಿದ್ದು, ಮೇ 4 ರೊಳಗೆ ಸ್ಪಷ್ಟನೆ ನೀಡಲು ಸೂಚನೆ ನೀಡಿದ್ದಾರೆ.

ನೋಟಿಸ್ ಜಾರಿ ಯಾಕೆ? ಯತ್ನಾಳ್ ಅವರು ಮೋದಿ ವಿಶ್ವ ನಾಯಕ. ಅಂಥ ನಾಯಕನನ್ನು ನಾಗರಹಾವಿಗೆ ಹೋಲಿಸುವುದು ಸರಿಯೇ? ಕಾಂಗ್ರೆಸ್ ನಾಯಕರು ಸೋನಿಯಾ ಮಾತಿಗೆ ಮಣಿದು ಈ ರೀತಿಯ ಹೇಳಿಕೆಗಳನ್ನು ನೀಡುತ್ತಿದ್ದಾರೆ. ಸೋನಿಯಾ ಗಾಂಧಿ ವಿಷಕನ್ಯೆಯೇ ಎಂದು ಪ್ರಶ್ನಿಸಿದ್ದರು. ರಾಹುಲ್ ಗಾಂಧಿ ಅವರನ್ನು 'ಅರೆಹುಚ್ಚ' ಎಂದು ಕರೆದಿದ್ದರು.

## ನಾಲ್ವರು ಶಂಕಿತ ಬಜರಂಗದಳ ಕಾರ್ಯಕರ್ತರ ಬಂಧನ



ಮಂಗಳೂರು: ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರಿನಲ್ಲಿ ಹಿಂದೂ ಯುವತಿಯ ಜೊತೆಯಲ್ಲಿದ್ದ ಕಾರಣಕ್ಕೆ ಮುಸ್ಲಿಂ ಯುವಕನ ಮೇಲೆ ಹಲ್ಲೆ ನಡೆಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಭಜರಂಗದಳದ ಕಾರ್ಯಕರ್ತರು ಎಂದು ಶಂಕಿಸಲಾದ ನಾಲ್ವರನ್ನು ಬಂಧಿಸಲಾಗಿದೆ.

ಬಂಧಿತರನ್ನು ಒಳಮೊಗ್ರು ಗ್ರಾಮದ ನಿವಾಸಿ ಎಸ್ ಪ್ರದೀಪ್ (19), ಕೆದಂಬಾಡಿಯ ದಿನೇಶ್ ಗೌಡ (25), ಗುತ್ತುಮನೆಯ ನಿಶಾಂತ್ ಕುಮಾರ್ (19) ಮತ್ತು ಆರ್ಯಾಪು ಗ್ರಾಮದ ಪ್ರಜ್ವಲ್ (23) ಎಂದು ಗುರುತಿಸಲಾಗಿದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.

ಮರೀಲ್ ಕಾಡುಮನೆ ನಿವಾಸಿ ಮೊಹಮ್ಮದ್ ಫರೀಷ್ (18) ತನ್ನ ಸಹಪಾಠಿ ಹಿಂದೂ ಯುವತಿಯೊಂದಿಗೆ ಅಂಗಡಿಯೊಂದರಲ್ಲಿ ಜ್ಯೂಸ್ ಕುಡಿಯುತ್ತಿದ್ದಾಗ ಜನರ ಗುಂಪೊಂದು ದಾಳಿ ಮಾಡಿದೆ.

ಭೀಕರ ಹಲ್ಲೆಯಿಂದ ಫರೀಷ್ ಅವರ ದೇಹದ ಮೇಲೆ ಆಳವಾದ ಗಾಯಗಳಾಗಿವೆ.

ಫರೀಷ್ ಮತ್ತು ಹಿಂದೂ ಯುವತಿ ಪುತ್ತೂರಿನ ಕಬಕ ಸರ್ಕಾರಿ ಕಾಲೇಜಿನ ವಿದ್ಯಾರ್ಥಿಗಳು. ಸದ್ಯ ಫರೀಷ್ ಪುತ್ತೂರಿನ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

## ಮೇ 6ರಂದು ರಾಜ್ಯ ಚುನಾವಣಾ ಕಣಕ್ಕೆ 'ಸೋನಿಯಾ ಗಾಂಧಿ' ಎಂಟ್ರಿ



ಬೆಂಗಳೂರು: ರಾಜ್ಯ ವಿಧಾನಸಭಾ ಚುನಾವಣಾ ಅಖಾಡಕ್ಕೆ ಸೋನಿಯಾ ಗಾಂಧಿ ಎಂಟ್ರಿ ಕೊಡುತ್ತಿದ್ದು, ಮೇ 6 ರಂದು ಹುಬ್ಬಳ್ಳಿಗೆ ಆಗಮಿಸಲಿದ್ದಾರೆ ಎಂದು ಮೂಲಗಳು ತಿಳಿಸಿದೆ.

ಬಿಜೆಪಿ ಬಿಟ್ಟು ಕಾಂಗ್ರೆಸ್ ಸೇರ್ಪಡೆಯಾದ ಜಗದೀಶ್ ಶೆಟ್ಟರ್ ಕ್ಷೇತ್ರ ಹುಬ್ಬಳ್ಳಿಯಿಂದಲೇ ಸೋನಿಯಾ ಗಾಂಧಿ ರಣಕಹಳೆ ಮೊಳಗಿಸಲಿದ್ದಾರೆ. ಈಗಾಗಲೇ ಪ್ರಿಯಾಂಕಾ ಗಾಂಧಿ, ರಾಹುಲ್ ಗಾಂಧಿ ರಾಜ್ಯದ ಹಲವು ಕಡೆ ಪ್ರಚಾರ ನಡೆಸಿದ್ದು, ಇದೀಗ ಸೋನಿಯಾ ಗಾಂಧಿ ರಾಜ್ಯಕ್ಕೆ ಲಗ್ಗೆ ಇಡುತ್ತಿದ್ದಾರೆ.

ಈ ಮೂಲಕ ರಾಜ್ಯದಲ್ಲಿ ಕಾಂಗ್ರೆಸ್ ಚುನಾವಣಾ ರಣಕಹಳೆ ಮೊಳಗಿಸಲಿದ್ದಾರೆ.

ಮೇ.6 ರಂದು ಹುಬ್ಬಳ್ಳಿಗೆ ಆಗಮಿಸಿ ಅಲ್ಲಿ ನಡೆಯುವ ಬೃಹತ್ ಸಾರ್ವಜನಿಕ ಸಮಾವೇಶದಲ್ಲಿ ಭಾಗಿಯಾಗಿ ಜನರನ್ನುದ್ದೇಶಿಸಿ ಮಾತನಾಡಲಿದ್ದಾರೆ. ಕಾಂಗ್ರೆಸ್ ಅಭ್ಯರ್ಥಿಗಳ ಪರ ಭರ್ಜರಿ ಪ್ರಚಾರ ನಡೆಸಲಿದ್ದಾರೆ ಎಂದು ತಿಳಿದು ಬಂದಿದೆ.

## ಪೊಲೀಸರಿಂದ ಲಾಠಿ ಪ್ರಹಾರ

ರಾಯಚೂರು : ರಾಯಚೂರು ಜಿಲ್ಲೆಯ ದೇವದುರ್ಗದ ಹೆಲಿಪ್ಯಾಡ್ ಬಳಿ ನಟ ಸುದೀಪ್ ನೋಡಲು ಅಭಿಮಾನಿಗಳು ಮುಗಿಬಿದ್ದ ಕಾರಣ ಪೊಲೀಸರು ಲಾಠಿಚಾರ್ಜ್ ನಡೆಸಿದ್ದಾರೆ. ಬಿಜೆಪಿ ಅಭ್ಯರ್ಥಿಗಳ ಪ್ರಚಾರ ನಡೆಸಲು ನಟ ಸುದೀಪ್ ರಾಯಚೂರಿಗೆ ಆಗಮಿಸಿದ್ದು, ನೆಚ್ಚಿನ ನಟನನ್ನು ನೋಡಲು ಅಭಿಮಾನಿಗಳು ಮುಗಿಬಿದ್ದಿದ್ದಾರೆ. ಈ ವೇಳೆ ಪರಿಸ್ಥಿತಿಯನ್ನು ನಿಯಂತ್ರಣಕ್ಕೆ ತರಲು ಪೊಲೀಸರು ಲಾಠಿ ಬೀಸಿದ್ದಾರೆ ಎಂದು ತಿಳಿದು ಬಂದಿದೆ. ರಾಯಚೂರು ಜಿಲ್ಲೆಯಲ್ಲಿ ಸುದೀಪ್ ಅಬ್ಬರದ ಪ್ರಚಾರ ನಡೆಸಲಿದ್ದು, ದೇವದುರ್ಗ, ಲಿಂಗಸುಗೂರು, ಮಾನ್ವಿ, ಮಸ್ಕಿ ಕ್ಷೇತ್ರಗಳಲ್ಲಿ ಪ್ರಚಾರ ನಡೆಸಲಿದ್ದಾರೆ.

## ಕೆ.ಎಸ್.ಈಶ್ವರಪ್ಪ ಪ್ರಜಾಪ್ರಭುತ್ವಕ್ಕೆ ಅಪಮಾನ: ಖರ್ಗೆ ಆಕ್ರೋಶ

ಕಲಬುರ್ಗಿ: ಮಾಜಿ ಸಚಿವ ಕೆ.ಎಸ್.ಈಶ್ವರಪ್ಪ ಕಾಂಗ್ರೆಸ್ ಚುನಾವಣಾ ಪ್ರಣಾಳಿಕೆಯನ್ನು ಸುಟ್ಟು ಪ್ರಜಾಪ್ರಭುತ್ವಕ್ಕೆ ಅಪಮಾನ ಮಾಡಿದ್ದಾರೆ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ವಾಗ್ದಾಳಿ ನಡೆಸಿದ್ದಾರೆ.

ಕಲಬುರ್ಗಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಖರ್ಗೆ, ಕಾಂಗ್ರೆಸ್ ಪ್ರಣಾಳಿಕೆಯ ಪ್ರತಿ ಸುಟ್ಟು ಹಾಕಿದ್ದು ತಪ್ಪು. ಈಶ್ವರಪ್ಪ ಒಬ್ಬ ಮಾಜಿ ಸಚಿವ, ಉಪಮುಖ್ಯಮಂತ್ರಿಯಾಗಿ ಈ ರೀತಿ ನಡೆದುಕೊಂಡಿದ್ದು ಸರಿಯಲ್ಲ. ಒಂದು ಪಕ್ಷದ ಪ್ರಣಾಳಿಕೆಯನ್ನು ಬೆಂಕಿ ಹಚ್ಚಿ ಸುಟ್ಟು ಹಾಕಿದ್ದು



ಪ್ರಜಾಪ್ರಭುತ್ವಕ್ಕೆ ಮಾಡಿದ ಅವಮಾನ ಎಂದು ಗುಡುಗಿದರು

ನಾನೂ ಒಬ್ಬ ಹಿಂದೂ, ಅವರೂ ಕೂಡ ಒಬ್ಬ ಹಿಂದೂ. ಆದರೆ ಬಿಜೆಪಿಯ ಹಿಂದೂತ್ವ ಬೇರೆ ನಮ್ಮ ಹಿಂದೂತ್ವ ಬೇರೆ.

ಜನರಿಗೆ ನಾವು ಗ್ಯಾರಂಟಿ ಯೋಜನೆಗಳ ಬಗ್ಗೆ ಪ್ರಣಾಳಿಕೆಯಲ್ಲಿ ಹೇಳಿದ್ದರೆ ಅದನ್ನು ಸುಟ್ಟು ಹಾಕುವುದು ಎಷ್ಟು ಸರಿ.

ಇ ಇಂತಹ ಬೇಜವಾಬ್ದಾರಿಯನ್ನು ಸಹಿಸಲಾಗದು ಎಂದು ಕಿಡಿಕಾರಿದ್ದಾರೆ.

ಬಜರಂಗದಳ ಬ್ಯಾನ್ ಮಾಡುವುದಾಗಿ ಕಾಂಗ್ರೆಸ್ ಪ್ರಣಾಳಿಕೆಯಲ್ಲಿ ಉಲ್ಲೇಖಿಸಿತ್ತು. ಈ ಹಿನ್ನೆಲೆಯಲ್ಲಿ ಸಿಡಿದೆದ್ದಿರುವ ಬಿಜೆಪಿಯ ನಾಯಕ ಈಶ್ವರಪ್ಪ ಕಲಬುರ್ಗಿಯಲ್ಲಿ ಪ್ರಣಾಳಿಕೆ ಪ್ರತಿಯನ್ನೇ ಸುಟ್ಟುಹಾಕಿ ಆಕ್ರೋಶ ವ್ಯಕ್ತಪಡಿಸಿದ್ದರು.

## ಸಚಿವೆ ಶಶಿಕಲಾ ಜೊಲ್ಲೆ ಗೆಲವು ನಿಶ್ಚಿತ: ಕೇಂದ್ರ ಸಚಿವ ನಿತಿನ್ ಗಡ್ಕರಿ

ನಿಪ್ಪಾಣಿ : ಕಳೆದ 10 ವರ್ಷಗಳಿಂದ ಸಚಿವೆ ಶಶಿಕಲಾ ಜೊಲ್ಲೆಯವರು ಮಾಡಿರುವ ಜನಪರ ಅಭಿವೃದ್ಧಿ ಕಾರ್ಯಗಳಿಂದ ಮೂರನೇ ಬಾರಿಗೆ ಅವರ ಗೆಲವು ನಿಶ್ಚಿತ ಎಂದು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿಯ ಸಚಿವರಾದ ನಿತಿನ ಗಡ್ಕರಿ ಹೇಳಿದರು.

ಅವರು ನಿಪ್ಪಾಣಿ ತಾಲೂಕಿನ ಬೋರಗಾಂವ ಪಟ್ಟಣದಲ್ಲಿ ಬಿಜೆಪಿ ಅಭ್ಯರ್ಥಿ ಸಚಿವೆ ಶಶಿಕಲಾ ಜೊಲ್ಲೆಯವರ ಪ್ರಚಾರ ಸಭೆಯಲ್ಲಿ ಭಾಗಿಯಾಗಿ ಮಾತನಾಡಿದ ಅವರು ನಿಪ್ಪಾಣಿ ಕ್ಷೇತ್ರದಲ್ಲಿ ಕಳೆದ 10 ವರ್ಷಗಳಿಂದ ಸಚಿವೆ ಶಶಿಕಲಾ ಜೊಲ್ಲೆಯವರು ರಸ್ತೆ, ಕುಡಿಯುವ ನೀರು,ಶಾಲೆಗಳ ಅಭಿವೃದ್ಧಿ,ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸ್ಥಾಪನೆ,ಏತನೀರಾವರಿ ಯೋಜನೆ ಸೇರಿದಂತೆ



ಹತ್ತುಹಲವಾರು ಅಭಿವೃಧ್ಧಿ ಕಾರ್ಯಗಳನ್ನು ಮಾಡಿ ನಿಪ್ಪಾಣಿ ಕ್ಷೇತ್ರವನ್ನು ಒಳ್ಳೆಯ ರೀತಿಯಾಗಿ ಅಭಿವೃಧ್ಧಿ ಮಾಡಿದ್ದಾರೆ.

ಈ ಹಿನ್ನಲೆಯಲ್ಲಿ ಸಚಿವೆ ಶಶಿಕಲಾ ಜೊಲ್ಲೆಯವರ ಗೆಲವು ನಿಶ್ಚಿತ ಎಂದರು. ಕೇಂದ್ರ ಹಾಗೂ ರಾಜ್ಯ ಬಿಜೆಪಿ ಸರ್ಕಾರಗಳು ಒಳ್ಳೆಯ ಜನಪರ ಕೆಲಸವನ್ನು ಮಾಡುತ್ತೀವೆ ಎಂದು ಪ್ರಶಂಸೆಯನ್ನು ವ್ಯಕ್ತಪಡಿಸಿದರು.

ಬಿಜೆಪಿ ಅಭ್ಯರ್ಥಿ ಸಚಿವೆ ಶಶಿಕಲಾ ಜೊಲ್ಲೆ ಮಾತನಾಡಿ ಕೊರೊನಾ ಸಂಧರ್ಭದಲ್ಲಿ ಸ್ವಂತ ಖರ್ಚಿನಲ್ಲಿ ಕೊರೊನಾ ಆಸ್ಪತ್ರೆಯ ಪ್ರಾರಂಭಿಸಿ ರೋಗಿಗಳ ಆರೈಕೆ ಮಾಡಿದೇನೆ.

ನನಗೆ ಕೊರೊನಾ ಆದ ಸಂಧರ್ಭದಲ್ಲಿ ನನ್ನ ಪರಿಸ್ಥಿತಿ ಗಂಭೀರ ಇದ್ರು ಕೂಡಾ ನಾವೇ ಸ್ಥಾಪಿಸಿದ ಕೊರೊನಾ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದು ಗುಣ ಮುಖನಾಗಿದೇನೆ.

ಆದರೆ ವಿರೋಧ ಪಕ್ಷದವರು ಕೊರೊನಾ ಸಂಧರ್ಭದಲ್ಲಿ ನಾವು ಎನೂ ಕೆಲಸ ಮಾಡಿಲ್ಲಾ ಎಂದು ಆರೋಪವನ್ನು ಮಾಡುತ್ತಿದ್ದಾರೆ.ನಾವು ಕೊರೊನಾ ಸಂಧರ್ಭದಲ್ಲಿ ಮಾಡಿದ ಕೆಲಸಗಳು ಜನರಿಗೆ ಗೊತ್ತು ಎಂದು ವಿರೋಧ ಪಕ್ಷದವರಿಗೆ ಉತ್ತರ ನೀಡಿದರು.

ಜೊತೆಗೆ ಪ್ರವಾಹ ಸಂಧರ್ಭದಲ್ಲಿ ಒಳ್ಳೆಯ ರೀತಿಯಾಗಿ ಕೆಲಸ ಮಾಡಿದೇನೆ. ಮೂರನೇ ಬಾರಿ ನನ್ನ ಗೆಲವು ನಿಶ್ಚಿತ ಎಂದು ಸಚಿವೆ ಶಶಿಕಲಾ ಜೊಲ್ಲೆ ಹೇಳಿದರು.

ಈ ಸಂಧರ್ಭದಲ್ಲಿ ರಾಜ್ಯಸಭೆ ಸದಸ್ಯ ಧನಂಜಯ ಮಹಾಡಿಕ,ಮಾಜಿ ಶಾಸಕ ಸುರೇಶ ಹಳವನ್ನವಕರ,ಸಂಸದ ಅಣ್ಣಾಸಾಹೇಬ ಜೊಲ್ಲೆ,ಸುರೇಶ ಅವಾಡೆ,ಬಸವಪ್ರಸಾದ ಜೊಲ್ಲೆ ಜ್ಯೋತಿಪ್ರಸಾದ ಜೊಲ್ಲೆ,ವಿಜಯ ರಾವುತ ಸೇರಿದಂತೆ ಹೆಚ್ಚಿನ ಸಂಖ್ಯೆಯಲ್ಲಿ ಬಿಜೆಪಿ ಕಾರ್ಯಕರ್ತರು ಉಪಸ್ಥಿತರಿದ್ದರು.

## ಇನ್ಮುಂದೆ ಎಲ್‌ಕೆಜಿ ಪ್ರವೇಶಕ್ಕೆ 4 ವರ್ಷ ವಯೋಮಿತಿ ನಿಗದಿ



ಬೆಂಗಳೂರು: ರಾಜ್ಯದ ಶಿಕ್ಷಣ ಇಲಾಖೆಯು ಪೂರ್ವ ಪ್ರಾಥಮಿಕ ತರಗತಿಗಳ ಪ್ರವೇಶಾತಿಗೆ ವಯೋಮಿತಿ ನಿಗದಿ ಮಾಡಿದ್ದು, ಆ ಪ್ರಕಾರ ಎಲ್‌ಕೆಜಿ ತರಗತಿಗೆ ಪ್ರವೇಶ ಕಲ್ಪಿಸಲು ಜೂನ್ 1ಕ್ಕೆ ಅನ್ವಯವಾಗುವಂತೆ 4 ವರ್ಷಗಳ ವಯೋಮಿತಿಯನ್ನು ನಿಗದಿ ಮಾಡಿದೆ. ಶಿಕ್ಷಣ ಹಕ್ಕು ಕಾಯ್ದೆ 2009 ಮತ್ತು ಕಡ್ಡಾಯ ಶಿಕ್ಷಣ ನಿಯಮಗಳು 2012 ರಂತೆ ಶೈಕ್ಷಣಿಕ ವರ್ಷದ ಜೂ.1ಕ್ಕೆ ಕಡ್ಡಾಯವಾಗಿ 6 ವರ್ಷ ಪೂರ್ಣಗೊಂಡಿರುವ ಮಗುವನ್ನು ಒಂದನೇ ತರಗತಿಗೆ ದಾಖಲಿಸಲು ವಯೋಮಿತಿಯನ್ನು ನಿಗದಿಪಡಿಸಿದೆ. ಈ ನಿಯಮವನ್ನು ರಾಜ್ಯದಲ್ಲಿ 2025–26ನೇ ಸಾಲಿನಿಂದ ಅನ್ವಯವಾಗುವಂತೆ ಜಾರಿಗೊಳಿಸಲು ಈಗಾಗಲೇ ಆದೇಶ ಹೊರಡಿಸಿದೆ. ಇದರಲ್ಲಿ ಯಾವುದೇ ಬದಲಾವಣೆ ಇಲ್ಲ ಎಂದು ತಿಳಿಸಿದೆ. ಈ ಹಿನ್ನೆಲೆಯಲ್ಲಿ 2023–24ನೇ ಸಾಲಿನಿಂದ ಎಲ್‌ಕೆಜಿ ತರಗತಿಗೆ ದಾಖಲಾಗಿ ಹೊಂದಲು 2023ರ ಜೂ.1ಕ್ಕೆ ಅನ್ವಯವಾಗುವಂತೆ 4 ವರ್ಷಗಳ ವಯೋಮಿತಿಯನ್ನು ನಿಗದಿ ಮಾಡಿ ಸಮಗ್ರ ಶಿಕ್ಷಣ ಕರ್ನಾಟಕದ ಯೋಜನಾ ನಿರ್ದೇಶಕರು ಜ್ಞಾಪನ ಪತ್ರ ಹೊರಡಿಸಿದ್ದಾರೆ. ಪಾಲಕರ ವಿರೋಧ: ಸರ್ಕಾರ ನಿಗದಿ ಮಾಡಿರುವ ವಯೋಮಿತಿಯನ್ನು ಪಾಲಕರು ವಿರೋಧ ವ್ಯಕ್ತಪಡಿಸಿದ್ದಾರೆ. ಶಾಲಾ ಪ್ರವೇಶಾತಿಯನ್ನು 6 ವರ್ಷಕ್ಕೆ ನಿಗದಿ ಮಾಡಿರುವುದರಿಂದ ಸಾಕಷ್ಟು ಸಮಸ್ಯೆಯಾಗಲಿದೆ. ಜೂನ್ ಮತ್ತು ಜುಲೈನಲ್ಲಿ ಜನಿಸಿರುವ ಮಕ್ಕಳು ಒಂದನೇ ತರಗತಿಗೆ ಪ್ರವೇಶ ಪಡೆಯಲು ಮತ್ತೊಂದು ವರ್ಷ ವ್ಯರ್ಥವಾಗಿ ಕಾಯಬೇಕಾಗುತ್ತದೆ. ಈ ಹಿನ್ನೆಲೆಯಲ್ಲಿ ಹಿಂದೆ ಇದ್ದ 5.5 ವರ್ಷದಿಂದ 7 ವರ್ಷಗಳ ವಯೋಮಿತಿಯು ವೈಜ್ಞಾನಿಕವಾಗಿದೆ. ಈಗ ರೂಪಿಸಿರುವ ನಿಯಯವು ಅವೈಜ್ಞಾನಿಕವಾಗಿದ್ದು, ಮಕ್ಕಳ ಸ್ನೇಹಿಯಾಗಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

## ಮಹಾ ಡಿಸಿಎಂ ಫಡ್ನವಿಸ್ಗೆ ಕಪ್ಪು ಬಾವುಟ ಪ್ರದರ್ಶಿಸಿದ ಎಂಇಎಸ್



ಬೆಳಗಾವಿ: ಮಹಾರಾಷ್ಟ್ರ ಡಿಸಿಎಂ ದೇವೇಂದ್ರ ಫಡ್ನವಿಸ್ ಕಾರ್ಯಕ್ರಮದಲ್ಲಿ ನಾಡದ್ರೋಹಿ ಎಂಇಎಸ್ ಕಾರ್ಯಕರ್ತರು ಮಹಾ ಡಿಸಿಎಂ ದೇವೇಂದ್ರ ಫಡ್ನವೀಸ್ ವಿರುದ್ಧ ಘೋಷಣೆ ಕೂಗಿ ಕಪ್ಪು ಬಾವುಟ ಪ್ರದರ್ಶಿಸಿದ್ದಾರೆ.

ಮಹಾರಾಷ್ಟ್ರದ ಕಾಂಗ್ರೆಸ್, ಬಿಜೆಪಿ ನಾಯಕರಿಗೆ ಕಪ್ಪು ಬಾವುಟ ತೋರಿಸಲು ಶಿವಸೇನೆ ಮುಖಂಡ ಸಂಜಯ್ ರಾವತ್ ನಿನ್ನೆ(ಮೇ 3) ಬೆಳಗಾವಿಯಲ್ಲಿ ಕರೆ ನೀಡಿದ್ದರು.

ಬೆಳಗಾವಿಯ ತಿಲಕ್ ಚೌಕ್ ನಲ್ಲಿ ಉತ್ತರ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ರವಿ ಪಾಟೀಲ್ ಪರ ಮಹಾರಾಷ್ಟ್ರ ಡಿಸಿಎಂ ದೇವೇಂದ್ರ ಫಡ್ನವಿಸ್ ಪ್ರಚಾರಕ್ಕೆ ಬಂದಾಗ ಅವರಿಗೆ ಎಂಇಎಸ್ ಕಾರ್ಯಕರ್ತರು ಕಪ್ಪು ಬಾವುಟ ತೋರಿಸಿದ್ದಾರೆ. ಹಾಗೂ ಅವರ ವಿರುದ್ಧ ಘೋಷಣೆ ಕೂಗಿದ್ದಾರೆ.

ಎಂಇಎಸ್ ಅಭ್ಯರ್ಥಿಗಳ ವಿರುದ್ಧ ಮಹಾರಾಷ್ಟ್ರ ನಾಯಕರ ಪ್ರಚಾರಕ್ಕೆ ನಾಡದ್ರೋಹಿ ಎಂಇಎಸ್ ಪುಂಡರು ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಎಂಇಎಸ್ ಕಾರ್ಯಕರ್ತರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.

ಇನ್ನು ಬೆಳಗಾವಿಯ ಉತ್ತರ ಕ್ಷೇತ್ರದಲ್ಲಿ ಮಹಾರಾಷ್ಟ್ರ ಡಿಸಿಎಂ ದೇವೇಂದ್ರ ಫಡ್ನವಿಸ್ ನೇತೃತ್ವದಲ್ಲಿ ಬಿಜೆಪಿ ಪ್ರಚಾರ ಸಭೆ ನಡೆದಿದೆ. ಸಭೆಯಲ್ಲಿ ಸಂಸದೆ ಮಂಗಲ ಅಂಗಡಿ, ಶಾಸಕ ಅನಿಲ್ ಬೆನಕೆ, ಶಂಕರಗೌಡ ಪಾಟೀಲ, ಬೆಳಗಾವಿ ಉತ್ತರ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಡಾ. ರವಿ ಪಾಟೀಲ ಭಾಗಿಯಾಗಿದ್ರು. ಸ್ಥಳದಲ್ಲಿ ಪೊಲೀಸ್ ಬಿಗಿ ಭದ್ರತೆ ಕೈಗೊಳ್ಳಲಾಗಿದ್ದು ವೇದಿಕೆ ಸುತ್ತಲೂ ಬ್ಯಾರಿಕೇಡ್ ಅಳವಡಿಸಲಾಗಿದೆ.

## ಮತ ಚಲಾಯಿಸಿ ಅರ್ಧ ಗಂಟೆಯಲ್ಲೇ ಅಸುನೀಗಿದ 82 ವರ್ಷದ ವೃದ್ಧೆ



ರಾಯಚೂರು: ರಾಜ್ಯ ವಿಧಾನಸಭೆ ಚುನಾವಣೆಗೆ ಬ್ಯಾಲೆಟ್ ಪೇಪರ್ ಮೂಲಕ ಮನೆಯಿಂದಲೇ ಮತದಾನ ಮಾಡಿದ ನಂತರ ಅರ್ಧ ಗಂಟೆಯಲ್ಲಿ ವೃದ್ಧೆಯೊಬ್ಬರು ಮೃತಪಟ್ಟಿರುವ ಘಟನೆ ಜಿಲ್ಲೆಯ ಸಿಂಧನೂರು ತಾಲ್ಲೂಕಿನಲ್ಲಿ ನಡೆದಿದೆ. ಮೃತ ವೃದ್ಧೆ ಅಲಬನೂರು ಗ್ರಾಮದ 82 ವರ್ಷದ ಮಂಗಮ್ಮ ಎಂದು ತಿಳಿದುಬಂದಿದೆ. ವಯೋ ಸಹಜ ಖಾಯಿಲೆಯಿಂದ ಬಳಲುತ್ತಿದ್ದರು. ಈ ಬಾರಿ ಚುನಾವಣಾ ಆಯೋಗ 80 ವರ್ಷ ಮೇಲ್ಪಟ್ಟವರಿಗೆ ಮನೆಯಿಂದಲೇ ಮತದಾನ ಮಾಡುವ ಅವಕಾಶ ಕಲ್ಪಿಸಿಕೊಟ್ಟಿತ್ತು. ಅದರಂತೆ ನಿನ್ನೆ ಮಂಗಮ್ಮ ಅವರ ಮನೆಗೆ ಚುನಾವಣಾ ಸಿಬ್ಬಂದಿ ತೆರಳಿದ್ದರು. ಮಂಗಮ್ಮ ಅವರ ಮನೆಗೆ ಪಿಆರ್‌ಓ ದಿನೇಶ ಕೆಪಿ ಹಾಗೂ ಎಪಿಆರ್‌ಓ ಬಸಪ್ಪ ಹೆಚ್ ಹಾಗೂ ಇತರ ಸಿಬ್ಬಂದಿ ತೆರಳಿದ್ದರು. 349 ಸಂಖ್ಯೆಯ ಮತಪತ್ರವನ್ನು ಮಂಗಮ್ಮ ಅವರಿಗೆ ನೀಡಲಾಗಿತ್ತು. ಮಧ್ಯಾಹ್ನ ಸುಮಾರು 12.19ರ ವೇಳೆಗೆ ಮಂಗಮ್ಮ ಮತದಾನ ಮಾಡಿದ್ದು ನಂತರ ಮಧ್ಯಾಹ್ನ 12.50ಕ್ಕೆ ಮೃತಪಟ್ಟಿದ್ದಾರೆ ಎಂದು ವರದಿಯಾಗಿದೆ.

## ಐಟಿ ದಾಳಿ: ಗಿಡದಲ್ಲಿ 1 ಕೋಟಿ ರೂ. ಪತ್ತೆ

ಮೈಸೂರು: ಪುತ್ತೂರಿನ ಕಾಂಗ್ರೆಸ್ ಶಾಸಕ ಅಶೋಕ್ ರೈ ಅವರ ಸಂಬಂಧಿಕರೊಬ್ಬರ ಮನೆ ಮೇಲೆ ಐಟಿ ಅಧಿಕಾರಿಗಳು ದಾಳಿ ನಡೆಸಿದ್ದು,

ದಾಳಿ ವೇಳೆ ಮನೆಯ ಆವರಣದಲ್ಲಿರುವ ಅಲಂಕಾರಿಕ ಗಿಡದಲ್ಲಿ ನೇತು ಹಾಕಿದ್ದ ಬಾಕ್ಸ್'ನಲ್ಲಿ ರೂ.1 ಕೋಟಿ ಪತ್ತೆಯಾಗಿರುವುದನ್ನು ಕಂಡು ಶಾಕ್ ಆಗಿದ್ದಾರೆ.

ಸುಬ್ರಹ್ಮಣ್ಯ ರೈ ಅವರ ಮೈಸೂರಿನ ಮನೆಯ ಮುಂದೆ ಅಲಂಕಾರಿಕ ಗಿಡವಿದ್ದು, ಈ ಗಿಡದಲ್ಲಿ ಮಾವಿನ ಹಣ್ಣುಗಳನ್ನು ಪ್ಯಾಕ್ ಮಾಡುವ ರೀತಿಯ ಬಾಕ್ಸ್ ಗಳನ್ನು ನೇತು ಹಾಕಲಾಗಿದೆ. ಆರಂಭದಲ್ಲಿ ಅಧಿಕಾರಿಗಳು ಇದನ್ನು ನಿರ್ಲಕ್ಷಿಸಿದ್ದರು.

ಆದರೆ, ನಂತರ ಅನುಮಾನದ ಮೇಲೆ ಬಾಕ್ಸ್ ಗಳನ್ನು ಪರಿಶೀಲನೆ ನಡೆಸಿದ್ದು, ಈ ವೇಳೆ ಬಾಕ್ಸ್ ನಲ್ಲಿ ರೂ.1 ಕೋಟಿ ನಗದು ಪತ್ತೆಯಾಗಿರುವುದನ್ನು ಕಂಡು ಶಾಕ್ ಆಗಿದ್ದಾರೆ. ನಂತರ ಈ ಹಣವನ್ನು ವಶಕ್ಕೆ ಪಡೆದುಕೊಂಡಿದ್ದಾರೆ.

## ಕನ್ನಡದ ಖ್ಯಾತ ಹಿರಿಯ ನಟ ಶರತ್ ಬಾಬು ಇನ್ನಿಲ್ಲ



ಹೈದ್ರಾಬಾದ್: ಅನಾರೋಗ್ಯ ದಿಂದ ಬಳಲುತ್ತಿದ್ದ ಜನಪ್ರಿಯ ಹಿರಿಯ ನಟ ಶರತ್ ಬಾಬು ಅವರು ಇಂದು ಚಿಕಿತ್ಸೆ ಫಲಕಾರಿಯಾಗಿದೇ ಹೈದರಾಬಾದ್‌ನ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾಗಿದ್ದಾರೆ ಎನ್ನುವ ಮಾಹಿತಿ ಲಭ್ಯವಾಗಿದೆ.

ಕನ್ನಡ ಸೇರಿ ತಮಿಳು ಮತ್ತು ತೆಲುಗು ಭಾಷೆಗಳಲ್ಲಿ 200ಕ್ಕೂ ಹೆಚ್ಚು ಚಿತ್ರಗಳಲ್ಲಿ ನಟಿಸಿರುವ ಜನಪ್ರಿಯ ನಟ ಶರತ್ ಬಾಬು ಅವರು ಅನಾರೋಗ್ಯದ ಕಾರಣ ಕಳೆದ ತಿಂಗಳು 20 ರಂದು ಹೈದರಾಬಾದ್‌ನ ಖಾಸಗಿ ಆಸ್ಪತ್ರೆಗೆ ದಾಖಲಾಗಿದ್ದರು.


ಲಿವರ್, ಕಿಡ್ನಿ, ಶ್ವಾಸಕೋಶಗಳಿಗೆ ತೊಂದರೆಯಾಗಿದ್ದು, ದೇಹದ ಅಂಗಾಂಗಗಳು ಉರಿಯೂತಕ್ಕೆ ತುತ್ತಾಗಿದ್ದವು ಎಂದು ವೈದ್ಯರು ತಿಳಿಸಿದ್ದಾರೆ.

# ರೈತ ಈಗ ಅನ್ನದಾತ ಅಷ್ಟೇ ಅಲ್ಲಾ, ಉರ್ಜಾದಾತನೂ ಆಗಲಿದ್ದಾನೆ: ಕೇಂದ್ರ ಸಚಿವ ನಿತಿನ ಗಡಕರಿ

ಬೆಳಗಾವಿ: ಭಾರತ ದೇಶದ ರೈತರು ಅನ್ನದಾತನಾಗಿದ್ದು, ಅದರೊಂದಿಗೆ ಈ ಮುಂದೆ ಉರ್ಜಾದಾತನೂ ಆಗಲಿದ್ದಾನೆ. ರೈತರು ಬೆಳೆದ ಕಬ್ಬಿನ ಬೆಳೆಯಲ್ಲಿಯ ಸಕ್ಕರೆದೊಂದಿಗೆ ಇಥೆನಾಲ್ ಉತ್ಪಾದನೆ ಮಾಡಲಾಗುತ್ತಿದೆ. ದೇಶದಲ್ಲಿ 16 ಸಾವಿರ ಕೋಟಿ ಪೆಟ್ರೋಲ್ ಹಾಗೂ ಡಿಜೆಲ್ ಆಮದ ಮಾಡಲು ವೆಚ್ಚವಾಗುತ್ತಿದೆ. ಇದರಲ್ಲಿ 20% ಇಥೆನಾಲ್ ಬಳಿಸಲಾಗುತ್ತಿದ್ದರಿಂದ 40 ಸಾವಿರ ಕೋಟಿ ರೂ. ದೇಶದಲ್ಲಿ ಉಳಿತಾಯವಾಗುತ್ತಿದೆ. ಇದ್ದರಿಂದ ರೈತ ಅನ್ನದಾತನೊಂದಿಗೆ ಉರ್ಜಾದಾತನೂವಾಗಿದ್ದಾನೆ ಎಂದು ಕೇಂದ್ರದ ರಸ್ತೆ ಸಾರಿಗೆ ಮತ್ತು ಹೆದ್ದಾರಿಗಳ ಸಚಿವರಾದ ನಿತಿನ ಗಡಕರಿ ಉಗಾರದಲ್ಲಿ ಹೇಳಿದರು.

ಬುಧವಾರ ಸಂಜೆ ಉಗಾರ ಖುರ್ದ ಪಟ್ಟಣದಲ್ಲಿ ಬಿಜೆಪಿ ಪಕ್ಷದ ಅಭ್ಯರ್ಥಿ ಶ್ರೀಮಂತ ಪಾಟೀಲರ ಪರ ಮತಯಾಚಿಸಲು ಸಚಿವರಾದ ನಿತಿನ ಗಡಕರಿಯವರು ಆಗಮಿಸಿ ಮಾತನಾಡಿದರು.

ದೇಶದ ಪ್ರಧಾನಿ ನರೇಂದ್ರ ಮೋದಿಜಿ ಭಾರತ ದೇಶ ಬಲಾಡ್ಯ ದೇಶವಾಗಿ ಮಾಡುವ ಗುರಿಯಿಟ್ಟಿದ್ದಾರೆ. ಕರ್ನಾಟಕ ರಾಜ್ಯದಲ್ಲಿ ಮತ್ತು ಕೇಂದ್ರದಲ್ಲಿ ಬಿಜೆಪಿ ಸರಕಾರಯಿದಿದ್ದರಿಂದ ಡಬಲ್ ಇಂಜಿನ್ ಸರಕಾರ ಸಾಕಷ್ಟು ಅಭಿವೃದ್ಧಿ ಮಾಡಿದೆ. ಈ ಮುಂದೆಯೂ ಮಾಡಲು ಬಿಜೆಪಿ ಪಕ್ಷಕ್ಕೆ ಮತಚಲಾಯಿಸಿ ಶಕ್ತಿ ತುಂಬಿ–ರಿಯೆಂದು ಹೇಳಿ ಕಾಗವಾಡ ಕ್ಷೇತ್ರದ ಅಭ್ಯರ್ಥಿ ಹಾಗೂ ಶಾಸಕ ಶ್ರೀಮಂತ ಪಾಟೀಲ ಬಿಎಸ್ಸಿ ಪದವಿಧರರಾಗಿದ್ದು, ರೈತನ ಮಗನಾಗಿದ್ದಾರೆ. ಇವರಿಗೆ ಎಲ್ಲ ಆಗುಹೋಗುಗಳ ಸಂಪೂರ್ಣ ಮಾಹಿತಿವಿದೆ. ಈಗಾಗಲೇ ಮೂರು ಸಾವಿರ ಕೋಟಿ ರೂ. ಅನುದಾನ ತಂದು ಕ್ಷೇತ್ರ



ಅಭಿವೃದ್ಧಿ ಮಾಡಿದ್ದಾರೆ. ಬಸವೇಶ್ವರ ಎತ ನೀರಾವರಿ ಯೋಜನೆ ಚಾಲನೆಗೊಂಡರೆ ಲಕ್ಷಾಂತರ ರೈತರಿಗೆ ಅನುಕೂಲವಾಗಲಿದೆ. ಇಂಥಹ ಜನಪ್ರೀಯ ಶಾಸಕರನ್ನು ಆಯ್ಕೆಮಾಡಿ ಕ್ಷೇತ್ರದ ಅಭಿವೃದ್ಧಿ ಕೈಗೊಳ್ಳಿ–ರಿಯೆಂದು ಸಚಿವರು ಸಂದೇಶ ನೀಡಿದರು.

ಸಚಿವ ನಿತಿನ ಗಡಕರಿಯವರು ಪ್ರಾರಂಭದಲ್ಲಿ ಕನ್ನಡದಲ್ಲೇ ಮಾತನಾಡಿ ಜನರ ಮನಗೆದ್ದರು. ಅದರೊಂದಿಗೆ ಹಿಂದಿ ಹಾಗೂ ಮರಾಠಿ ಭಾಷೆಯಲ್ಲಿ ದೇಶದ ರಸ್ತೆ ಸಾರಿಗೆಯೂ ಹೇಗೆ ಅಭಿವೃದ್ಧಿಯಾಗುತ್ತಿದ್ದ ಬಗ್ಗೆ ಮಾಹಿತಿ ನೀಡಿ, ಅಥಣಿ, ಮುರಗುಂಡಿ, ಕಾಗವಾಡ, ಚಿಕ್ಕೋಡಿ ರಾಜ್ಯ ಹೆದ್ದಾರಿ ಮಂಜೂರುಮಾಡಿದ್ದ ಬಗ್ಗೆ ಮಾಹಿತಿ ನೀಡಿದರು.ಶಾಸಕ ಶ್ರೀಮಂತ ಪಾಟೀಲರು ಮಾತನಾಡಿ, ನನ್ನ ರಾಜಕೀಯ ಜೀವನದಲ್ಲಿ ಯಾವುದೇ ಜಾತಿಯ ರಾಜ–ಕಾರಣ ಮಾಡಿಲ್ಲಾ. ಎಲ್ಲರನ್ನು ಒಗ್ಗುಡಿಸಿ ಅಭಿವೃದ್ಧಿಯನ್ನು ಸಾಧಿಸುತ್ತಿದ್ದೇನೆ.

ಕ್ಷೇತ್ರದ ಜನತೆ ಒಂದು ಕುಟುಂಬವಿದ್ದಂತೆ. ಯಾವ ತರಹ ನನ್ನ ಮಕ್ಕಳ ಪ್ರೀತಿ ಮಾಡುತ್ತೇನೆ, ಅದೇ ರೀತಿ ನನ್ನ ಮತದಾರರನ್ನು ದೇವರೆಂದು ಕಂಡಿದ್ದೇನೆ. ಕ್ಷೇತ್ರದ ಅಭಿವೃದ್ಧಿ ಈ ವರೆಗೆ 3 ಸಾವಿರ ಕೋಟಿ ರೂ. ಅನುದಾನ ತಂದಿದ್ದೇನೆ. ಇದನ್ನು ಗಮನಿಸಿದ ಮತದಾರರು ಯಾವುದಕ್ಕೆ ಹೆದರಬೇಡಿ, ನಾವು ಬೆನ್ನಿಗೆ ನಿಂತಿ–ದ್ದೇವೆಯೆಂದು ಭರವಸೆ ನೀಡುತ್ತಿದ್ದಾರೆ. ಈ ಕಾರಣ ನನ್ನ ಯಶ ಖಚಿತವೆಂದು ಶ್ರೀಮಂತ ಪಾಟೀಲರು ಹೇಳಿದರು. ಕಾರ್ಯಕ್ರಮದಲ್ಲಿ ಬಿಜೆಪಿ ಪಕ್ಷದ ಧುರಿಣರಾದ ಶೀತಲಗೌಡ ಪಾಟೀಲ, ನ್ಯಾಯವಾದಿ ಅಭಯಕುಮಾರ ಅಕಿವಾಟೆ, ಶಿವಾನಂದ ಪಾಟೀಲ ಹಾಗೂ ಶ್ರೀಮತಿ ನಂದಿಣಿ ಘರಾಕಟ್ಟೆ ಮಾತನಾಡಿ, ಕಾಗವಾಡ ಕ್ಷೇತ್ರದ ಶಾಸಕರು ನಮ್ಮ ಪಕ್ಷಕ್ಕೆ ಲಭಿಸಿದ ಅಪರೂಪದ ಶಾಸಕರು. ಇವರ ಪರ ಎಲ್ಲರು ನಿಂತು ಇನ್ನೊಮ್ಮೆ ನಮ್ಮ ಕ್ಷೇತ್ರದ ಅಭಿವೃದ್ಧಿಗಾಗಿ ಇವರನ್ನು ಆಯ್ಕೆಮಾಡೋಣವೆಂದು ಶಪಥ ಮಾಡಿದರು. ಕಾರ್ಯಕ್ರಮದಲ್ಲಿ ಮಹಾರಾಷ್ಟ್ರದ ಮಾಜಿ ಸಚಿವ ಜಯಕುಮಾರ ರಾವತ್, ಶಾಸಕರ ಧರ್ಮಪತ್ನಿ ಉಜ್ವಲಾತಾಯಿ ಪಾಟೀಲ, ಶೀತಲ ಪಾಟೀಲ, ದುಂಡಪ್ಪಾ ಭೆಂಡವಾಡೆ, ನಿಂಗಪ್ಪಾ ಖೋಕಲೆ, ಉತ್ತಮ ಪಾಟೀಲ, ಸುಶಾಂತ ಪಾಟೀಲ, ಅಪ್ಪಾಸಾಹೇಬ ಅವತಾಡೆ, ಸೇ–ರಿದಂತೆ ಸಾವಿರಾರು ಕಾರ್ಯಕರ್ತರು ಸಭೆಯಲ್ಲಿ ಉಪಸ್ಥಿತರಿದ್ದು, ಶಕ್ತಿಪ್ರದರ್ಶನೆ ಮಾಡಿದರು.

## ಜನರಿಂದ ತಿಂದ ಹಣವನ್ನೇ ಚುನಾವಣೆಯಲ್ಲಿ ಹಂಚುತ್ತಿರುವ ಬಿಜೆಪಿ–ಕಾಂಗ್ರೆಸ್: ಎಚ್.ಡಿ. ಕುಮಾರಸ್ವಾಮಿ ಆಕ್ರೋಶ

ರಾಯಬಾಗ: "ಬಿಜೆಪಿ ಹಾಗೂ ಕಾಂಗ್ರೆಸ್ ನವರು ಜನರ ಹಣ ತಿಂದು ಅದೇ ಹಣದಲ್ಲಿ ಚುನಾವಣೆಯಲ್ಲಿ ಹಂಚಲು ಮುಂದಾಗಿದ್ದಾರೆ" ಎಂದು ಮಾಜಿ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮೀ ಅಕ್ರೋಶ ವ್ಯಕ್ತಪಡಿಸಿದ್ದಾರೆ.

ರಾಯಬಾಗ ಪಟ್ಟಣದಲ್ಲಿ ರಾಯಬಾಗ, ಕುಡಚಿ ವಿಧಾನಸಭಾ ಕ್ಷೇತ್ರದ ಜೆಡಿಎಸ್ ಪಕ್ಷದ ಸಮಾವೇಶ ಉದ್ಘಾಟಿಸಿ ಮಾತನಾಡಿ, "ಸ್ವಾತಂತ್ರ್ಯ ಬಂದು 75 ವರ್ಷವಾದರೂ ಜನರ ಬಡತನ ಹೋಗಲಾಡಿಸಲು ಆಗಿಲ್ಲ. ಹಣ ನೀಡಿ ಚುನಾವಣೆ ಮಾತ್ರ ಮಾಡುತ್ತಿದ್ದಾರೆ. ಇದಕ್ಕೆಲ್ಲ ಬ್ರೇಕ್ ಹಾಕಲು ನಾನು ಬಂದಿದ್ದೇನೆ. ಜನರು ನಿರಾಳವಾಗಿ ಜೀವನ ಸಾಗಿಸುವ ಸಲುವಾಗಿ ಕಾರ್ಯ ಮಾಡುತ್ತೇನೆ" ಎಂದರು.

ಬಿಜೆಪಿ ಸರ್ಕಾರದಲ್ಲಿ ರಸಗೊಬ್ಬರ ತುಟ್ಟಿಯಾಗಿದೆ.



ಅದನ್ನು ಸರಿಪಡಿಸಿ ಕಡಿಮೆ ಮಾಡಲಾಗುವುದು.

ಭೂಮಿ ಇಲ್ಲದವರಿಗೆ ಕೃಷಿ ಕಾರ್ಮಿಕರಿಗೆ 2 ಸಾವಿರ ರೂ. ನೀಡುವುದು, ಹೊಸ ಬಡಾವಣೆಗಳಿಗೆ ಪುನರ್ವಸತಿ ಕೊಟ್ಟು, ಯಾರಿಗೆ ಮನೆ ಇಲ್ಲ ಅವರಿಗೆ 5 ಲಕ್ಷ ರೂಪಾಯಿ ವೆಚ್ಚದಲ್ಲಿ ಮನೆ ಮಂಜೂರು ಮಾಡಲಾಗುವುದು, ವೃದ್ಧಾಪ–ರಿಗೆ, ವಿಧವೆಯರಿಗೆ ಹೆಚ್ಚಿನ ಮಾಸಿಕ ಹೆಚ್ಚಿನ ಹಣ ನೀಡಲಾಗುವುದು. ಆರೋಗ್ಯ ಸಮಸ್ಯೆ ಬಂದರೆ 40 –50 ಲಕ್ಷ ರೂ. ಖರ್ಚು ಬಂದರೂ ಸರ್ಕಾರ ಕಟ್ಟುತ್ತದೆ. ಹೀಗೆ ಹತ್ತು ಹಲವು ಯೋಜನೆಗಳು ಜಾರಿಗೆ ತರಲಾಗುವುದು" ಎಂದರು.

ರಾಜ್ಯದಲ್ಲಿ ರಮ್ಮಿ ಬ್ಯಾನ್ ಮಾಡಲಾಗು ವುದು. ಯುವಕರು ರಮ್ಮಿ ಆಟವನ್ನು ಆಡಿ ಕುಟುಂಬಗಳು ಸರ್ವನಾಶವಾಗುತ್ತಿವೆ.

ಜೂಜಾಟ ಗಳಿಗೆ ಸಂಬಂಧಿಸಿದವು ಗಳನ್ನು ನಿಷೇಧಿಸಲಾಗುವುದು" ಎಂದು ಅವರು ಹೇಳಿದರು.

ರಾಯಬಾಗ ವಿಧಾನಸಭಾ ಕ್ಷೇತ್ರದ ಹನುಮಾನ ಕರಗಾಂವ, ಬೆಂಡವಾಡ ಯೋಜನೆ ಮಂಜೂರು ಮಾಡಲಾಗುವುದು, ಪ್ರತಿಯೊಂದು ಗ್ರಾಮಗಳಿಗೆ ಹೈಟೆಕ್ ಸರ್ಕಾರಿ ಆಸ್ಪತ್ರೆ ಮಂಜೂರು ಮಾಡಲಾಗುವುದು. ಯಾವುದೇ ಸಮಸ್ಯೆಗಳನ್ನು ಉಳಿಯದಂತೆ ನೋಡಿಕೊಳ್ಳುವ ಜವಾಬ್ದಾರಿ ನನ್ನದು. ಚುನಾವಣೆಯಲ್ಲಿ ರಾಯಬಾಗ, ಕುಡಚಿ ಕ್ಷೇತ್ರ ಗೆಲುವು ಸಾಧಿಸಿದರೆ ದತ್ತು ತೆಗೆದುಕೊಳ್ಳುತ್ತೇನೆ" ಎಂದು ಕುಮಾರಸ್ವಾಮಿ ಹೇಳಿದರು.

ಪ್ರದೀಪಕುಮಾರ ಮಾಳಗಿ ಮಾತನಾಡಿ, "ಇದು ನನ್ನ ಕೊನೆ ಚುನಾವಣೆ. 10 ವರ್ಷ ಸೇವೆ ಸಲ್ಲಿಸಿದ್ದೇನೆ. ನನಗೆ ಈ ಸಲ ಆರಿಸಿ ತನ್ನಿ. ಬೇರೆಯವರು ಚುನಾವಣೆಯಲ್ಲಿ ಕೊಂಡು ತೆಗೆದುಕೊಳ್ಳುತ್ತೇನೆ ಎಂದು ಹೇಳುತ್ತಾರೆ. ನನ್ನ ಹತ್ರ ಹಣ ಇಲ್ಲ. ನಿಮ್ಮಲ್ಲಿ ಭಿಕ್ಷೆ ಬೇಡುತ್ತಿದ್ದೇನೆ" ಎಂದರು.

ಜೆಡಿಎಸ್ ರಾಷ್ಟ್ರೀಯ ಉಪಾಧ್ಯಕ್ಷ ಪ್ರತಾಪರಾವ್ ಪಾಟೀಲ ಮಾತನಾಡಿ, "ಜೆಡಿಎಸ್ ಗೆಲುವು ಸಾಧಿಸಿದರೆ ಮುಂದಿನ ದಿನಗಳಲ್ಲಿ ಸಂಘಸಂಸ್ಥೆಗಳ ಸಾಲ ಮನ್ನಾ ಆಗಲಿದೆ.

ಹಾಗಾಗಿ ಎಲ್ಲರೂ ಜೆಡಿಎಸ್ ಗೆ ಬೆಂಬಲಿಸಿ ಅಭ್ಯರ್ಥಿಗಳನ್ನು ಗೆಲ್ಲಿಸಬೇಕು" ಎಂದರು.

## ಬೆಳಗಾವಿ ದಕ್ಷಿಣ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಅಭಯ ಪಾಟೀಲ ಪರ ಮಹಾರಾಷ್ಟ್ರದ ಉಪಮುಖ್ಯಮಂತ್ರಿ ದೇವೆಂದ್ರ ಫಡ್ನವೀಸ್ ಪ್ರಚಾರ ಸಭೆ




ಬೆಳಗಾವಿ: ದಕ್ಷಿಣ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಅಭಯ ಪಾಟೀಲ ಪರ ಮಹಾರಾಷ್ಟ್ರದ ಉಪಮುಖ್ಯಮಂತ್ರಿ ದೇವೆಂದ್ರ ಫಡ್ನವೀಸ್ ಪ್ರಚಾರ ಸಭೆ ನಡೆಸಿ ಅಭಯ ಪಾಟೀಲರನ್ನು ಆಯ್ಕೆ ಮಾಡಿ ಎಂದು ಮನವಿ ಮಾಡಿದರು. .

ಬೆಳಗಾವಿ ದಕ್ಷಿಣ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಅಭಯ ಪಾಟೀಲರ ಪರ ಸಾರ್ವಜನಿಕ ಸಭೆಯಲ್ಲಿ ಮಾತನಾಡಿದ ದೇವೇಂದ್ರ ಪಡ್ನವಿಸ್ ಮೋದಿ ಸರ್ಕಾರದಿಂದ ದೇಶದ ಅಭಿವೃದ್ಧಿ ಹೊಂದಿದೆ,


ಇಂದು ನಮ್ಮ ಆರ್ಥಿಕತೆಯ ಬೆಳವಣಿಗೆ ವೇಗವನ್ನು ಪರಿಗಣಿಸಿದರೆ 2030 ರ ವೇಳೆಗೆ ಭಾರತವು ವಿಶ್ವದ ಮೂರನೇ ಅತಿದೊಡ್ಡ ಆರ್ಥಿಕತೆಯಾಗಲಿದೆ ಎಂದು ಹೇಳಿದರು.

ಹಣ ಫಲಾನುಭವಿಗಳಿಗೆ ತಲುಪುವವರೆಗೆ ಯಾವುದೇ ಯೋಜನೆಯಲ್ಲಿ 85% ಭ್ರಷ್ಟಾಚಾರ ಸಂಭವಿಸುತ್ತದೆ ಎಂದು ಸ್ವತಃ ಕಾಂಗ್ರೆಸ್ ಪ್ರಧಾನಿಯೆ ಹೇಳಿದ್ದರು ಆದ–'ರೆ ಈ ವ್ಯವಸ್ಥೆಯನ್ನು ಮೋದಿಯವರು ಬದಲಾಯಿಸಿದ್ದಾರೆ ಎಲ್ಲಾ ಯೋಜನೆಗಳ ನೇರವಾಗಿ ಫಲಾನುಭವಿಯ ಖಾತೆಗೆ ಠೇವಣಿ ಮಾಡಲಾಗುತ್ತದೆ. ಹೀಗಾಗಿ ಯೋಜನೆಯಲ್ಲಿನ ಭ್ರಷ್ಟಾಚಾರ ನಿಂತಿದೆ ಎಂದು ಹೇಳಿದರು.

ಮೋದಿ ದೇಶದ ಆರ್ಥಿಕತೆಯಲ್ಲಿ ಅಗಮ್ಯವಾದ ಬದಲಾವಣೆ ತಂದಿದ್ದಾರೆ. ಕಳೆದ ಎರಡು ವರ್ಷಗಳ ಕರೋನಾ ಅವಧಿಯಲ್ಲಿ, ಮೋದಿ ದೇಶ ನಿರ್ಮಿತ ಲಸಿಕೆಯನ್ನು 130 ಕೋಟಿ ಜನರಿಗೆ ಉಚಿತವಾಗಿ ನೀಡಿದರು. ಅಲ್ಲದೆ ಲಸಿಕೆಯನ್ನುಇತರ 40 ದೇಶಗಳಿಗೂ ನೀಡಲಾಯಿತು ಎಂದರು.ಮೋದಿಯವರು ದೇಶಕ್ಕೆ ಸ್ವಾವಲಂಬನೆ ಪ್ಯಾಕೇಜ್ ನೀಡಿದರು. ಕೋವಿಡ್ ನಂತರ ವಿಶ್ವದ ಎಲ್ಲಾ ದೇಶಗಳು ಆರ್ಥಿಕ ಹಿಂಜರಿತದ ಹಾದಿ ಹಿಡಿದಿವೆ. ಆದ–'ರೆ ಪ್ರಧಾನಿ ಮೋದಿಯವರಿಂದಾಗಿ ಭಾರತದ ಆರ್ಥಿಕತೆ ಕುಸಿಯಲಿಲ್ಲ ಎಂದು ಹೇಳಿದರು.

ಕರ್ನಾಟಕ ದೊಡ್ಡ ಮಟ್ಟದಲ್ಲಿ ಅಭಿವೃದ್ಧಿಯಾಗಬೇಕಾದರೆ ಡಬಲ್ ಇಂಜಿನ್ ಸರ್ಕಾರ ಅಧಿಕಾರದಲ್ಲಿರಬೇಕು. ಇದು ಕರ್ನಾಟಕದ ಅಭಿವೃದ್ಧಿಗೆ ವೇಗ ನೀಡಲಿದೆ ಎಂದರು. ಇದಕ್ಕಾಗಿ ಅಭಯ ಪಾಟೀಲ ಅವರಿಗೆ ಆಶೀರ್ವಾದ ಮಾಡುವ ಮೂಲಕ ಬಿಜೆಪಿ ಅಧಿಕಾರಕ್ಕೆ ತರುವಂತೆ ಮನವಿ ಮಾಡಿದರು.

## ಟ್ರಕ್–ಕಾರ್ ಅಪಘಾತ: 11 ಜನ ಸಾವು



ರಾಯಪುರ: ಎಸ್‌ಯುವಿ ಕಾರು ಟ್ರಕ್‌ವೊಂದಕ್ಕೆ ಡಿಕ್ಕಿ ಹೊಡೆದ ಪರಿಣಾಮ ಐವರು ಮಹಿಳೆಯರು, ಇಬ್ಬರು ಮಕ್ಕಳು ಸೇರಿದಂತೆ 11 ಜನ ಸಾವನ್ನಪ್ಪಿರುವ ಘಟನೆ ಛತ್ತಿಸ್‌ಗಢದ ಬಲೋದ್ ಜಿಲ್ಲೆಯಲ್ಲಿ ಬುಧವಾರ ರಾತ್ರಿ ನಡೆದಿದೆ.

ಮೃತರು ಧಮತರಿ ಜಿಲ್ಲೆಯ ಸೋರಂ–ಭಟ್‌ಗಾಂವ್ ಗ್ರಾಮದ ನಿವಾಸಿಗಳಾಗಿದ್ದು, ಮದುವೆ ನಿಮಿತ್ತ ಕಂಕೇರ್ ಜಿಲ್ಲೆಯ ಮರ್ಕಟೋಲಾ ಗ್ರಾಮಕ್ಕೆ ತೆರಳುತ್ತಿದ್ದರು ಎನ್ನಲಾಗಿದೆ. ಈ ವೇಳೆ ಜಾಗ್ತಾರಾ ಗ್ರಾಮದ ರಾಷ್ಟ್ರೀಯ ಹೆದ್ದಾರಿ–30ರಲ್ಲಿ ಕಾರು ಟ್ರಕ್‌ವೊಂದಕ್ಕೆ ಮುಖಾಮುಖಿಯಾಗಿ ಡಿಕ್ಕಿ ಹೊಡೆದು ಘಟನೆ ಸಂಭವಿಸಿದೆ ಎಂದು ಪುರೂರ್ ಪೊಲೀಸ್ ಠಾಣಾಧಿಕಾರಿ ಅರುಣ್ ಕುಮಾರ್ ಸಾಹು ತಿಳಿಸಿದ್ದಾರೆ.

ಘಟನೆ ಬಳಿಕ ಟ್ರಕ್ ಚಾಲಕ ವಾಹನವನ್ನು ಅಲ್ಲೇ ಬಿಟ್ಟು ಪರಾ–ರಿಯಾಗಿದ್ದಾನೆ. ಅಪಘಾತದಲ್ಲಿ ಎಸ್‌ಯುವಿ ಕಾರ್‌ನಲ್ಲಿದ್ದ 10 ಮಂದಿ ಸ್ಥಳದಲ್ಲೇ ಮೃತಪಟ್ಟಿದ್ದು, ಒಂದು ಮಗು ಗಂಭೀರ ಗಾಯಗೊಂಡು ಆಸ್ಪತ್ರೆಗೆ ಸಾಗಿಸುವ ವೇಳೆ ಸಾವನ್ನಪ್ಪಿದೆ. ಮೃತದೇಹಗಳನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಲಾಗಿದೆ. ವಾಹನ ಬಿಟ್ಟು ಪರಾ–ರಿಯಾಗಿರುವ ಟ್ರಕ್ ಚಾಲಕನ ಪತ್ತೆಗಾಗಿ ಶೋಧಕಾರ್ಯ ನಡೆಯುತ್ತಿದೆ. ಈ ಘಟನೆಗೆ ಛತ್ತಿಸ್‌ಗಢ ಮುಖ್ಯಮಂತ್ರಿ ಭೂಪೇಶ್ ಬಘೇಲ್ ಸಂತಾಪ ವ್ಯಕ್ತಪಡಿಸಿದ್ದಾರೆ.

## ವಿನಯ್ ಕುಲಕರ್ಣಿ ಆಪ್ತ ಪ್ರಶಾಂತ ಕೆಕರೆ ಮನೆ ಮೇಲೆ ಐಟಿ ದಾಳಿ



ಧಾರವಾಡ: ಗ್ರಾಮೀಣ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ವಿನಯ್ ಕುಲಕರ್ಣಿ ಅವರ ಆಪ್ತ ಪ್ರಶಾಂತ ಕೆಕರೆ ಅವರ ಮನೆ ಮೇಲೆ ಐಟಿ ದಾಳಿ ಮಾಡಲಾಗಿದೆ.

ಧಾರವಾಡದ ಸಪ್ತಾಪುರ ಕೃಷಿ ಪಾರ್ಕ್‌ನಲ್ಲಿ ಪ್ರಶಾಂತ ಅವರ ಮನೆ ಇದ್ದು, ಆ ಮನೆ ಮೇಲೆ ಐಟಿ ಅಧಿಕಾ–ರಿಗಳ ತಂಡ ದಾಳಿ ನಡೆಸಿ ಅರ್ಧ ಗಂಟೆಯಿಂದಲೂ ದಾಖಲೆ ಪತ್ರಗಳನ್ನು ಪರಿಶೀಲನೆ ನಡೆಸುತ್ತಿದ್ದಾರೆ.

ಚುನಾವಣೆ ಹೊಸ್ತಿಲಲ್ಲೇ ವಿನಯ್ ಕುಲಕರ್ಣಿಗೆ ಮತ್ತೆ ಶಾಕ್ ನೀಡಲಾಗಿದ್ದು, ಪ್ರಶಾಂತ ಕೆಕರೆ ಚುನಾವಣೆ ವೇಳೆ ಇದು ಸಹಜ ಎನ್ನುತ್ತಲೇ ಐಟಿ ಅಧಿಕಾರಿಗಳಿಗೆ ಮನೆಯ ಕೀ ನೀಡಿ ಅವರನ್ನು ಒಳಗಡೆ ಕರೆದುಕೊಂಡು ಹೋಗಿದ್ದಾರೆ.

## ರಾಜಕೀಯಕ್ಕೆ ಬರುವುದಕ್ಕೂ ಮುನ್ನ ವೃತ್ತಿಯಲ್ಲಿ ಏನಾದರೂ ಸಾಧಿಸಿ: ಅಣ್ಣಾಮಲೈ

ಬೆಂಗಳೂರು: ಚುನಾವಣಾ ರಾಜಕೀಯ ಸುಲಭವಲ್ಲ. ಪಕ್ಷಕ್ಕೆ ಸೇರ್ಪಡೆಗೊಳ್ಳುವುದು, ಮೆಟ್ಟಿಲು ಏರುವುದು ಮತ್ತು ಚುನಾವಣೆಗೆ ಸ್ಪರ್ಧಿಸಲು ಟಿಕೆಟ್ ಪಡೆಯುವುದು ಸುಲಭವಲ್ಲ ಮಾತಲ್ಲ ಎಂದು ತಮಿಳುನಾಡು ಬಿಜೆಪಿ ಅಧ್ಯಕ್ಷ ಕೆ ಅಣ್ಣಾಮಲೈ ಅವರು ಬುಧವಾರ ಹೇಳಿದ್ದಾರೆ.

ಥಿಂಕರ್ಸ್ ಫೋರಂ ಆಯೋಜಿಸಿದ್ದ ಸಂವಾದದಲ್ಲಿ ಮಾತನಾಡಿರುವ ಅವರು, ನಮ್ಮ ಪಕ್ಷದಿಂದ ಎಂಎಲ್ಎ ಟಿಕೆಟ್‌ಗಾಗಿ 40ಕ್ಕೂ ಹೆಚ್ಚು ಆಕಾಂಕ್ಷಿಗಳಿದ್ದರು. ಆದರೆ, ನೀವು ನಿಮ್ಮ ವೃತ್ತಿ ಜೀವನದಲ್ಲಿ ಅರ್ಥ ಪೂರ್ಣವಾದುದನ್ನು ಸಾಧಿಸುತ್ತಿದ್ದರೆ. ನಿಮ್ಮದೇ ಆದ ವಿಶಿಷ್ಟ ಛಾಪು ಮೂಡಿಸಿದರೆ,



ನೀವು ರಾಜಕೀಯಕ್ಕೆ ಬಂದ ಮೇಲೆ ನಿಮ್ಮ ಪ್ರಯಾಣ ಸುಲಭವಾಗುತ್ತದೆ ಎಂದು ಹೇಳಿದ್ದಾರೆ.

ರಾಜ್ಯ ಪ್ರವೇಶಕ್ಕೆ ಆರ್ಥಿಕ ಸ್ಥಿರತೆ ಮುಖ್ಯ. ರಾಜಕೀಯಕ್ಕೆ ಬರುವ ಇಚ್ಛೆ ಇರುವವರು ಕುಟುಂಬವನ್ನು ನೋಡಿಕೊಳ್ಳಲು ಪಕ್ಷದ ಮೇಲೆ ಅವಲಂಬಿತವಾಗಿರಬಾರದು ಎಂದು ಸಲಹೆ ನೀಡಿದರು.

ಯಾವುದೇ ರಾಜ–ಕೀಯ ಪಕ್ಷವನ್ನು ಹೆಸರಿಸದೆ, ಯುವಜನರು ಪ್ರಗತಿಪರ, ಪರಿವರ್ತನಾಶೀಲ ಮತ್ತು ಯಾವಾಗಲೂ ಭವಿಷ್ಯದತ್ತ ಮತ ಚಲಾಯಿಸಬೇಕು. ರಾಜಕೀಯ ಪಕ್ಷಗಳ ಅರ್ಥಮಾಡಿಕೊಳ್ಳಲು ಸ್ವಲ್ಪ ಸಮಯವನ್ನು ಮೀಸಲಿಡಬೇಕು ಎಂದು ಮನವಿ ಮಾಡಿದರು.

ಅಧಿಕಾರಶಾಹಿ ಅಥವಾ ರಾಜಕಾರಣಿಯಾಗಿರುವುದರಲ್ಲಿ ಯಾವುದು ಉತ್ತಮ ಎಂಬ ಪ್ರಶ್ನೆಗೆ ಉತ್ತರಿಸಿದ ಅವರು, ನಾಗರೀಕ ಸೇವಕರಾಗಲೂ ಬಯಸಿದ್ದೇ ಆದರೆ, ಅದನ್ನೇ ಆಯ್ಕೆ ಮಾಡಿಕೊಳ್ಳಿ. ಆ ಪ್ರಯಾಣದಲ್ಲಿ ನಿಮ್ಮ ಬದಲಾಗುತ್ತದೆ. ಅದಕ್ಕಾಗಿಯೇ ನಾಗರೀಕ ಸೇವೆಗಳು ನಿಮ್ಮ ಪ್ರಯಾಣದಲ್ಲಿ ಬಹು ಆಯ್ಕೆಗಳನ್ನು ನೀಡುತ್ತದೆ. ನೀವು ಇಲಾಖೆಯನ್ನು ಬದಲಾಯಿಸಬಹುದು. ಇಲಾಖೆಯನ್ನು ಬದಲಾಯಿಸಬಹುದು.

ಕೇಂದ್ರ ದಲ್ಲಿ ನಿಯೋಜನೆಗೆ ಹೋಗಬಹುದು. ವಿದೇಶಕ್ಕೆ ಹೋಗಿ ಮತ್ತೊಂದು ಪದವಿಯನ್ನೂ ಪಡೆಯಬಹುದು. ಅಗತ್ಯ ಎನಿಸಿದರೆ, ವಿರಾಮ ಪಡೆದುಕೊಳ್ಳಬಹುದು. ಎನ್‌ಜಿ–ಒಗೆ ಸೇರಬಹುದು ಮತ್ತು ಹಿಂತಿರುಗಬಹುದು. ನಾನು ಆ ಪ್ರಯಾಣದಲ್ಲಿದ್ದ ಸಂದರ್ಭದಲ್ಲಿ ವಿರಾಮ ತೆಗೆದುಕೊಂಡಿದ್ದೆ. ಎನ್‌ಜಿಒ ಸ್ಥಾಪಿಸಿದೆ ಮತ್ತು ನಂತರ ರಾಜಕೀಯಕ್ಕೆ ಪಾದಾರ್ಪಣೆ ಮಾಡಿದೆ ಎಂದು ತಿಳಿಸಿದ್ದಾರೆ.

## ಮನ್ ಕಿ ಬಾತ್ ಸಂಖ್ಯೆ ಏರಿದಂತೆ ಪೆಟ್ರೋಲ್, ಸಿಲೆಂಡರ್ ಬೆಲೆಗಳೂ ಏರುತ್ತಿವೆ: ಬಂಟಿ ಪಾಟೀಲ ವ್ಯಂಗ್ಯ

ಬೆಳಗಾವಿ : ಪ್ರಧಾನಿ ನರೇಂದ್ರ ಮೋದಿ ಅವರ ಮನ್ ಕಿ ಬಾತ್ ಸಂಖ್ಯೆ ಏರಿದಂತೆ ದೇಶದಲ್ಲಿ ಪೆಟ್ರೋಲ್, ಸಿಲೆಂಡರ್ ಮೊದಲಾದವುಗಳ ಬೆಲೆ ಕೂಡ ಏರುತ್ತಿದೆ ಎಂದು ಮಹಾರಾಷ್ಟ್ರ ಕಾಂಗ್ರೆಸ್ ಮುಖಂಡ, ಶಾಸಕ ಸತೇಜ್ ಪಾಟೀಲ್ ಉರ್ಫ್ ಬಂಟಿ ಪಾಟೀಲ ವ್ಯಂಗ್ಯವಾಡಿದ್ದಾರೆ.

ಬೆಳಗಾವಿ ಗ್ರಾಮೀಣ ವಿಧಾನಸಭಾ ಕ್ಷೇತ್ರದ ಬೆನಕನಹಳ್ಳಿಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಲಕ್ಷ್ಮೀ ಹೆಬ್ಬಾಳಕರ್ ಪರ ಚುನಾವಣೆ ಪ್ರಚಾರ ಸಭೆಯಲ್ಲಿ ಅವರು ಮಾತನಾಡುತ್ತಿದ್ದರು.

ಮೊದಲ ಮನ್ ಕೀ ಬಾತ್ ಸಂದರ್ಭದಲ್ಲಿ ಪೆಟ್ರೋಲ್ ಬೆಲೆ 51 ರೂ. ಇತ್ತು, ನೂರನೇ ಮನ್ ಕೀ ಬತ್ ನಲ್ಲಿ 110 ರೂ. ಆಗಿದೆ. ಸಿಲೆಂಡರ್ ಬೆಲೆ ಮೊದಲ ಮನ್ ಕೀ ಬಾತ್ ನಲ್ಲಿ 400 ರೂ. ಇತ್ತು, 100 ನೇ ಮನ್ ಕೀ ಬಾತ್



ಹೊತ್ತಿಗೆ 1200 ರೂ ಆಗಿದೆ. ಇನ್ನೆಷ್ಟು ಮನ್ ಕೀ ಬಾತ್ ಬರುತ್ತದೆಯೋ ಗೊತ್ತಿಲ್ಲ ಎಂದು ಅವರು ಹೇಳಿದರು.

ಶಾಸಕಿ ಲಕ್ಷ್ಮೀ ಹೆಬ್ಬಾಳಕರ್ ಮಾತನಾಡಿ, ಹಿಂದಿನ ಚುನಾವಣೆಗೂ ಮುನ್ನ ನಿಮಗೆ ಕೊಟ್ಟಿದ್ದ ವಚನವನ್ನು ಪೂರ್ಣಗೊಳಿಸಿಯೇ ನಿಮ್ಮ ಮುಂದೆ ಮತ್ತೆ ಬಂದು ನಿಂತಿದ್ದೇನೆ. ಮಾತು ಕೊಟ್ಟಂತೆ ಎಲ್ಲ ಕೆಲಸಗಳನ್ನು ಮಾಡಿದ್ದೇನೆ. ಕ್ಷೇತ್ರಕ್ಕೆ ಬೃಹತ್ ಕೈಗಾರಿಕೆ, ಉನ್ನತ ಶಿಕ್ಷಣ ಸಂಸ್ಥೆ ತರುವ ಉದ್ದೇಶವಿದೆ. ಆದರೆ ವಿರೋಧ ಪಕ್ಷದಲ್ಲಿದ್ದಿದ್ದರಿಂದ ಅದು ಸಾಧ್ಯವಾಗಿಲ್ಲ. ಅವುಗಳನ್ನೂಶೀಘ್ರವೇ ಈಡೇರಿಸುತ್ತೇನೆ. ನನಗೆ ಇಚ್ಛಾಶಕ್ತಿ ಇದೆ ಹಾಗಾಗಿ ಕೆಲಸ ಮಾಡಿದ್ದೇನೆ. ನಿಮ್ಮ ಮಗಳ ಜವಾಬ್ದಾ–ರಿಯನ್ನು ನಿರ್ವಹಿಸಿದ್ದೇನೆ ಎಂದರು.

ಜಾತಿ, ಭಾಷೆ ಯಾವುದನ್ನೂ ನೋಡದೇ ನಾನು ಕೆಲಸ ಮಾಡಿದ್ದೇನೆ. ರಾಜಹಂಸಗಡದಲ್ಲಿ ಛತ್ರಪತಿ ಶಿವಾಜಿ ಮಹಾರಾಜರ ಮೂರ್ತಿ ನಿರ್ಮಿಸಿದ್ದೇನೆ. 11 ಅಂಬೇಡ್ಕರ್ ಭವನ, 5 ವಾಲ್ಮೀಕಿ ಭವನ, ಕೃಷ್ಣ ಭವನ, ವಾರ್ಕರಿ ಭವನ ಮಾಡಿದ್ದೇನೆ. ಬ್ರಿಜ್ ಕಂ ಬಾಂದಾರಾ, ಬಸವೇಶ್ವರ ಮೂರ್ತಿ, ಚನ್ನಮ್ಮ ಮೂರ್ತಿ ಏನೆಲ್ಲ ಮಾಡಿದ್ದೇನೆ ಎಂದು ಅವರು ಹೇಳಿದರು.

ಕೊರೋನಾ ಸದರ್ಭದಲ್ಲಿ ಈಗಿನ ಪಕ್ಷೇತರ ಅಭ್ಯರ್ಥಿ ಆರ್.ಎಂ.ಚೌಗಲೆ, ಬಿಜೆಪಿ ಅಭ್ಯರ್ಥಿ ನಾಗೇಶ ಮನ್ನೋಳಕರ್ ಎಲ್ಲಿದ್ದರು? 4 ತಿಂಗಳಿಂದ ಅವರೆಲ್ಲ ಕಾಣಿಸುತ್ತಿದ್ದಾರೆ. ಪೋಸ್ಟರ್ ಗಳಲ್ಲಿ ಮಾತ್ರ ಕಾಣಿಸುತ್ತಿದ್ದಾರೆ. ನಿಮ್ಮ ಕಷ್ಟ –ಸುಖದಲ್ಲಿ ಲಕ್ಷ್ಮೀ ಹೆಬ್ಬಾಳಕರ್ ಹೊರತು ಯಾರೂ ಬಂದಿಲ್ಲ, ಬರುವುದಿಲ್ಲ. ಚುನಾವಣೆ ಮುಗಿಯುತ್ತಿದ್ದಂತೆ ಇವರೆಲ್ಲ ನಾಪತ್ತೆಯಾಗುತ್ತಾರೆ. ಮೊಬೈಲ್ ಸ್ವಿಚ್ಡ್ ಆಫ್ ಆಗುತ್ತದೆ. ನಾನು ನಮ್ಮ ಸರಕಾರ ಇಲ್ಲದ ಸಂದರ್ಭದಲ್ಲಿ ಶಾಸಕಿಯಾಗಿ ಕಷ್ಟಪಟ್ಟಿದ್ದೇನೆ. ಇಲ್ಲದ ಆರೋಪಗಳನ್ನು ಎದುರಿಸಿದ್ದೇನೆ. ಎಷ್ಟು ಕಷ್ಟ ಕೊಡಬೇಕೋ ಕೊಟ್ಟಿದ್ದಾರೆ. ಈ ಬಾರಿ ಕಾಂಗ್ರೆಸ್ ಸರಕಾರ ಅಧಿಕಾರಕ್ಕೆ ಬರಲಿದೆ. ಇನ್ನಷ್ಟು ಯೋಜನೆಗಳನ್ನು ಕ್ಷೇತ್ರಕ್ಕೆ ತರಲಿದ್ದೇನೆ ಒದೂ ಹೆಬ್ಬಾಳಕರ್ ಹೇಳಿದರು.

ಮಹಾರಾಷ್ಟ್ರ ಮಾಜಿ ಮುಖ್ಯಮಂತ್ರಿ ಅಶೋಕ ಚವ್ಹಾಣ, ಮಾಜಿ ಮಂತ್ರಿ ವಿಶ್ವಜೀತ್ ಕದಂ, ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ, ಮೃಣಾಲ ಹೆಬ್ಬಾಳಕರ್, ಸ್ಥಳೀಯ ಮುಖಂಡರಾದ ಯುವರಾಜ ಕದಂ, ಶಂಕರಗೌಡ ಪಾಟೀಲ, ಬಸವರಾಜ ಮ್ಯಾಗೋಟಿ, ಅಡಿವೇಶ ಇಟಗಿ, ಸಾತೇರಿ ಬೆಳವಟ್ಕರ್, ಮಲ್ಲೇಶ ಚೌಗಲೆ ಮೊದಲಾದವರು ಇದ್ದರು.

## ಕಾಂಗ್ರೆಸ್ ಪಕ್ಷದ ವಿರಾಟ ಸಭೆ




ಬೆಳಗಾವಿ: ವಿರೋಧ ಪಕ್ಷದಲ್ಲಿದ್ದರೂ ಸರ್ಕಾರದಿಂದ ಸಾಕಷ್ಟು ಅನುದಾನವನ್ನು ಮಂಜೂರು ಮಾಡಿಸಿ ಅಭಿವೃದ್ಧಿ ಕಾರ್ಯಗಳನ್ನು ಕೈಗೊಂಡ ಶಾಸಕಿ ಲಕ್ಷ್ಮೀ ಹೆಬ್ಬಾಳಕರ ಅವರ ಕಾರ್ಯವೈಖರಿ ಅಭಿನಂದನೀಯವಾಗಿದೆ. ಅವರು ಕ್ಷೇತ್ರದಲ್ಲಿ ಝಾಂಸಿ ರಾಣಿಯಂತೆ ತನ್ನದೇ ಆದ ಸೈನ್ಯವನ್ನು ಕಟ್ಟಿಕೊಂಡಿದ್ದು, ಲಕ್ಷ್ಮೀಯ ಸೈನ್ಯ ಗಮನಿಸಿದರೆ ಕಾಂಗ್ರೆಸ್ ಪಕ್ಷದ ಗೆಲುವು ನಿಶ್ಚಿತ ಎನಿಸುತ್ತಿದೆ ಎಂದು ಮಹಾರಾಷ್ಟ್ರದ ಮಾಜಿ ಸಿಎಂ ಹಾಗೂ ಹಿರಿಯ ಕಾಂಗ್ರೆಸ್ ಮುಖಂಡ ಅಶೋಕ ಚವಾಣ ಅಭಿಪ್ರಾಯ ಪಟ್ಟರು. ಬೆಳಗಾವಿ ಗ್ರಾಮೀಣ ವಿಧಾನಸಭಾ ಕ್ಷೇತ್ರದ ಬೆನಕನಹಳ್ಳಿಯಲ್ಲಿ ಗುರುವಾರ ಆಯೋಜಿಸಿದ್ದ ಕಾಂಗ್ರೆಸ್ ಪಕ್ಷದ ವಿರಾಟ ಸಭೆ ಉದ್ದೇಶಿಸಿ ಮಾತನಾಡಿದ ಅವರು, ಕರ್ನಾಟಕದ ಮತದಾರರು ಕೇಂದ್ರ ಮತ್ತು ರಾಜ್ಯದ ಬಿಜೆಪಿ ಸರ್ಕಾರದ ಆಡಳಿತದಿಂದ ಬೇಸತ್ತಿದ್ದಾರೆ. ಡಬಲ್ ಇಂಜಿನ್ ಸರ್ಕಾರ ಸುಳ್ಳು ಭರವಸೆ ನೀಡುತ್ತಿದೆ. ಪ್ರಧಾನಿ ಮೋದಿ ಹಿಂದಿನ ಚುನಾವಣೆಯಲ್ಲಿ ಬೆಲೆ ಏರಿಕೆಯನ್ನು ಮುಂದಿಟ್ಟುಕೊಂಡು ಚುನಾವಣೆ ಎದುರಿಸಿದ್ದರು. ವಿದೇಶದಿಂದ ಕಪ್ಪು ಹಣ ತಂದು ಪ್ರತಿಯೊಬ್ಬರ ಖಾತೆಗೆ 15 ಲಕ್ಷ ಹಾಕುವುದಾಗಿ ಹೇಳಿದ್ದರು. ಪ್ರತಿ ವರ್ಷ 2 ಕೋಟಿ ನಿರುದ್ಯೋಗಿಗಳಿಗೆ ಉದ್ಯೋಗ ನೀಡುವುದಾಗಿ ಹೇಳಿದ್ದರು. ಆದರೆ ಇವ್ಯಾವುವೂ ಈಡೇರಿಲ್ಲ. ಬಿಜೆಪಿ ಸುಳ್ಳಿನ ಕಂತೆ ಹೇಳಿ ದೇಶದ ವ್ಯವಸ್ಥೆಯನ್ನು ಹದಗೆಡಿಸಿದೆ. ಪುಲಬಾಮಾ ದಾಳಿ ಸಂದರ್ಭದಲ್ಲಿ ಬಿಜೆಪಿ ಸರ್ಕಾರ ಸೈನಿಕರ ರಕ್ಷಣೆಗಾಗಿ ವಿಮಾನ ನೀಡದ್ದರಿಂದ ಅನೇಕ ಯೋಧರು ಹುತಾತ್ಮರಾಗಬೇಕಾಯಿತು. ಮೋದಿ ಸರ್ಕಾರ ಜಾರಿಗೆ ತಂದ ಜಿಎಸ್‌ಟಿಯಿಂದ ಯಾವುದೇ ಪ್ರಯೋಜನ ಆಗಲಿಲ್ಲ. ಎಲ್‌ಐಸಿ, ಎಸ್‌ಬಿಐ ಹಣವನ್ನು ಅದಾನಿ ಒಡೆತನದ ಕಂಪನಿಗಳಲ್ಲಿ ವಿನಿಯೋಗಿಸಿ ಜನರ ಹಣವನ್ನು ದುರುಪಯೋಗ ಮಾಡಿದೆ. ಮುಸ್ಲಿಮರ ಶೇ.4 ಮೀಸಲಾತಿಯನ್ನು ಕಡಿಮೆ ಮಾಡಿ ಒಕ್ಕಲಿಗ ಲಿಂಗಾಯತರಿಗೆ ನೀಡಿದೆ. ಮರಾಠರಿಗೆ ಯಾವುದೇ ಮೀಸಲಾತಿ ನೀಡಿಲ್ಲ ಎಂದು ಬಿಜೆಪಿ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು.



## ಪ್ರಭಾವತಿ ಚುನಾವಣಾ ಪ್ರಚಾರ

ಬೆಳಗಾವಿ: ಪಿಕೆಕ್ವಾಟರ್ಸ್ ನಲ್ಲಿ ಚುನಾವಣಾ ಪ್ರಚಾರ ನಡೆಸಿದೆ. ಜನರು ಪ್ರೀತಿಪೂರ್ವಕವಾಗಿ ಸ್ವಾಗತಿಸಿಕೊಂಡು, ಸನ್ಮಾನ ಮಾಡಿದರು.

ಆಯುಷ್ಯಮತಿ ರಮಾಬಾಯಿ ಅಂಬೇಡಕರ ಸಮುದಾಯ ಭವನದ ಆವರಣದಲ್ಲಿ ನಡೆದ ಸಭೆಯಲ್ಲಿ ಜನರನ್ನು ಉದ್ದೇಶಿಸಿ ಮಾತನಾಡಿದೆ.

ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದಲ್ಲಿ ಮಾತ್ರ ಜನರಿಗೆ ಬೆಲೆ ಏರಿಕೆಯಿಂದ ಮುಕ್ತಿ ಸಿಗುವುದು, ಉದ್ಯೋಗಗಳು ಸಿಗುವುದು ಎಂದು ತಿಳಿ ಹೇಳಲಾಯಿತು. ಕಾಂಗ್ರೆಸ್‌ನ 5 ಜನಪರ ಗ್ಯಾರಂಟಿಗಳನ್ನೂ ಸಹ ವಿವರಿಸಿ, ಅವುಗಳ ಲಾಭ ಪಡೆಯಲು ಕಾಂಗ್ರೆಸ್‌ಗೆ ಮತ ನೀಡಿ ಎಂದು ಮನವಿ ಮಾಡಿದೆ.ಒಟ್ಟಾರೆ ಜನರು ಈ ಬಾರಿ ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತರುವ ಆಸಕ್ತಿ ಹೊಂದಿದ್ದಾರೆ. ಅವರೆಲ್ಲರ ಆಶಯಗಳಿಗೆ ಆಧಾರವಾಗಿ ನಿಲ್ಲುವುದು ಕಾಂಗ್ರೆಸ್ ಪಕ್ಷದ ಧೃಡ ನಿರ್ಧಾರ.

## ಮದ್ಯದ ಅಮಲಿನಲ್ಲಿ ಪೊಲೀಸರಿಂದ ಯುವತಿಗೆ ನಿಂದನೆ: ಕಣ್ಣೀರು ಹಾಕಿದ ಕುಸ್ತಿಪಟುಗಳು

ದೆಹಲಿ: ತಡರಾತ್ರಿ ಜಂತರ್ ಮಂತರ್ ನಲ್ಲಿ ದೆಹಲಿ ಪೊಲೀಸರು ಮತ್ತು ಕುಸ್ತಿಪಟುಗಳ ನಡುವೆ ವಾಗ್ವಾದ ನಡೆದಿದೆ.

ಈ ವೇಳೆ ಕುಡಿದ ಮತ್ತಿನಲ್ಲಿ ಮಹಿಳಾ ಕುಸ್ತಿಪಟುಗಳ ಮೇಲೆ ಪೊಲೀಸ್ ಪೇದೆಯೊಬ್ಬರು ಅನುಚಿತವಾಗಿ ವರ್ತಿಸಿದ್ದಾರೆ ಎಂದು ಕುಸ್ತಿಪಟುಗಳು ಕಣ್ಣೀ–ರಿಟ್ಟರು. ಈ ವಿಷಯದ ಬಗ್ಗೆ ವಿನೇಶ್ ಫೋಗಟ್ ಕಣ್ಣೀರಾಕಿದ್ದಾರೆ. ದೆಹಲಿ ಪೊಲೀಸರು ನಮ್ಮೊಂದಿಗೆ ನಡೆದುಕೊಂಡ ರೀತಿ ದುಃಖಕರವಾಗಿದೆ. ನಾವು



ಅಪರಾಧಿಗಳಲ್ಲ, ಇಂತಹ ದಿನಗಳನ್ನು ನೋಡೋದಕ್ಕಾ ನಾವು ಪದಕಗಳನ್ನು ಗೆದ್ದಿದ್ದು ಎಂದು ಕಣ್ಣೀರು ಹಾಕಿದರು. ಕುಡಿತದ ಅಮಲಿನಲ್ಲಿ ಪೊಲೀಸರು ಮಹಿಳೆಯ ರೆಂಬುದನ್ನೂ ನೋಡದೆ ಅಸಭ್ಯವಾಗಿ ವರ್ತಿಸಿದ್ದಾರೆ ಎಂದು ತೀವ್ರ ಆಕ್ರೋಶ ವ್ಯಕ್ತಪಡಿಸಿದರು. ಜಂತರ್ ಮಂತರ್‌ನಲ್ಲಿ ಮಳೆಯಿಂದಾಗಿ ನಮ್ಮ ಹಾಸಿಗೆಗಳು ಒದ್ದೆಯಾಗಿದ್ದು, ಅವುಗಳನ್ನು ಜಾಗಕ್ಕೆ ಬೇರೆ ಹಾಸಿಗೆಗಳನ್ನು ಹಾಕಲು ಪೊಲೀಸರು ನಮಗೆ ಅವಕಾಶ ನೀಡಲಿಲ್ಲ. ಈ ವೇಳೆ ಪೊಲೀಸರು ತಮ್ಮೊಂದಿಗೆ ಅಸಭ್ಯವಾಗಿ ವರ್ತಿಸಿದ್ದಾರೆ ಎಂದರು. ಪೊಲೀಸರ ವರ್ತನೆಯಿಂದ ಇಬ್ಬರು ಕ್ರೀಡಾಪಟುಗಳು ಗಾಯಗೊಂಡಿದ್ದಾರೆ ಎನ್ನಲಾಗಿದೆ. ಮಹಿಳೆಯರಿರುವಲ್ಲಿ ಮಹಿಳಾ ಪೊಲೀಸರು ಇಲ್ಲದಿರುವುದನ್ನು ಫೋಗಟ್ ಪ್ರಶ್ನಿಸಿದರು. ವಿಶ್ವ ಕುಸ್ತಿ ಚಾಂಪಿಯನ್‌ಶಿಪ್‌ನಲ್ಲಿ ನಾಲ್ಕು ಪದಕಗಳನ್ನು ಗೆದ್ದಿದ್ದಕ್ಕಾಗಿ ನಾವು ತಪ್ಪಿತಸ್ಥರೇ? ವಿನೇಶ್ ಫೋಗಟ್ ಅಳಲು ತೋಡಿಕೊಂಡರು. ನನ್ನ ಎಲ್ಲಾ ಪದಕಗಳನ್ನು ಸರ್ಕಾರ ಹಿಂಪಡೆಯುವಂತೆ ನಾನು ವಿನಂತಿಸುತ್ತೇನೆ.

ನಮ್ಮನ್ನು ಸಾಯಿಸುವುದಾದರೆ ಸಾಯಿಸಿಬಿಡಿ, ಇಂತಹ ದಿನಗಳನ್ನು ನೋಡದಕ್ಕಾ ನಾವು ಪದಕಗಳನ್ನು ಗೆದ್ದಿದ್ದು? ಮಹಿಳೆಯರನ್ನು ನಿಂದಿಸುವ ಹಕ್ಕು ಪುರುಷನಿಗೆ ಇದೆಯೇ ಎಂದು ಪ್ರಶ್ನಿಸಿದರು.

## ಉಚಿತ ಬೇಸಿಗೆ ಕ್ರೀಡಾ ತರಬೇತಿ ಶಿಬಿರ

ಬೆಳಗಾವಿ: ಬೆಳಗಾವಿಯ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಬೆಳಗಾವಿ ವತಿಯಿಂದ ಜಿಲ್ಲೆಯ 18 ವರ್ಷದೊಳಗಿನ ಬಾಲಕ/ಬಾಲಕಿಯರಿಗೆ ಮೇ.09 ರಂದ ಮೇ.18 2023 ರವರೆಗೆ ಕುಸ್ತಿ, ಜುಡೋ, ಬಾಕ್ಸಿಂಗ್, ಬಾಸ್ಕೆಟಬಾಲ್, ವಾಲಿಬಾಲ್, ವೇಟ್ ಲಿಫ್ಟಿಂಗ್ ಹಾಗೂ ಅಥ್ಲೆಟಿಕ್ಸ್ ಕ್ರೀಡೆಗಳಿಗೆ 10 ದಿನಗಳ ಉಚಿತ ಬೇಸಿಗೆ ಕ್ರೀಡಾ ತರಬೇತಿ ಶಿಬಿರವನ್ನು ಆಯೋಜಿಸಲಾಗಿದೆ.

18 ವರ್ಷದೊಳಗಿನ ಆಸಕ್ತ ಬಾಲಕ/ಬಾಲಕಿಂ–ಯರು ಮೇ.08 ರ ಒಳಗಾಗಿ ತಮ್ಮ ಹೆಸರುಗಳನ್ನು ನೋಂದಾಯಿಸಿಕೊಳ್ಳಬಹುದು ಹಾಗೂ ಹೆಚ್ಚಿನ ವಿವರಗಳಿಗಾಗಿ ಕಛೇರಿ ದೂರವಾಣಿ ಸಂಖ್ಯೆ 0831–2950306 ನ್ನು ಸಂಪರ್ಕಿಸಬಹುದು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಕ್ರೀಡಾಪಟುಗಳಿಗೆ ಕ್ರೀಡಾ ತರಬೇತಿ ಶಿಬಿರ

ಬೆಳಗಾವಿ: ಬೆಳಗಾವಿಯ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ 18 ವರ್ಷದೊಳಗಿನ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಕ್ರೀಡಾಪಟುಗಳಿಗೆ ಮೇ.09 ರಿಂದ ಮೇ.18 2023 ರವರೆಗೆ ಜಿಲ್ಲಾ ಮಟ್ಟದ ಕ್ರೀಡಾ ತರಬೇತಿ ಶಿಬಿರವನ್ನು ಬೆಳಗಾವಿ ಜಿಲ್ಲಾ ಕ್ರೀಡಾಂಗಣದಲ್ಲಿ ಆಯೋಜಿಸಲಾಗಿದೆ.

18 ವರ್ಷದೊಳಗಿನ ಆಸಕ್ತ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಕ್ರೀಡಾಪಟುಗಳು ಮೇ.08 ರ ಒಳಗಾಗಿ ಹೆಸರನ್ನು ನೊಂದಾಯಿಸಿಕೊಳ್ಳಬಹುದು.

ಹೆಸರು ನೋಂದಣಿ ಹಾಗೂ ಹೆಚ್ಚಿನ ವಿವರಗಳಿಗಾಗಿ ಉಪ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಬೆಳಗಾವಿ ಕಛೇರಿ ದೂರವಾಣಿ ಸಂಖ್ಯೆ. 0831–2950306ನ್ನು ಸಂಪರ್ಕಿಸಬಹುದು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸೈನಿಕ ತರಬೇತಿ ಶಾಲೆ: ಪ್ರವೇಶಾತಿಗೆ ಅರ್ಜಿ ಆಹ್ವಾನ

ಬೆಳಗಾವಿ: 2023–24 ನೇ ಸಾಲಿಗೆ ಬೆಳಗಾವಿ ನಗರದ ಸದಾಶಿವ ನಗರದಲ್ಲಿ ನಡೆಯುತ್ತಿರುವ ಸೈನಿಕ ತರಬೇತಿ ಶಾಲೆಯಲ್ಲಿ, ವಿಜಯಪೂರ (ವಿಜಾಪೂರ) ಸೈನಿಕ ಶಾಲೆಯ ಪ್ರವೇಶಕ್ಕಾಗಿ ಪರೀಕ್ಷಾ ಪೂರ್ವ ತರಬೇತಿ ನೀಡಲು ವಾರ್ಷಿಕ ವರಮಾನ ರೂ.2.50 ಲಕ್ಷಗಳ ಒಳಗಿರುವ ಮತ್ತು 2023–24 ನೇ ಸಾಲಿನಲ್ಲಿ 5 ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ/ ಪರಿಶಿಷ್ಟ ವರ್ಗದ ಪ್ರತಿಭಾವಂತ ಗಂಡು ಮಕ್ಕಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ತರಬೇತಿಗೆ ಆಯ್ಕೆಯಾಗಿ ಪ್ರವೇಶ ಪಡೆದ ವಿದ್ಯಾರ್ಥಿಗಳಿಗೆ ನೀಡುವ ಶಾಲೆಯ ಸೌಲಭ್ಯಗಳು :

ವಿದ್ಯಾರ್ಥಿಗಳಿಗೆ ಉಚಿತ ಊಟ ಮತ್ತು ವಸತಿ ಸೌಲಭ್ಯ, ವೈದ್ಯಕೀಯ ಸೌಲಭ್ಯ, ಸಮವಸ್ತ್ರ ಹಾಗೂ ಶೂ ಮತ್ತು ಸಾಕ್ಸ್ ವಿತರಣೆ, ವಿದ್ಯಾರ್ಥಿಗಳಿಗೆ ಹಾಸಿಗೆ – ಹೊದಿಕೆ ಸೌಲಭ್ಯ, ಉಚಿತವಾದ ಕಲಿಕಾ ಸಾಮಗ್ರಿಗಳು ಹಾಗೂ ಶುಚಿ ಸಂಭ್ರಮ ಕಿಟ್ ನೀಡಲಾಗುವದು.

12 ವಿದ್ಯಾರ್ಥಿಗಳಿಗೆ ಒಬ್ಬ ಶಿಕ್ಷಕರ ನೇಮಕ, ನುರಿತ 4 ಶಿಕ್ಷಕರಿಂದ ಬೋಧನೆ, ಪ್ರತಿ ವಾರಕ್ಕೊಮ್ಮೆ ಸಾಮರ್ಥ್ಯ ಪರೀಕ್ಷೆ ನಡೆಸಿ ಕಲಿಕಾ ಮಟ್ಟ ಹೆಚ್ಚಿಸುವದು. ಪಠ್ಯ ವಿಷಯದ ಜೊತೆಗೆ ಪಠ್ಯೇತರ ವಿಷಯ ಹಾಗೂ ಇಂಗ್ಲೀಷ್ ವ್ಯಾಕರಣಕ್ಕೂ ಹೆಚ್ಚಿನ ಆದ್ಯತೆ ಹಾಗೂ ಕಾಲ ಕಾಲಕ್ಕೆ ಪ್ರಬಂದ, ಆಶುಭಾಷಣ, ಕ್ವಿಜ್ ಮತ್ತು ಸ್ಪರ್ಧೆ ನಡೆಸಿ ವಿದ್ಯಾರ್ಥಿಗಳ ಭೌದ್ಧಿಕ ಮಟ್ಟ ಹೆಚ್ಚಿಸಲಾಗುವುದು.

ಜಿಲ್ಲೆಯ ಸಂಬಂಧಿಸಿದ ಆಯಾ ತಾಲೂಕಿನ ಸಹಾಯಕ ನಿರ್ದೇಶಕರು ಸಮಾಜ ಕಲ್ಯಾಣ ಇಲಾಖೆ ಕಛೇರಿ ಹಾಗೂ ಬೆಳಗಾವಿ ಅಪರ ನಿರ್ದೇಶಕರು ಸಮಾಜ ಕಲ್ಯಾಣ ಇಲಾಖೆ ಕಛೇರಿಯಿಂದ ಏಪ್ರಿಲ್.29 ರಿಂದ ಮೇ.20 2023 ರವರೆಗೆ ಅರ್ಜಿ ನಮೂನೆಗಳನ್ನು ಪಡೆದು ಮೇ.25 2023 ರ ಸಂಜೆ 5 ಗಂಟೆಯೊಳಗಾಗಿ ಅರ್ಜಿಗಳನ್ನು ಆಯಾ ತಾಲೂಕಿನ ಸಹಾಯಕ ನಿರ್ದೇಶಕರು ಸಮಾಜ ಕಲ್ಯಾಣ ಇಲಾಖೆಯ ಕಛೇರಿ/ ಬೆಳಗಾವಿಯ ಅಪರ ನಿರ್ದೇಶಕರು ಸಮಾಜ ಕಲ್ಯಾಣ ಇಲಾಖೆಗೆ ಸಲ್ಲಿಸಬಹುದು ಎಂದು ಸಮಾಜ ಕಲ್ಯಾಣ ಇಲಾಖೆ ಅಪರ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಾತಿ–ಧರ್ಮದ ಮತ ಕೇಳುವ ಮೂಲಕ ಬಿಜೆಪಿ ವೈಫಲ್ಯ ಒಪ್ಪಿಕೊಂಡಿದೆ: ಅಶೋಕ್ ಚವ್ಹಾಣ್



ಬೆಳಗಾವಿ: ಡಬ್ಬಲ್ ಇಂಜಿನ್ ಸರ್ಕಾರ ಎಂದು ಹೇಳಿಕೊಳ್ಳುವ ಬಿಜೆಪಿಯವರು ಅಭಿವೃದ್ಧಿ ಕಾರ್ಯಗಳ ಬಗ್ಗೆ ಮತ ಕೇಳುವ ಬದಲು ಜಾತಿ, ಧರ್ಮ ಒಡೆದು ಮತ ಕೇಳುತ್ತಿದ್ದಾರೆ. ಬಿಜೆಪಿ ತನ್ನ ವೈಫಲ್ಯವನ್ನು ಪರೋಕ್ಷವಾಗಿ ಒಪ್ಪಿಕೊಳ್ಳುತ್ತಿದೆ ಎಂದು ಮಹಾರಾಷ್ಟ್ರದ ಮಾಜಿ ಸಿಎಂ ಅಶೋಕ್ ಚವಾಣ್ ಹೇಳಿದರು.

ನಗರದ ಕಾಂಗ್ರೆಸ್ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಬಾರಿಯ ಚುನಾವಣೆಗೆ ಕಾಂಗ್ರೆಸ್ ಸಮಗ್ರ ಪ್ರಣಾಳಿಕೆ ಬಿಡುಗಡೆ ಮಾಡಿದೆ ಎಂದು ಹೇಳುವ ಮೂಲಕ ಸ್ವಾಗತಿಸಿದರು. ಪ್ರತಿ ಕುಟುಂಬಕ್ಕೆ 200 ಯೂನಿಟ್ ಉಚಿತ ವಿದ್ಯುತ್, ಅನ್ನಭಾಗ್ಯ ಯೋಜನೆಯಲ್ಲಿ ಬಿಪಿಎಲ್ ಕುಟುಂಬಗಳಿಗೆ ತಿಂಗಳಿಗೆ 10 ಕೆಜಿ ಪಡಿತರ, ಯುವನಿಧಿ ಯೋಜನೆಯಲ್ಲಿ ನಿರುದ್ಯೋಗಿ ಪದವೀಧರರಿಗೆ ಮಾಸಿಕ 3 ಸಾವಿರ, ಮಾಸಿಕ 1500 ರೂ. ಗಳಂತಹ ಎಲ್ಲಾ ಯೋಜನೆಗಳನ್ನು ನೋಡಿದರೆ ಸಾಮಾನ್ಯ ವ್ಯಕ್ತಿ, ಕುಟುಂಬದ ದೈನಂದಿನ ಅಗತ್ಯಗಳನ್ನು ಪೂರೈಸುವುದಾಗಿ ಕಾಂಗ್ರೆಸ್ ಭರವಸೆ ನೀಡಿದೆ ಎಂದರು.

ಡಿಪ್ಲೋಮಾ ಹೊಂದಿರುವ ನಿರುದ್ಯೋಗಿ ಯುವಕರಿಗೆ ಮತ್ತು ಮಹಿಳೆಯರಿಗೆ ಉಚಿತ ಬಸ್ ಪ್ರಯಾಣ 2014ರಲ್ಲಿ ಕಾಂಗ್ರೆಸ್ ನ ಭರವಸೆಗಳನ್ನು ಕಸ ಎಂದು ತಳ್ಳಿಹಾಕಿದ ಪ್ರಧಾನಿ ಮೋದಿ, ಕಪ್ಪುಹಣ ಸಂಗ್ರಹಿಸಿ ದೇಶದ ಪ್ರತಿಯೊಬ್ಬ ನಾಗ–ರಿಕನ ಖಾತೆಗೆ 15 ಲಕ್ಷ ರೂ. ಜಮಾ ಮಾಡುವುದು, ನಿರುದ್ಯೋಗಿಗಳಿಗೆ 2 ಕೋಟಿ ಉದ್ಯೋಗ, ಅಗ್ಗದ ದರದಲ್ಲಿ ಪೆಟ್ರೋಲ್ ನೀಡುವುದು ಸೇರಿದಂತೆ ಹಲವು ಭರವಸೆಗಳನ್ನು ನೀಡಿದ ಮೋದಿಯರು ದೇಶ ಹಾಗೂ ರಾಜ್ಯದ ಜನರಿಗೆ ಮೋಸ ಮಾಡಿದ್ದಾರೆ ಎಂದು ಡಬಲ್ ಇಂಜಿನ್ ಸರ್ಕಾರ ವಿರುದ್ಧ ವಾಗ್ದಾಳಿ ನಡೆಸಿದರು.

ಕರ್ನಾಟಕದ ಅಭಿವೃದ್ಧಿ ವಿಚಾರದಲ್ಲಿ ಮತ ಕೇಳಲು ಸಾಧ್ಯವಿಲ್ಲ ಎಂದು ಬಿಜೆಪಿಯವರು ಜನರನ್ನು ದಾರಿ ತಪ್ಪಿಸಿ ಗಮನ ಬೇರೆಡೆ ಸೆಳೆಯಲು ಮೀಸಲಾತಿ ಹೆಚ್ಚಳದ ವಿಷಯವನ್ನು ಎತ್ತುತ್ತಿದ್ದಾರೆ. ಆದರೆ ಈ ಮೀಸಲಾತಿ ನಿಷ್ಪ್ರಯೋಜಕವಾಗಿದೆ. ಅವರು ನೀಡಿರುವ ಮೀಸಲಾತಿಯು ಲಿಂಗಾಯತ ಅಥವಾ ವಕ್ಕಲಿಗ ಸಮುದಾಯಕ್ಕೆ ಲಾಭದಾಯಕವಲ್ಲ. ಮುಸ್ಲಿಂ ಸಮುದಾಯದ ಮೀಸಲಾತಿಯನ್ನು ಕಿತ್ತು ಬೇರೆ ಸಮುದಾಯಕ್ಕೆ ನೀಡುವುದು ತಪ್ಪು. ಕೇಂದ್ರದ ಬಿಜೆಪಿ ಸರ್ಕಾರ ಮೀಸಲಾತಿ ಹೆಚ್ಚಳದ ಹಕ್ಕನ್ನು ರಾಜ್ಯಗಳಿಗೆ ನೀಡಿದ್ದರೂ ಪ್ರಯೋಜನವಾಗಿಲ್ಲ. ಏಕೆಂದರೆ ಮೀಸಲಾತಿ ಮಿತಿ ಶೇ.50 ಮೀರಬಾರದು ಎಂದು ಸುಪ್ರೀಂ ಕೋರ್ಟ್ ತೀಪು ನೀಡಿದೆ. ಅದಕ್ಕಾಗಿ ಕಾನೂನಿಗೆ ತಿದ್ದುಪಡಿ ತರಬೇಕು. ಮೀಸಲಾತಿ ಮಿತಿಯನ್ನು ಶೇ.50ಕ್ಕೆ ಏರಿಸಲು ಕಾಂಗ್ರೆಸ್ ಪ್ರಯತ್ನಿಸಲಿದೆ ಎಂದು ಪಕ್ಷದ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹಾಗೂ ನಮ್ಮ ನಾಯಕ ರಾಹುಲ್ ಗಾಂಧಿ ಅವರು ಪ್ರಣಾಳಿಕೆಯಲ್ಲಿ ನೀಡಿರುವ ಭರವಸೆಯನ್ನು ಸ್ವಾಗತಿಸುತ್ತೇನೆ ಎಂದರು.

ಬಿಜೆಪಿಯವರು ಏನೇ ಹೇಳಿಕೊಂಡರೂ ಕಳೆದ 5 ವರ್ಷಗಳ ಬಿಜೆಪಿ ಆಡಳಿತದಲ್ಲಿ ಕರ್ನಾಟಕದಲ್ಲಿ ಆಡಳಿತ ಯಂತ್ರ, ಕಾನೂನು ಸುವ್ಯವಸ್ಥೆ ಕುಸಿದಿದೆ. ಹೀಗಾಗಿ ಮೇ 10ರಂದು ಜನ ಅವರಿಗೆ ತಕ್ಕ ಉತ್ತರ ನೀಡಲಿದ್ದಾರೆ ಎಂದು ಅಶೋಕ್ ಚವ್ಹಾಣ ಹೇಳಿದರು.

ಮಹಾರಾಷ್ಟ್ರದಲ್ಲಿ, ಕಾಂಗ್ರೆಸ್, ಎನ್‌ಸಿಪಿ ಮತ್ತು ಶಿವಸೇನಾ ಉದ್ಧವ್ ಠಾಕ್ರೆ ಗುಂಪು ಮಹಾ ಅಭಿವೃದ್ಧಿ ಮೈತ್ರಿ ಮಾಡಿಕೊಂಡಿರುವಾಗ, ಶಿವಸೇನೆಯ ಸಂಸದ ಸಂಜಯ್ ರಾವುತ್ ಬೆಳಗಾವಿಗೆ ಬಂದು ಮಹಾರಾಷ್ಟ್ರ ಏಕೀಕರಣ ಸಮಿತಿ ಅಭ್ಯರ್ಥಿಗಳ ಪರ ಪ್ರಚಾರ ನಡೆಸಿದಾಗ, ಕರ್ನಾಟಕದಲ್ಲಿ ಎನ್‌ಸಿಪಿ ಚುನಾವಣೆಯಲ್ಲಿ ಸ್ಪರ್ಧಿಸುತ್ತಿದೆ. ಕರ್ನಾಟಕದಲ್ಲಿ ಕಾಂಗ್ರೆಸ್ ಯಾರೊಂದಿಗೂ ಮೈತ್ರಿ ಹೊಂದಿಲ್ಲ ಎಂದು ಅಶೋಕ್ ಚವಾಣ್ ಹೇಳಿದ್ದಾರೆ. ಆದ್ದ–ರಿಂದ, ಪ್ರತಿ ಪಕ್ಷವು ತನ್ನ ನಿಲುವು ಮತ್ತು ಅಭಿಪ್ರಾಯಗಳನ್ನು ಇಲ್ಲಿ ಪ್ರಸ್ತುತಪಡಿಸುವ ಹಕ್ಕನ್ನು ಹೊಂದಿದೆ. ರಾಷ್ಟ್ರೀಯ ಪಕ್ಷವಾಗಿ ತನ್ನ ಸ್ಥಾನಮಾನವನ್ನು ಮರಳಿ ಪಡೆಯಲು ಎನ್‌ಸಿಪಿ 8–9 ಅಭ್ಯರ್ಥಿಗಳನ್ನು ಕಣಕ್ಕಿಳಿಸಿರಬಹುದು ಎಂದು ಅವರು ಹೇಳಿದರು.

ಬಜರಂಗದಳವನ್ನು ನಿಷೇಧಿಸುವ ಕಾಂಗ್ರೆಸ್ ಘೋಷಣೆಯ ನಂತರ ಕರ್ನಾಟಕದ ದೇವಾಲಯಗಳಲ್ಲಿ ಹನುಮಾನ್ ಚಾಲೀಸಾ ಪಠಣವನ್ನು ಆಯೋಜಿಸುತ್ತಿರುವ ವಿಷಯದ ಬಗ್ಗೆ ಮಾತನಾಡಿದ ಚವಾಣ್, ನಾವು ದೇವರನ್ನು ಪ್ರಾರ್ಥಿಸುತ್ತೇವೆ, ಪ್ರತಿಯೊಂದು ಧರ್ಮದ ನಾಗ–ರಿಕರು ತಮ್ಮದೇ ಆದ ದೇವತೆಗಳನ್ನು ಪೂಜಿಸುತ್ತಾರೆ.ಆದರೆ ಅದನ್ನು ಸಾರ್ವಜನಿಕವಾಗಿ ಪ್ರದರ್ಶಿಸುವ ಅಗತ್ಯವೇನು? ಕಳೆದ ಐದು ವರ್ಷಗಳಿಂದ ಯಾರಾದರೂ ಪ್ರತಿದಿನ ಹನುಮಾನ್ ಚಾಲೀಸಾವನ್ನು ಪಠಿಸುತ್ತಿದ್ದಾರೆ, ಆದರೆ ಈಗ ಚುನಾವಣಾ ಸಮಯದಲ್ಲಿ ಅವರು ಹನುಮಾನ್ ಚಾಲೀಸಾವನ್ನು ಹೇಗೆ ನೆನಪಿಸಿಕೊಳ್ಳುತ್ತಾರೆ ಎಂದು ಅಶೋಕ್ ಚವ್ಹಾಣ ಕೇಳಿದರು. ಸುದ್ದಿಗೋಷ್ಠಿಯಲ್ಲಿ ಕಾಂಗ್ರೆಸ್ ಜಿಲ್ಲಾಧ್ಯಕ್ಷ ವಿನಯ್ ನಾವಲಗಟ್ಟಿ ಸೇರಿದಂತೆ ಇತರ ಕಾಂಗ್ರೆಸ್ ಮುಖಂಡರು ಉಪಸ್ಥಿತ–ರಿದ್ದರು.

## ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ರಚನೆಯಾಗುವುದು ಖಚಿತ: ಲಕ್ಷ್ಮಣ ಸವದಿ



ವಿಜಯಪುರ: ರಾಜ್ಯದಲ್ಲಿ ಕಾಂಗ್ರೆಸ್ ಪರ ಅಲೆ ಇದ್ದು, ನಿತ್ಯ ಸೂರ್ಯ–ಚಂದ್ರ ನಿತ್ಯ ಹುಟ್ಟುವಷ್ಟೇ ಕಾಂಗ್ರೆಸ್ ಸರ್ಕಾರ ರಚನೆಯಾಗುವುದು ಖಚಿತ ಎಂದು ಮಾಜಿ ಸಚಿವ ಲಕ್ಷ್ಮಣ ಸವದಿ ಹೇಳಿಕೆ ನೀಡಿದ್ದಾರೆ.

ನಗರದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಬಿಜೆಪಿ ಆಂತ–ರಿಕ ಕಚ್ಚಾಟದಿಂದ ಕಂಗೆಟ್ಟಿದ್ದು, ಬಹುತೇಕ ನಾಯಕರು, ಕಾರ್ಯಕರ್ತರು ಕಾಂಗ್ರೆಸ್ ಸೇರಿದಂತೆ ಇತರೆ ಪಕ್ಷಗಳಿಗೆ ವಲಸೆ ಹೋಗಿದ್ದಾರೆ. ಹೀಗಾಗಿ ಬಿಜೆಪಿ ಚುನಾವಣೆಯಲ್ಲಿ 60ಕ್ಕಿಂತ ಹೆಚ್ಚು ಸ್ಥಾನ ಗೆಲ್ಲುವುದು ಕಠಿಣವಾಗಿದೆ. 140 ಕ್ಕಿಂತ ಹೆಚ್ಚಿನ ಸ್ಥಾನಗಳಲ್ಲಿ ಗೆದ್ದು ಕಾಂಗ್ರೆಸ್ ಸುಭದ್ರ ಸರ್ಕಾರ ರಚನೆ ಆಗಲಿದೆ ಎಂದು ಬಿಜೆಪಿ ತೊರೆದು ಕಾಂಗ್ರೆಸ್ ಸೇರಿರುವ ಮಾಜಿ ಡಿಸಿಎಂ ಲಕ್ಷ್ಮಣ ಸವದಿ ವಿಶ್ವಾಸ ವ್ಯಕ್ತಪಡಿಸಿದರು ಎಂದರು.

ನಾನು ಈಗಾಗಲೇ ಗದಗ, ಕೊಪ್ಪಳ, ಬೆಳಗಾವಿ ಪ್ರಚಾರ ಮುಗಿಸಿದ್ದು, ವಿಜಯಪುರ ಜಿಲ್ಲೆಯಲ್ಲಿ ಪ್ರಚಾರ ನಡೆಸಿದ್ದೇನೆ. ಬಾಗಲಕೋಟೆ, ಕಲಬುರಗಿ ಜಿಲ್ಲೆಯ ಪ್ರವಾಸ ಮಾಡಲಿದ್ದು, ಪಕ್ಷ ಸೂಚಿಸುವ ಸ್ಥಳದಲ್ಲಿ ಪ್ರಚಾರ ಮಾಡಲಿದ್ದೇನೆ ಎಂದರು.

## ಒಂದೇ ಪಕ್ಷಕ್ಕೆ ಸ್ಪಷ್ಟ ಬಹುಮತ: ಕೋಡಿಮಠ ಶ್ರೀಗಳಿಂದ ಚುನಾವಣೆ ಭವಿಷ್ಯ



ಮಾಗಡಿ: ನಿಖರ ಭವಿಷ್ಯಕ್ಕೆ ಹೆಸರಾದ ಕೋಡಿಮಠ ಶ್ರೀಗಳು ವಿಧಾನಸಭೆ ಚುನಾವಣೆ ಫಲಿತಾಂಶದ ಬಗ್ಗೆ ನೀಡಿರುವ ಭವಿಷ್ಯ ಜಾಲತಾಣಗಳಲ್ಲಿ ವೈರಲ್ ಆಗಿದೆ. ರಾಜಕೀಯ ವಿದ್ಯಮಾನ, ಮಳೆ ಮೊದಲಾದ ವಿಚಾರಗಳ ಬಗ್ಗೆ ಕೋಡಿಮಠ ಶ್ರೀಗಳಾದ ಡಾ. ಶಿವಾನಂದ ಶಿವಯೋಗಿ ರಾಜೇಂದ್ರ ಮಹಾಸ್ವಾಮೀಜಿ ಭವಿಷ್ಯವಾಣಿ ನುಡಿಯುತ್ತಾರೆ. ಅವರ ಭವಿಷ್ಯಗಳು ನಿಖರವಾಗಿರುತ್ತವೆ ಎಂಬ ನಂಬಿಕೆ ಇದೆ. ರಾಜ್ಯದಲ್ಲಿ ಪ್ರಸ್ತುತ ವಿಧಾನಸಭೆ ಚುನಾವಣೆ ನಡೆಯುತ್ತಿದ್ದು, ಕೋಡಿಮಠ ಶ್ರೀಗಳು ಈ ಕುರಿತಾಗಿ ಭವಿಷ್ಯ ವಾಣಿ ನುಡಿದಿದ್ದಾರೆ. ರಾಜ್ಯದಲ್ಲಿ ಒಂದು ಪಕ್ಷ ಮಾತ್ರ ಅಧಿಕಾರಕ್ಕೆ ಬರುತ್ತದೆ. ಸಮ್ಮಿಶ್ರ ಸರ್ಕಾರ ಈ ಬಾರಿ ಬರುವುದಿಲ್ಲ. ಒಂದೇ ಪಕ್ಷ ಸ್ಪಷ್ಟ ಬಹುಮತ ಪಡೆದುಕೊಳ್ಳುತ್ತದೆ ಎಂದು ಶ್ರೀಗಳು ಹೇಳಿದ್ದು, ಅವರ ಹೇಳಿಕೆ ಜಾಲತಾಣಗಳಲ್ಲಿ ವೈರಲ್ ಆಗಿದ್ದು, ಭಾರೀ ಕುತೂಹಲ ಮೂಡಿಸಿದೆ.

## ಬೆ. ಜಿ. ಬ್ರಾಹ್ಮಣ ಸಮಾಜದ ಪದಾಧಿಕಾರಿಗಳ ಆಯ್ಕೆ



ಬೆಳಗಾವಿ: ಇತ್ತೀಚೆಗೆ ಬೆಳಗಾವಿ ಜಿಲ್ಲಾ ಬ್ರಾಹ್ಮಣ ಸಮಾಜದವರು ಉದ್ಯಮಬಾಗದಲ್ಲಿರುವ ಸೆಲಿಬ್ರೇಶನ್ ಹಾಲ್ ದಲ್ಲಿ ಸಭೆನ್ನು ಕರೆದಿದ್ದರು. ಈ ಸಭೆಯಲ್ಲಿ ಪದಾಧಿಕಾರಿಗಳ ಆಯ್ಕೆ ಹಾಗೂ ಇತರ ವಿಷಯಗಳನ್ನು ಚರ್ಚಿಸಲಾಯಿತು.

ರಾಮ ಭಂಡಾರೆ (ಅಧ್ಯಕ್ಷ), ಭರತ ದೇಶಪಾಂಡೆ (ಉಪಾಧ್ಯಕ್ಷ) ವಿಲಾಸ ಬದಾಮಿ (ಕಾರ್ಯದರ್ಶಿ), ಆರ್. ಎಸ್. ಕುಲಕರ್ಣಿ (ಖಜಾಂಚಿ), ವಿಲಾಸ ಜೋಶಿ (ಜಂಟಿ ಕಾರ್ಯದರ್ಶಿ) ಗಳಾಗಿ ಆಯ್ಕೆಗೊಂಡರು

ಅಧ್ಯಕ್ಷರಾದ ರಾಮ ಭಂಡಾರೆ ಮಾತನಾಡುತ್ತ ಬೆಳಗಾವಿ ಜಿಲ್ಲೆ ಎಲ್ಲ ತಾಲೂಕುಗಳಲ್ಲಿರುವ ಬ್ರಾಹ್ಮಣ ಸಮಾಜದವರನ್ನು ಒಂದೆಡೆ ಸೇರಿಸಿ ಶಕ್ತಿಯುತ ಸಮಾಜವನ್ನಾಗಿ ಮಾಡುವಲ್ಲಿ ಸಂಘ ಶ್ರಮಿಸುತ್ತದೆ ಎಂದು ಹೇಳಿದರು.

ಕಾರ್ಯದರ್ಶಿ ವಿಲಾಸ ಬದಾಮಿ ಸಂಘದ ಉದ್ದೇಶಗಳನ್ನು ವಿವ–ರಿಸುತ್ತ ಸಮಾಜದ ಒಗ್ಗಟ್ಟು, ಪ್ರಗತಿ ಮತ್ತು ಒಳಿತಿಗಾಗಿ ಶ್ರಮಿಸುವುದು. ಸಮಾಜದ ಸಾಮಾಜಿಕ – ಆರ್ಥಿಕ ಸರ್ವತೋಮುಖ ಸುಧಾರಣೆಗಾಗಿ ಬೆಂಬಲ ನೀಡುವುದು.

ತಾಂತ್ರಿಕ, ವೈದ್ಯಕೀಯ ಮತ್ತು ಸಾರ್ವಜನಿಕ ಸೇವಾ ಪರೀಕ್ಷೆಗಳಿಗಾಗಿ ಅಭ್ಯಾಸ ಮಾಡುವ ವಿದ್ಯಾರ್ಥಿಗಳನ್ನು ಉತ್ತೇಜಿಸಲು ಬಹುಮಾನಗಳು ಹಾಗೂ ಸ್ಕಾಲರ್ಶಿಪ್ ಮೊದಲಾದವುಗಳ ಮೂಲಕ ಸಹಾಯ ಮಾಡುವುದು.

ಉದ್ಯಮ ಅಥವಾ ಯಾವುದೇ ವಾಣಿಜ್ಯಾತ್ಮಕ ವ್ಯವಹಾರ ಆರಂಭಿಸಲು ನಮ್ಮ ಸಮಾಜದವರಿಗೆ ಬೆಂಬಲ ಒದಗಿಸುವುದು. *ಮಹಿಳಾ ಉದ್ಯಮಕ್ಕೆ ಬೆಂಬಲ ನೀಡುವುದು ಸಾಮರ್ಥ್ಯ ಅಭಿವೃದ್ಧಿ ಕೇಂದ್ರಗಳನ್ನು ಮತ್ತು ಆರ್. ಆ್ಯಂಡ್ ಡಿ ಕೇಂದ್ರಗಳನ್ನು, ಸ್ಟಾರ್ಟಪ್ ಗಳನ್ನು ಪ್ರಾರಂಭಿಸಲು ಸಾಧ್ಯವಾದ ರೀತಿಯಲ್ಲಿ ಪ್ರೋತ್ಸಾಹ ಮತ್ತು ಬೆಂಬಲ ನೀಡುವುದು ಎಂದು ಹೇಳಿದರು.

# ತಂದೆಗೆ ಟಿಕೆಟ್ ಸಿಕ್ಕಿದ್ದಕ್ಕೆ ಗಾಳಿಯಲ್ಲಿ ಗುಂಡು ಹಾರಿಸಿದ ಬಿಜೆಪಿ ಅಭ್ಯರ್ಥಿಯ ಪುತ್ರ




ವಿಜಯಪುರ: ಬಬಲೇಶ್ವರ ಮತಕ್ಷೇತ್ರದಲ್ಲಿ ತಂದೆಗೆ ಟಿಕೆಟ್ ಸಿಕ್ಕಿದ್ದಕ್ಕೆ ಬಿಜೆಪಿ ಅಭ್ಯರ್ಥಿ ವಿಜುಗೌಡ ಪಾಟೀಲ್ ಪುತ್ರ ಗಾಳಿಯಲ್ಲಿ ಗುಂಡು ಹಾರಿಸಿ ಸಂಭ್ರಮಾಚರಣೆ ಮಾಡುತ್ತಿರುವ ವೀಡೀಯೋವೊಂದನ್ನು ಕಾಂಗ್ರೆಸ್ ಮುಖಂಡರು ಬಿಡುಗಡೆ ಗೊಳಿಸಿದ್ದಾರೆ.

ವಿಜಯಪುರ ಕೆಪಿಸಿಸಿ ಪ್ರಚಾರ ಸಮೀತಿ ವಕ್ತಾರ ಸಂಗಮೇಶ ಬಬಲೇಶ್ವರ ಹಾಗೂ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ರಾಜು ಅಲಗೂರ ಜಂಟಿ ಸುದ್ದಿಗೋಷ್ಠಿ ನಡೆಸಿದ್ದು, ಈ ವೇಳೆ ವೀಡಿಯೋವನ್ನು ಬಿಡುಗಡೆ ಗೊಳಿಸಿದ್ದಾರೆ. ವೀಡಿಯೋದಲ್ಲಿ ಬಿಜೆಪಿ ಅಭ್ಯರ್ಥಿ ಪುತ್ರ ಸಮಥ–ರ್ ವಿಜುಗೌಡ ಪಾಟೀಲ್ ಗಾಳಿಯಲ್ಲಿ 2 ಗುಂಡು ಹಾರಿಸಿ ಸಂಭ್ರಮಾಚರಣೆ ಮಾಡುತ್ತಿದ್ದಾರೆ.

ಈ ಬಗ್ಗೆ ಮಾತನಾಡಿದ ವಿಜಯಪುರ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ರಾಜು ಅಲಗೂರ ಬಿಜೆಪಿ ಅಭ್ಯರ್ಥಿ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ಬಬಲೇಶ್ವರ ಮತಕ್ಷೇತ್ರದಲ್ಲಿ ಬಿಜೆಪಿ ಅಭ್ಯರ್ಥಿ ವಿಜುಗೌಡ ಪಾಟೀಲ ಗುಂಡಾಗಿರಿ ಮಾಡುತ್ತಿದ್ದಾರೆ. ಜನರಿಗೆ ಕರೆ ಮಾಡಿ ಬೆದರಿಸಿ ಮತ ಕೇಳುತ್ತಿದ್ದಾರೆ. ಅಷ್ಟೇ ಅಲ್ಲದೇ ಬಿಜೆಪಿ ಟಿಕೆಟ್ ಘೋಷಣೆ ಆಗುತ್ತಿದ್ದಂತೆ ಗುಂಡು ಹಾರಿಸಿ ಸಂಭ್ರಮಾಚರಣೆ ಮಾಡಿದ್ದಾರೆ. ಬಿಜೆಪಿ ಅಭ್ಯರ್ಥಿ ವಿಜುಗೌಡ ಪಾಟೀಲ್ ಪುತ್ರ ಸಮರ್ಥ ವಿಜುಗೌಡ ಪಾಟೀಲ್ ಗಾಳಿಯಲ್ಲಿ ಎರಡು ಗುಂಡು ಹಾರಿಸಿದ್ದಾನೆ ಎಂದು ಆರೋಪಿಸಿದರು.

ಬಿಜೆಪಿಯ ನೈತಿಕತೆ ಇದೇನಾ, ಇಂತಹ ಗುಂಡಾ ಅಭ್ಯರ್ಥಿ ಟಿಕೆಟ್ ನೀಡಿದೆ. ಇದಕ್ಕೆ ಅಮಿತ್ ಶಾ ಉತ್ತರ ನೀಡಬೇಕು. ನಮ್ಮ ಮತಕ್ಷೇತ್ರ ಬಿಹಾರ ಆಗಬಾರದು. ಇಂತಹ ಗುಂಡಾ ಅಭ್ಯರ್ಥಿ ಮತ ನೀಡಬಾರದು ಎಂದು ಮನವಿ ಮಾಡಿದ ಕಾಂಗ್ರೆಸ್ ಮುಖಂಡರು ಗುಂಡು ಹಾ–ರಿಸಿದ ವೀಡಿಯೋವನ್ನು ಬಿಡುಗಡೆ ಮಾಡಿದರು.

## ಬಬಲೇಶ್ವರ ಬಿಜೆಪಿ ಅಭ್ಯರ್ಥಿ ಪುತ್ರನಿಂದ ಗಾಳಿಯಲ್ಲಿ ಗುಂಡು ಗೂಂಡಾಗಳಿಗೆ ಟಿಕೆಟ್ ಎಂದು ಕಿಡಿಕಾರಿದ ಕಾಂಗ್ರೆಸ್



ವಿಜಯಪುರ: ಜಿಲ್ಲೆಯ ಬಬಲೇಶ್ವರ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ವಿಜುಗೌಡ ಪುತ್ರ ಸಮರ್ಥ ಗೌಡ ಪಿಸ್ತೂಲ್ ನಿಂದ ಗಾಳಿಯಲ್ಲಿ ಮೂರು ಸುತ್ತಿನ ಗುಂಡು ಹಾರಿಸಿ ಸಂಭ್ರಮಿಸಿರುವ ವಿಡಿಯೊ ಮಾಧ್ಯಮಗಳಲ್ಲಿ ವರದಿಯಾಗುತ್ತಿದ್ದಂತೆ ಪ್ರತಿಪಕ್ಷ ಕಾಂಗ್ರೆಸ್ ಕಿಡಿಕಾರಿದೆ.

ಬಿಜೆಪಿ ಗೂಂಡಾಗಳಿಗೆ ಟಿಕೆಟ್ ನೀಡಿದೆ ಎಂದು ಕೆಪಿಸಿಸಿ ವಕ್ತಾರ ಸಂಗಮೇಶ ಬಬಲೇಶ್ವರ ಆರೋಪ ಮಾಡಿದ್ದಾರೆ.

ನಡೆದಿದ್ದೇನು?: ಬಿಜೆಪಿಯಿಂದ ತಮ್ಮ ತಂದೆ ವಿಜುಗೌಡ ಪಾಟೀಲ್ ಗೆ ಟಿಕೆಟ್ ಸಿಕ್ಕಿದ್ದಕ್ಕೆ ಪುತ್ರ ಸಮರ್ಥಗೌಡ ಪಿಸ್ತೂಲ್‌ನಿಂದ ಗಾಳಿಯಲ್ಲಿ ಮೂರು ಸುತ್ತಿನ ಗುಂಡು ಹಾರಿಸಿ ವಿಚಿತ್ರವಾಗಿ ಸಂಭ್ರಮಿಸಿದ್ದರು. ಈ ವಿಡಿಯೋ ವೈರಲ್ ಆಗಿದೆ. ಇದನ್ನು ಸಂಗಮೇಶ ಪ್ರಶ್ನೆ ಮಾಡಿದ್ದಾರೆ. ಯಾವ ಆಧಾರದ ಮೇಲೆ ಇವರಿಗೆ ಟಿಕೆಟ್ ಕೊಟ್ಟಿದ್ದೀರಿ ಎಂದು ಬಿಜೆಪಿ ವರಿಷ್ಠರಿಗೆ ಕೆಪಿಸಿಸಿ ವಕ್ತಾರ ಸಂಗಮೇಶ ಬಬಲೇಶ್ವರ ಪ್ರಶ್ನೆ ಮಾಡಿದ್ದಾರೆ. 'ಗೂಂಡಾಗಳಿಗೆ ಬಿಜೆಪಿ ಟಿಕೆಟ್ ಕೊಟ್ಟಿದೆ ಎಂದು ಬಿಜೆಪಿ ವಿರುದ್ಧ ಸಂಗಮೇಶ ವಾಗ್ದಾಳಿ ಮಾಡಿದ್ದಾರೆ.

ಈ ವಿಡಿಯೊವನ್ನು ವಿಜಯಪುರದಲ್ಲಿ ಕಾಂಗ್ರೆಸ್ ಜಿಲ್ಲಾಧ್ಯಕ್ಷ ರಾಜು ಅಲಗೂರು, ಮುಖಂಡ ಸಂಗಮೇಶ ಅವರು ಬಿಡುಗಡೆ ಮಾಡಿದ್ದಾರೆ. ಮಾಧ್ಯಮಗೋಷ್ಠಿ ಕರೆದು ಗುಂಡು ಹಾರಿಸಿದ ವಿಡಿಯೋ ತೋ–ರಿಸಿದ್ದಾರೆ. ಬಬಲೇಶ್ವರ ಕ್ಷೇತ್ರದಲ್ಲಿ ಬಿಜೆಪಿ ಅಭ್ಯರ್ಥಿಯಿಂದ ಗೂಂಡಾಗಿರಿ ನಡೆಯುತ್ತಿದೆ. ಇಂತಹವರು ಅಭ್ಯರ್ಥಿ ಆಗಿದ್ದಾರೆ. ಬಿಜೆಪಿಯ ಕೇಂದ್ರ ಸಚಿವ ಅಮಿತ್ ಶಾ ಹಾಗೂ ಇತರೆ ನಾಯಕರು ಕ್ರಮಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.

## ಗುಂಡು ಹಾರಿಸಿಕೊಂಡು ಪೊಲೀಸ್ ಕಾನ್ ಸ್ಟೆಬಲ್ ಆತ್ಮಹತ್ಯೆ



ಕಲಬುರಗಿ: ಪೊಲೀಸ್ ಕಾನ್ ಸ್ಟೆಬಲ್ ಒಬ್ಬರು ರೈಫಲ್ ನಿಂದ ಗುಂಡು ಹಾರಿಸಿಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಈ ದುರ್ಘಟನೆ ಪಟ್ಟಣದ ತಹಶೀಲ್ದಾರ್ ಕಚೇರಿಯ ಕಟ್ಟಡದ ಮೇಲೆ ನಡೆದಿರುವುದು ಬೆಳಕಿಗೆ ಬಂದಿದೆ.

ಮೃತಪಟ್ಟ ಪೊಲೀಸ್ ಕಾನ್ ಸ್ಟೆಬಲ್ ಮಲ್ಲಿಕಾರ್ಜುನ ಅವರು ಶಹಾಬಾದ್ ನಗರದ ಮಡ್ಡಿ ಏರಿಯಾದವರು ಎಂದು ಪೊಲೀಸರು ತಿಳಿಸಿದ್ದಾರೆ. ತಹಶೀಲ್ದಾರ್ ಕಚೇರಿಯಲ್ಲಿ ಕಸಗುಡಿಸುವವರು ಕಟ್ಟಡದ ಮೇಲೆ ಬಂದಾಗ ಈ ದುರ್ಘಟನೆ ನಡೆದಿರುವುದು ಬೆಳಕಿಗೆ ಬಂದಿದೆ. ಗಂಟಲಿನ ಮೂಲಕ ನುಗ್ಗಿದ ಗುಂಡು ನೆತ್ತಿಯ ಮೂಲಕ ಹೊರಗೆ ಬಂದಿದೆ. ಕೈಯಲ್ಲಿ ಬಂದೂಕು ಹಿಡಿದುಕೊಂಡಿರುವ ಸ್ಥಿತಿಯಲ್ಲಿ ಮೃತದೇಹದ ಕಂಡುಬಂದಿದೆ. ರಾತ್ರಿ ಪಾಳಿಯ ಕರ್ತವ್ಯದಲ್ಲಿದ್ದ ಮಲ್ಲಿಕಾರ್ಜುನ ಅವರು ರಾತ್ರಿ ಗಸ್ತು ಮಾಡುತ್ತಾ ಬೆಳಗಿನ ಜಾವ ಮೂರು ಗಂಟೆಗೆ ತಹಶೀಲ್ದಾರ್ ಕಚೇರಿಗೆ ಬಂದಿದ್ದಾರೆ. ಜೊತೆಯಲ್ಲಿದ್ದವರಿಗೆ, ಸ್ವಲ್ಪ ಮೇಲೆ ಹೋಗಿ ಬರುತ್ತೇನೆ ಎಂದು ಕಟ್ಟಡದ ಮೇಲೆ ಹೊಗಿದ್ದಾರೆ. ನಂತರ ಅವರ ಮೊಬೈಲಿಗೆ ಕರೆ ಮಾಡಿದಾಗ ಕರೆ ಸ್ವೀಕರಿಸದಿದ್ದಾಗ ನಿದ್ರೆ ಮಾಡುತ್ತಿರಬೇಕು ಎಂದು ಜೊತೆಗೆ ಬಂದವರು ಭಾವಿಸಿ ಸುಮ್ಮನಾಗಿದ್ದಾರೆ ಎಂದು ತಿಳಿದು ಬಂದಿದೆ. ಸುದ್ದಿ ತಿಳಿಯುತ್ತಿದ್ದಂತೆ ಸ್ಥಳೀಯ ಪೊಲೀಸ್ ಠಾಣೆಯ ಸಿಪಿಐ ಶಿವಾನಂದ ಅಂಬಿಗೇರ, ಪಿಎಸ್ಐ ನಂದಕುಮಾರ, ತಹಶೀಲ್ದಾರ್ ಷಾಷಾವಲಿ ಅವರು ಘಟನಾ ಸ್ಥಳಕಕೆ ದೌಡಾಯಿಸಿ ಪರಿಶೀಲಿಸಿದ್ದಾರೆ.

## ರಾಮದುರ್ಗದಲ್ಲಿ ವಿಜಯದ ಮಾಲೆ ಯಾರ ಕೊರಳಿಗೆ..?



ಬೆಳಗಾವಿ: ರಾಮದುರ್ಗ ಕ್ಷೇತ್ರ ಜಿಲ್ಲೆಯ ಪ್ರತಿಷ್ಠಿತ ಕ್ಷೇತ್ರಗಳಲ್ಲಿ ಒಂದು. ಸದ್ಯ ವಿಧಾನಸಭೆ ಚುನಾವಣೆಗೆ ಅಖಾಡ ಸಿದ್ಧವಾಗಿದ್ದು, ಕ್ಷೇತ್ರದಲ್ಲಿ ಮತ್ತೆ ಪಾರುಪತ್ಯ ಮುಂದುವರಿಸಲು ಅಶೋಕ ಪಟ್ಟಣ ಕಸರತ್ತು ನಡೆಸಿದ್ದರೆ, ಬಿಜೆಪಿಯಿಂದ ಅಚ್ಚರಿ ಅಭ್ಯರ್ಥಿ ಚಿಕ್ಕರೇವಣ್ಣ ಸ್ಪರ್ಧೆಗೆ ಅಣಿಯಾಗಿದ್ದಾರೆ.

ಸದ್ಯ ಕ್ಷೇತ್ರದಲ್ಲಿ ಅಶೋಕ ಪಟ್ಟಣ ವರ್ಸಸ್ ಚಿಕ್ಕರೇವಣ್ಣ ಎಂಬ ಸ್ಥಿತಿಯಿದ್ದು, ಹೇಗಾದರೂ ಮಾಡಿ ಕ್ಷೇತ್ರವನ್ನು ಮತ್ತೆ ಕಮಲದ ತೆಕ್ಕೆಗೆ ತೆಗೆದುಕೊಳ್ಳಲು ಕೇಸರಿ ಕಲಿಗಳು ರಣತಂತ್ರ ಹೆಣೆಯುತ್ತಿದ್ದಾರೆ.

ಕ್ಷೇತ್ರದ ವಿಶೇಷತೆ: ಶ್ರೀರಾಮಚಂದ್ರ ಶಬರಿಯನ್ನು ಭೇಟಿಯಾದ ಐತಿಹಾಸಿಕ ಸ್ಥಳ ಇಲ್ಲಿದ್ದು, ಶಬರಿ ದೇವಸ್ಥಾನ ಎಂದೇ ಪ್ರಸಿದ್ಧಿ ಪಡೆದುಕೊಂಡಿದೆ.

ಉತ್ತರಕರ್ನಾಟಕದ ಜಾಗೃತ ಸ್ಥಳ ಗೊಡಚಿ ಶ್ರೀ ವೀರಭದ್ರೇಶ್ವರ ದೇವಸ್ಥಾನ, ತೋರಗಲ್ಲ ಏಳು ಸುತ್ತಿನ ಕೋಟೆ, ಎತ್ತರದ ಶಿವನ ಮೂರ್ತಿ ಇರುವುದು ಕೂಡ ರಾಮದುರ್ಗ ಕ್ಷೇತ್ರದಲ್ಲಿ. ಪೇಶ್ವೆಯ ಮಹಾರಾಜರು, ಭಾವೆ ರಾಜ ಮನೆತನ, ತೋರಗಲ್ಲ ಶಿಂಧೆ ಮನೆತನ ರಾಮದುರ್ಗ ತಾಲೂಕಿನಲ್ಲಿ ಆಡಳಿತ ನಡೆಸಿವೆ. 1939ರಲ್ಲಿ ರಾಮದುರ್ಗದಲ್ಲಿ ಅತೀ ಹೆಚ್ಚು ಕರ ತುಂಬುವಂತೆ ಆದೇಶ ಹೊರಡಿಸಿದ ಹಿನ್ನೆಲೆ ಕರನಿರಾಕರಣೆ ಚಳುವಳಿ ಮಾಡಿದ ಪ್ರಜೆಗಳು ಭಾವೆ ಮಹಾರಾಜನನ್ನು ರಾಮದುರ್ಗದಿಂದ ಓಡಿಸಿದ್ದು ಇತಿಹಾಸ.

ಕ್ಷೇತ್ರದ ಮತದಾರರ ವಿವಿರ: ರಾಮದುರ್ಗ ಕ್ಷೇತ್ರದಲ್ಲಿ 9 ಇತರೆ ಮತದಾರರು ಸೇರಿ ಒಟ್ಟು 2,01,901 ಮತದಾರರಿದ್ದು, 1,02,690 ಪುರುಷ ಮತದಾರರಿದ್ದು, 99,202 ಮಹಿಳಾ ಮತದಾರರಿದ್ದಾರೆ. ಅತೀ ಹೆಚ್ಚು ಲಿಂಗಾಯತ ಮತದಾರರಿದ್ದು, ನಂತರದಲ್ಲಿ ಕುರುಬರು, ಲಂಬಾಣಿ, ಎಸ್ಸಿ–ಎಸ್ಟಿ, ಮುಸ್ಲಿಂದ ಮತದಾರರು ಸೇರಿ ಇನ್ನುಳಿದ ಸಮಾಜಗಳ ಮತದಾರರಿದ್ದಾರೆ.

# ಸರ್ವರ ಹಿತ ಕಾಪಾಡುವುದೇ ಕಾಂಗ್ರೆಸ್‌ನ ಉದ್ದೇಶ: ಪ್ರೊ. ಕೆ.ಈ. ರಾಧಾಕೃಷ್ಣ



ಬೆಳಗಾವಿ: 'ಸರ್ವಜನಾಂಗದ ಶಾಂತಿಯ ತೋಟ' ಎಂಬ ಕವಿ ವಾಣಿಯನ್ನು ಕಾಂಗ್ರೆಸ್ ಪಕ್ಷ ಸಾಕಾರಗೊಳಿಸುತ್ತಿದೆ ಎಂದು ಕರ್ನಾಟಕ ಪ್ರದೇಶ ಕಾಂಗ್ರೆಸ್ ಪ್ರಣಾಳಿಕೆ ಸಮಿತಿಯ ಉಪಾಧ್ಯಕ್ಷ ಪ್ರೊ. ಕೆ.ಈ. ರಾಧಾಕೃಷ್ಣ ಹೇಳಿದರು. ನಗರದ ಕಾಂಗ್ರೆಸ್ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷದ ಪ್ರಣಾಳಿಕೆಯಲ್ಲಿ ಕೃಷಿ, ಕೈಗಾ–ರಿಕೆ, ಸಾರ್ವಜನಿಕ ಸೇವೆ, ಕಾನೂನು ಮತ್ತು ನ್ಯಾಯ, ನಗರಾಭಿವೃದ್ಧಿ, ಶಿಕ್ಷಣ, ಆರೋಗ್ಯ ಹೀಗೆ ಪ್ರತಿ ವಲಯಕ್ಕೂ ಆದ್ಯತೆ ನೀಡಿದ್ದೇವೆ ಎಂದು ತಿಳಿಸಿದರು.

ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದರೆ ಬಿಪಿಎಲ್ ಕುಟುಂಬಕ್ಕೆ 10 ಕೆಜಿ ಅಕ್ಕಿ ಉಚಿತವಾಗಿ ನೀಡುವುದು, ಹಾಗೆಯೇ ಅಲ್ಪಸಂಖ್ಯಾತರಿಗೆ ಒಬಿಸಿ 2ಬಿ ವರ್ಗದಡಿ ಶೇ 4ರಷ್ಟು ಮೀಸಲಾತಿಯನ್ನು ಪುನಃ ನೀಡುವುದು, ಗೃಹಲಕ್ಷ್ಮಿ, ಶಕ್ತಿ ಯೋಜನೆಗಳ ಜಾರಿಗೆ ಬದ್ಧವಾಗಿರುವುದಾಗಿ ತಿಳಿಸಿದರು.

ಅಂಗನವಾಡಿ ಕಾರ್ಯಕರ್ತೆಯರ ವೇತನ 11,500 ರೂ ದಿಂದ 15,000 ರೂಗೆ ಹೆಚ್ಚಳ. ಮಿನಿ ಅಂಗನವಾಡಿ ಕಾರ್ಯಕರ್ತೆಯರ ವೇತನ 10 ಸಾವಿರ ರೂಪಾಯಿಗೆ ಏರಿಕೆ ಮತ್ತು ವಿಶ್ರಾಂತಿ ವೇತನ 2 ಲಕ್ಷ ರೂ ನೀಡುವುದು. ಆಶಾ ಕಾರ್ಯಕರ್ತೆಯರಿಗೆ ಮಾಸಿಕ ಗೌರವಧನ 8,000 ರೂಗೆ ಹೆಚ್ಚಳ. ಬಿಸಿಯೂಟದ ಅಡುಗೆಯವರಿಗೆ ಮಾಸಿಕ ಗೌರವಧನ 6,000 ರೂಗೆ ಏರಿಕೆ. ಪೊಲೀಸ್ ಇಲಾಖೆಯಲ್ಲಿ ಶೇ 33ರಷ್ಟು ಮಹಿಳೆಯರ ನೇಮಕಾತಿ. ಶೇ 1ರಷ್ಟು ತೃತೀಯ ಲಿಂಗಿಗಳಿಗೆ ಅವಕಾಶ. ರಾತ್ರಿ ಪಾಳಿ ಸಿಬ್ಬಂದಿಗೆ 5 ಸಾವಿರ ರೂ ವಿಶೇಷ ಮಾಸಿಕ ಭತ್ಯೆ ಮತ್ತು ಎಲ್ಲ ಪೊಲೀಸರಿಗೆ ವರ್ಷಕ್ಕೆ ಒಂದು ತಿಂಗಳ ಹೆಚ್ಚುವರಿ ವೇತನ ನೀಡುವುದಾಗಿ ತಿಳಿಸಿದರು. ರೈತರಿಗೆ ಬಡ್ಡಿರಹಿತ ಸಾಲ 3 ಲಕ್ಷ ದಿಂದ 10 ಲಕ್ಷಕ್ಕೆ ವಿಸ್ತರಣೆ. ಶೇ 3ರ ಬಡ್ಡಿದರದಲ್ಲಿ 15 ಲಕ್ಷ ರೂವರೆಗೆ ಸಾಲ. ಸರಕಾರದಿಂದಲೇ ಬಡ್ಡಿ ವ್ಯತ್ಯಾಸ ಪಾವತಿ. ಕೃಷಿ ಉತ್ಪನ್ನ ಮತ್ತು ಸಾಲ ಸಂಬಂಧಿತ ಕ್ಷೇತ್ರಗಳಲ್ಲಿ ಸ್ಟಾರ್ಟ್‌ಅಪ್ ಆರಂಭಿಸಲು ಹಾಗೂ ಸಂಶೋಧನೆಗಳ ಉತ್ತೇಜನಕ್ಕೆ 500 ಕೋಟಿ ರೂಗಳ 'ಕೃಷಿ ಉನ್ನತಿ ನಿಧಿ' ಸ್ಥಾಪನೆ. ಹಾಲಿನ ಸಬ್ಸಿಡಿ ಪ್ರತಿ ಲೀಟರ್‌ಗೆ 5 ರಿಂದ 7 ರೂಗೆ ಹೆಚ್ಚಳ. ಜಾನುವಾರು ಖರೀದಿಗೆ ಶೂನ್ಯ ಬಡ್ಡಿದರದಲ್ಲಿ 3 ಲಕ್ಷ ರೂವರೆಗೆ ಸಾಲ. ಮೀನುಗಾರ ಮಹಿಳೆಯರಿಗೆ 3 ಲಕ್ಷ ರೂವರೆಗೆ ಬಡ್ಡಿರಹಿತ ಸಾಲ. ಮೇಕೆದಾಟು, ಮಹದಾಯಿ ಯೋಜನೆ ಪೂರ್ಣಗೊಳಿಸುವುದು. ಎತ್ತಿನಹೊಳೆ ಯೋಜನೆಯನ್ನು ಎರಡು ವರ್ಷದ ಒಳಗೆ ಸಂಪೂರ್ಣಗೊಳಿಸುವುದು ಹೇಳಿದರು. ಮಂಗಳೂರಿನಲ್ಲಿ ಚಿನ್ನ ಮತ್ತು ವಜ್ರದ ಪಾರ್ಕ್ ಸ್ಥಾಪನೆ. ಗಡಿ ಭಾಗಗಳಲ್ಲಿ ಕೈಗಾರಿಕಾ ಅಭಿವೃದ್ಧಿ ನಿಗಮ ಸ್ಥಾಪನೆ. ಸಣ್ಣ ವ್ಯಾಪಾ–ರಿಗಳು ಮತ್ತು ಅಂಗಡಿಗಳಿಗೆ ಕಡಿಮೆ ಬಡ್ಡಿದರದಲ್ಲಿ ಸಾಲ ನೀಡಲು ಕಲ್ಯಾಣ ನಿಧಿ. ಸ್ಟಾರ್ಟ್ ಅಪ್ ನಿಧಿ ಎಂದು ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ 10 ಕೋಟಿ ರೂ. ಪ್ರವಾಸೋದ್ಯಮ ಅಭಿವೃದ್ಧಿಗಾಗಿ 5 ಸಾವಿರ ಕೋಟಿ ನಿಧಿ. ಹೋಮ್ ಸ್ಟೇ ಮಾಲೀಕರಿಗೆ ಶೇ 5ರ ಬಡ್ಡಿದರದಲ್ಲಿ 10 ಲಕ್ಷದವರೆಗೆ ಸಾಲ. ಸಣ್ಣ ಹೋಟೆಲ್, ಬೇಕರಿ, ಸಿಹಿ ಅಂಗಡಿಗಳಿಗೆ ಶೇ 6ರ ಬಡ್ಡಿದರದಲ್ಲಿ 10 ಲಕ್ಷ ರೂವರೆಗೆ ಸಾಲ ನೀಡಲಾಗುವುದು ಎಂದರು.

ಪ್ರತಿ ಮನೆಗೂ 200 ಯೂನಿಟ್ ಉಚಿತ ವಿದ್ಯುತ್ ಒದಗಿಸುವ ಗೃಹಜ್ಯೋತಿ ಯೋಜನೆ. ಮನೆಗಳಲ್ಲಿ ಬಳಸುವ ಸೌರಶಕ್ತಿ ಪರಿಕರಗಳಿಗೆ ರೂ 3 ಲಕ್ಷದವರೆಗೆ ಶೇ 25ರಷ್ಟು ಸಬ್ಸಿಡಿ. ಬೃಹತ್ ಸೋಲಾರ್ ಪಾರ್ಕ್‌ಗಳ ನಿರ್ಮಾಣಕ್ಕೆ ಉತ್ತೇಜನ. ರಾಜ್ಯದಲ್ಲಿ ಎಲ್ಲ ಮಹಿಳೆಯರಿಗೆ ಶಕ್ತಿ ಯೋಜನೆಯಡಿ ಉಚಿತ ಬಸ್ ಪ್ರಯಾಣ. ಸಾರ್ವಜನಿಕ ಸಾರಿಗೆ ಪಾಲನ್ನು ಶೇ 70ಕ್ಕೆ ಹೆಚ್ಚಿಸುವುದು. ಬಿಎಂಟಿಸಿ ಬಸ್‌ಗಳ ಸಂಖ್ಯೆ 10 ಸಾವಿರಕ್ಕೆ ಹೆಚ್ಚಳ. ಕೆಎಸ್‌ಆರ್‌ಟಿಸಿ ಬಸ್ ಸಂಖ್ಯೆ 15 ಸಾವಿರಕ್ಕೆ ಏರಿಕೆ. ಗ್ರಾಮೀಣ ಮಿನಿ ಬಸ್ ಕಾರ್ಯಕ್ರಮ. ಎರಡು ವರ್ಷಗಳಲ್ಲಿ ಶೇ 50ರಷ್ಟು ವಿದ್ಯುತ್ ಚಾಲಿತ ಬಸ್ ಇರುವಂತೆ ನೋಡಿಕೊಳ್ಳುವುದು. ಒಂದು ವರ್ಷದಲ್ಲಿ ಸರಕಾರಿ ಮತ್ತು ಅನುದಾನಿತ ಶಾಲೆ/ ಕಾಲೇಜುಗಳ ಖಾಲಿ ಹುದ್ದೆಗಳ ನೇಮಕ. ಅವೈಜ್ಞಾನಿಕ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ರದ್ದುಮಾಡಿ, ಕರ್ನಾಟಕ ಶಿಕ್ಷಣ ನೀತಿ ಅನುಷ್ಠಾನ. ಬಿಜೆಪಿ ಸರ್ಕಾರ ಬದಲಿಸಿದ ಪಠ್ಯಪುಸ್ತಕ ವಿಷಯಗಳನ್ನು ಸರಿಪಡಿಸುವುದು. ವರ್ಷಕ್ಕೆ 2,500 ಸ್ಮಾರ್ಟ್ ಶಾಲೆಗಳ ಉನ್ನತೀಕರಣ ಗಳಿಸುವುದಾಗಿ ತಿಳಿಸಿದರು.

ಎಸ್‌ಸಿ ಸಮುದಾಯಕ್ಕೆ ಶೇ 15–17, ಎಸ್‌ಟಿ ಸಮುದಾಯಕ್ಕೆ ಶೇ 3– 5, ಅಲ್ಪಸಂಖ್ಯಾತರಿಗೆ ಶೇ 4ರ ಮೀಸಲಾತಿ ಮರುಸ್ಥಾಪನೆ. ನಿರ್ಲಕ್ಷಿತ ದೇವಸ್ಥಾನಗಳಿಗೆ ವಿಶೇಷ ಪೂಜಾ ನಿಧಿ ಸ್ಥಾಪನೆ. ಸಣ್ಣ ದೇವಸ್ಥಾನ, ಮಠಗಳ ನವೀಕರಣಕ್ಕೆ 1 ಸಾವಿರ ಕೋಟಿ ರೂ. 60 ವರ್ಷ ಮೀರಿದ ಅರ್ಚಕ–ರಿಗೆ ಮಾಸಿಕ 5 ಸಾವಿರ ರೂ ಗೌರವ ಧನ. ಡಾ. ಪುನೀತ್ ರಾಜಕುಮಾರ್ ಹೃದಯ ಆರೋಗ್ಯ ಯೋಜನೆ. ಪ್ರತಿ ಮನೆ ಯಜಮಾನಿಗೆ ಗೃಹ ಲಕ್ಷ್ಮಿ ಯೋಜನೆಯಡಿ ತಿಂಗಳಿಗೆ 2 ಸಾವಿರ ರೂ. ಲಿಂಗತ್ವ ಅಲ್ಪಸಂಖ್ಯಾತರಿಗಾಗಿ 'ಮಂಗಳಮುಖಿ ಯೋಜನೆ ಜಾರಿಗೆ ತರುವುದಾಗಿ ಹೇಳಿದರು.

ವಿಧಾನ ಪರಿಷತ್ ಮಾಜಿ ಅಧ್ಯಕ್ಷ ವಿ.ಆರ್. ಸುದರ್ಶನ್ ಮಾತನಾಡಿ, ಬೆಂಗಳೂರು ನಗರ ಜಿಲ್ಲೆ ಹೊರತು ಪಡಿಸಿದರೆ ಬೆಳಗಾವಿ ಜಿಲ್ಲೆ 18 ಮತಕ್ಷೇತ್ರಗಳನ್ನು ಹೊಂದಿದೆ. ಪ್ರಧಾನಿ ನರೇಂದ್ರ ಮೋದಿ ಅವರು ಎಷ್ಟೇ ಭಾರೀ ಕರ್ನಾಟಕಕ್ಕೆ ಬಂದರೂ ಅವರ ವರ್ಕೌಟ್ ಇಲ್ಲಿ ನಡೆಯಲ್ಲ. ಬರಿ ರಾಜಕೀಯ ಭಾಷಣ ಮಾಡುವ ಪ್ರಧಾನಿಯವರ ಪ್ರಚಾರದಿಂದ ಚುನಾವಣೆಯಲ್ಲಿ ಬಿಜೆಪಿ ಅಧಿಕಾರಕ್ಕೆ ಬರಲು ಸಾಧ್ಯವಿಲ್ಲ. ಬೆಲೆ ಏರಿಕೆಯಿಂದ ಸಾಮಾನ್ಯ ಜನರ ಸ್ಥಿತಿ ದುಸ್ಥಿತಿಗೆ ತಲುಪಿದೆ. ಬಿಜೆಪಿಯವರಿಗೆ ಮತ ಕೇಳಲು ಯಾವುದೇ ನೈತಿಕ ಹಕ್ಕಿಲ್ಲ ಎಂದು ವಾಗ್ದಾಳಿ ನಡೆಸಿದರು.

## ಇಂದು ಕಸಾಪ 109ನೇ ಸಂಸ್ಥಾಪನಾ ದಿನಾಚರಣೆ

ಬೆಳಗಾವಿ: ಸ್ಥಳಿಯ ನೆಹರೂ ನಗರದಲ್ಲಿರುವ ಕನ್ನಡ ಭವನದಲ್ಲಿ ಶುಕ್ರವಾರ ದಿನಾಂಕ 5 ರಂದು ಮುಂಜಾನೆ 11:30ಕ್ಕೆ ಕನ್ನಡ ಸಾಹಿತ್ಯ ಪರಿಷತ್ತು ಬೆಳಗಾವಿ ಜಿಲ್ಲೆಯ, ಕ.ಸಾ.ಪ 109ನೇ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಕಾರ್ಯಕ್ರಮದ ಉದ್ಘಾಟಕರಾಗಿ ಬೆಳಗಾವಿ ಹಸಿರುಕ್ರಾಂತಿ ದಿನಪತ್ರಿಕೆ ಸಂಪಾದಕರು ಶ್ರೀ.ಸಂಪತಕುಮಾರ ಮುಚಳಂಬಿ ಇವರು ಆಗಮಿಸಲಿದ್ದಾರೆ. ಕ.ಸಾ.ಪ. ಬೆಳಗಾವಿ ಜಿಲ್ಲಾಧ್ಯಕ್ಷರಾದ ಶ್ರೀಮತಿ. ಮಂಗಲಾ ಶ್ರೀ ಮೆಟಗುಡ್ಡ ಅಧ್ಯಕ್ಷತೆಯನ್ನು ವಹಿಸಲಿದ್ದಾರೆ. ಬೆಳಗಾವಿಯ ಮಹೇಶ ಪಿ.ಯು ಕಾಲೇಜ ಪ್ರಾಂಶುಪಾಲ ಎಂ.ವ್ಹಿ ಭಟ್ಟ ಅವರು "ಕನ್ನಡದ ಅಸ್ಮಿತೆ ಕನ್ನಡ ಸಾಹಿತ್ಯ ಪರಿಷತ್ತು" ವಿಷಯದ ಕುರಿತು ಉಪನ್ಯಾಸವನ್ನು ನೀಡಲಿದ್ದಾರೆ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಬೆಳಗಾವಿಯ ಶ್ರೀಮತಿ.ರೇವತಿ ಶಿವಯ್ಯಾ ಹೊಸಮಠ ಮತ್ತು ಹಾವೇರಿ ವಿಶ್ವವಿದ್ಯಾಲಯದ ಉಪಕುಲಪತಿಗಳಾದ ಡಾ.ವಿ–ಜಯಲಕ್ಷ್ಮೀ ಪುಟ್ಟಿ ಅವರಿಗೆ ಸನ್ಮಾನಿಸಲಾಗುವುದು. ಹಿರಿಯ ಸಾಹಿತಿ ಸ.ರಾ.ಸುಳಕೂಡೆ ಅವರು ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ. ಎಂ.ವೈ.ಮೆಣಸಿನಕಾಯಿ ಅವರು ಪ್ರಾಸ್ತಾವಿಕ ನುಡಿಗಳನ್ನಾಡಲಿದ್ದಾರೆ.

ವೀರಭದ್ರಪ್ಪ ಅಂಗಡಿ ಅವರು ಪರಿಚಯವನ್ನು ಮಾಡಲಿದ್ದಾರೆ. ಶ್ರೀಮತಿ.ಸುಮಾ ಬೇವಿನಕೊಪ್ಪಮಠ ಹಾಗೂ ಸಂಗಡಿಗರಿಂದ ನಾಡಗೀತೆ. ಶ್ರೀಮತಿ.ಪ್ರತಿಭಾ ಕಳ್ಳಿಮಠ ಅವರು ಕಾರ್ಯಕ್ರಮವನ್ನು ನಿರೂಪಣೆ ಮಾಡಲಿದ್ದಾರೆ. ಪತ್ರಕರ್ತರ ಅಧ್ಯಕ್ಷರು, ಸಂಪಾದಕರಾದ ಶ್ರೀ. ಮುರಗೇಶ ಶಿವಪೂಜೆ ಅವರು ಗೌರವ ಉಪಸ್ಥಿತಿಯಲ್ಲಿರುವರು.

ಕ.ಸಾ.ಪ. ಬೆಳಗಾವಿ ಜಿಲ್ಲೆಯ ಎಲ್ಲ ತಾಲೂಕಾ ಅಧ್ಯಕ್ಷರುಗಳು, ಹಾಗೂ ಜಿಲ್ಲಾ ಕ.ಸಾ.ಪ. ಕಾರ್ಯಕಾರಿ ಸಮಿತಿಯ ಸರ್ವ ಸದಸ್ಯರು, ಕ.ಸಾ.ಪ. ಸರ್ವ ಸದಸ್ಯರು, ಸಾಹಿತಿಗಳು, ಕಲಾವಿದರು ಮತ್ತು

ಕನ್ನಡಪರ ಸಂಘಟನೆಗಳು, ಸಮಸ್ತ ಕನ್ನಡ ಮನಸ್ಸುಗಳು ಎಲ್ಲರೂ ಈ ಕಾರ್ಯಕ್ರಮಕ್ಕೆ ಆಗಮಿಸಿ ಶೋಭೆತರಬೇಕೆಂದು, ಕಸಾಪ ಬೆಳಗಾವಿ ಜಿಲ್ಲಾಧ್ಯಕ್ಷರಾದ ಶ್ರೀಮತಿ ಮಂಗಲಾ ಮೆಟಗುಡ್ಡ ಪ್ರಕಟಣೆಯಲ್ಲಿ ಕೋ–ರಿದ್ದಾರೆ.

## ಬಿಜೆಪಿ ಅಭ್ಯರ್ಥಿ ಪಿ.ರಾಜೀವ್ ಅವರ ಮೇಲೆ ಎರಡು ಪ್ರಕರಣಗಳು ದಾಖಲಾಲು



ಮುಗಳಖೋಡ/ ಹಾರೂಗೇರಿ: ಕುಡಚಿ ಮತಕ್ಷೇತ್ರದ ಬಿಜೆಪಿ ಅಭ್ಯರ್ಥಿ ಪಿ.ರಾಜೀವ್ ಅವರ ಮೇಲೆ ಹಾರುಗೇರಿ ಪೋಲಿಸ್ ಠಾಣೆಯಲ್ಲಿ ಎರಡು ಪ್ರಕರಣಗಳು ದಾಖಲಾಗಿದ್ದು, ಪಿ.ರಾಜೀವ್ ಅವರನ್ನು ಪೋಲಿಸ್ ನಾವರು ಇನ್ನೂ ಬಂದಿಸದಿರುವುದು ಖಂಡನೀಯ. ಚುನಾವಣೆ ಅಧಿಕಾರಿಗಳು ಹಾಗೂ ಪೊಲೀಸ್ ಇಲಾಖೆಯವರು ಬಿಜೆಪಿ ಅಭ್ಯರ್ಥಿ ಪಿ.ರಾಜೀವ್ ಅವರೊಂದಿಗೆ ಶಾಮಿಲ್ ಆಗಿದ್ದಾರೆ ಎಂದು ಅಂಬೇಡ್ಕರ್ ಪೀಪಲ್ಸ್ ಪಾರ್ಟಿ ಅಭ್ಯರ್ಥಿ ಸಿಎಂ ಕೃಷ್ಣ, ಮಂಡ್ಯ ಆರೋಪಿಸಿದ್ದಾರೆ.

ಹಾರೂಗೇರಿ ಪಟ್ಟಣದಲ್ಲಿ ಮಂಗಳವಾರ ಮುಂಜಾನೆ 11 ಗಂಟೆಗೆ ಪೊಲೀಸ್ ಠಾಣೆ ಹಾಗೂ ಪುರಸಭೆಯ ಮುಂಭಾಗದಲ್ಲಿ ಕರೆದ ಬಹಿರಂಗ ಸುದ್ದಿಗೋಷ್ಠಿಯಲ್ಲಿ ಮಾತನಾಡುತ್ತ

ಕುಡಚಿ ಮತಕ್ಷೇತ್ರದ ಬಿಜೆಪಿ ಅಭ್ಯರ್ಥಿ ಪಿ. ರಾಜೀವ್ ಅವರ ಮೇಲೆ ಎರಡು ಪ್ರಕರಣಗಳು ದಾಖಲಾಗಿದ್ದು ,ಏಪ್ರಿಲ್ 12ರಂದು ಒಂದು ಪ್ರಕರಣ ಹಾಗೂ ಏಪ್ರಿಲ್ 30 ರಂದು ಮತ್ತೊಂದು ಪ್ರಖರಣ ದಾಖಲಾಗಿದೆ. ಹಾರೂಗೇರಿ ಪೊಲೀಸ್ ಠಾಣೆಯ ಪಿಎಸ್ಐ ರೇಣುಕಾ ಜಕನುರ ಅವರು ಪಿ.ರಾಜೀವ್ ಅವರನ್ನು ಇನ್ನೂ ವರೆಗೆ ಬಂಧಿಸಿರುವುದಿಲ್ಲ ಏಕೆ ? ಚುನಾವಣೆಯ ಅಧಿಕಾರಿಗಳು ಹಾಗೂ ಬಿಜೆಪಿ ಅಭ್ಯರ್ಥಿ ಪಿ.ರಾಜೀವ್ ಅವರೊಂದಿಗೆ ಶಾಮಿಲಾಗಿ ಹಾಗೂ ಭ್ರಷ್ಟಾಚಾರ ಮೂಲಕ ಆರೋಪಿಯನ್ನ ರಕ್ಷಣೆ ಮಾಡುತ್ತಿದ್ದಾರೆಂದು ಅಂಬೇಡ್ಕರ್ ಪೀಪಲ್ಸ್ ಪಾರ್ಟಿ ಅಭ್ಯರ್ಥಿ ಸಿಎಂ ಕೃಷ್ಣ ಗಂಭೀರವಾಗಿ ಆರಂಭಿಸಿದ್ದಾರೆ.

ಆರೋಪಿ ಬಿಜೆಪಿ ಅಭ್ಯರ್ಥಿ ಪಿ.ರಾಜೀವ್ ಕುಡಚಿ ಮತಕ್ಷೇತ್ರ ಜನರು ಆರೋಪಿಗೆ ಮತ ಹಾಕಬೇಕೇ ? ಚುನಾವಣಾಧಿಕಾರಿ ಎಫ್ ಆರ್ ಐ ಹಾಕಿದರು ಕೂಡ ಪಿ.ರಾಜೀವ್ ಅವರನ್ನು ಬಂಧಿಸುವಲ್ಲಿ ಆಸಕ್ತಿ ತೋರಿಸದೇ ಅವರನ್ನು ಇನ್ನು ಏಕೆ ಅರೆಸ್ಟ್ ಹಾಗೂ ಪೊಲೀಸ್ ಠಾಣಾ ಪಿಎಸ್ಐ ರೇಣುಕಾ ಜಕನೂರ ಅವರನ್ನು ಕೇಳಿದಾಗ ಅವರು ಉತ್ತರ ನೀಡುವಲ್ಲಿ ವಿಫಲರಾಗಿ ಅಲ್ಲಿಂದ ಪಲಾಯನರಾದರು. ಚುನಾವಣಾ ಅಧಿಕಾರಿಗಳು ಹಾಗೂ ಪೊಲೀಸ್ ಇಲಾಖೆಯವರು ಡುಬ್ಲಿಕೇಟ್ ಎಸ್ಸಿ ಬಿಜೆಪಿ ಅಭ್ಯರ್ಥಿ ಪಿ.ರಾಜೀವ್ ಅವರೊಂದಿಗೆ ಶಾಮಿಲಾಗುತ್ತಿದ್ದಾರೆ. ಕೂಡಲೇ ಹಿರಿಯ ಪೊಲೀಸ್ ಅಧಿಕಾರಿಗಳು ಪಿಎಸ್ಐ ರೇಣುಕಾ ಜಕನೂರ ಅವರನ್ನ ಕೂಡಲೇ ಸಸ್ಪೆಂಡ್ ಮಾಡಬೇಕೆಂದು ಒತ್ತಾಯಿಸಿದರು.

ಚುನಾವಣೆ ಅಧಿಕಾರಿಗಳು ಹಾಗೂ ಪೊಲೀಸ್ ಇಲಾಖೆಯವರು ಆರೋಪಿತರನ್ನು ರಕ್ಷಣೆ ಮಾಡುವುದಾದರೆ ಪಾರದರ್ಶಕ, ನ್ಯಾಯಸಮ್ಮತ ಹಾಗೂ ಮುಕ್ತ ಚುನಾವಣೆ ನಡೆಸಲು ಹೇಗೆ ಸಾಧ್ಯ ಎಂದು ಅಧಿಕಾರಿಗಳಿಗೆ ಪ್ರಶ್ನೆ ಮಾಡಿದ್ದಾರೆ. ಕೂಡಲೇ ಬಿಜೆಪಿ ಪಕ್ಷದ ಅಭ್ಯರ್ಥಿ ಆರೋಪಿ ಪಿ.ರಾಜೀವ್ ಅವರನ್ನು ಪೊಲೀಸ್ ಅಧಿಕಾರಿಗಳು ಬಂಧಿಸಬೇಕೆಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಲಕ್ಷ್ಮಣ ಕರಿಭೀಮಗೋಳ, ಮಾರುತಿ ಮಾದರ, ಸದಾಶಿವ ದೊಡ್ಡಮನಿ, ಭೀಮು ಐಹೊಳೆ, ಶ್ರೀಮತಿ ಸುಮಿತ್ರ ಕೃಷ್ಣ, ಗೀತಾ ದೊಡಮನಿ, ನಾಗಪ್ಪ ಮೇತ್ರಿ, ಯಮನಪ್ಪ ಐಹೊಳೆ, ಉದಯ ಸಂದ್ರಿಮನಿ, ಸಂಜು ಮಾದರ, ಮಂಜು ಮಾದರ ಇತರರು ಇದ್ದರು.

### ಅಪಾರ ಜನಸ್ತೋಮದ ಮಧ್ಯೆ ವಿವಿಧೆಡೆ ಲಕ್ಷ್ಮೀ ಹೆಬ್ಬಾಳಕರ್ ಮತ ಯಾಚನೆ

## ಯಾವ ಜನ್ಮದ ಪುಣ್ಯವೋ ಗೊತ್ತಿಲ್ಲ ನಿಮ್ಮ ಇಷ್ಟೊಂದು ಪ್ರೀತಿ ಪಡೆದಿದ್ದೇನೆ: ಹೆಬ್ಬಾಳಕರ್

ಬೆಳಗಾವಿ: ಕಳೆದ 5 ವರ್ಷ ಯಾವುದೇ ತಾರತಮ್ಯವಿಲ್ಲದೇ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ನಿಮ್ಮ ಮನೆ ಮಗಳಂತೆ ಕೆಲಸ ಮಾಡಿದ್ದೇನೆ. ಮೇ 10ರಂದು ನಡೆಯಲಿರುವ ವಿಧಾನ ಸಭೆ ಚುನಾವಣೆಯಲ್ಲಿ ಮತ ನೀಡುವ ಮೂಲಕ ಮತ್ತೊಮ್ಮೆ ಭಾರೀ ಬಹುಮತದಿಂದ ಆಯ್ಕೆ ಮಾಡಿ ಎಂದು ಬೆಳಗಾವಿ ಗ್ರಾಮೀಣ ವಿಧಾನ ಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ, ಶಾಸಕಿ ಲಕ್ಷ್ಮೀ ಹೆಬ್ಬಾಳಕರ್ ಮನವಿ ಮಾಡಿದ್ದಾರೆ.

ಕ್ಷೇತ್ರದ ಹಲಗಾ ಮತ್ತು ರಂಗಧೋಳಿ ಗ್ರಾಮದಲ್ಲಿ ಭಾರೀ ಜನಸ್ತೋಮದ ಮಧ್ಯೆ ಪ್ರಚಾರ ಕಾರ್ಯ ಕೈಗೊಂಡು ಅವರು ಮಾತನಾಡುತ್ತಿದ್ದರು. 2018ರಲ್ಲಿ ಆಯ್ಕೆಯಾದಾಗಿನಿಂದ ಒಂದು ದಿನವೂ ಮನೆಯಲ್ಲಿ ಕೂಡ್ರಲಿಲ್ಲ. ಇಡೀ ಕ್ಷೇತ್ರವೇ ನನ್ನ ಮನೆ ಎಂಬಂತೆ ಓಡಾಡಿ ಕೆಲಸ ಮಾಡಿಸಿದ್ದೇನೆ. ನೀವು ಹೇಳಿದ ಕಾಮಗಾರಿಗಳನ್ನೆಲ್ಲ ನನ್ನ ಶಕ್ತಿ ಮೀರಿ ಮಾಡಿಸಿದ್ದೇನೆ. ಕೊರೋನಾದಂತಹ ಸಂದರ್ಭದಲ್ಲೂ ನನ್ನ ಮತ್ತು ನನ್ನ ಕುಟುಂಬದ ಆರೋಗ್ಯವನ್ನೂ ಕಡೆಗಣಿಸಿ ಕೈಲಾದಷ್ಟು ಜನರ ಸೇವೆ ಮಾಡಿದ್ದೇನೆ ಎಂದು ಹೆಬ್ಬಾಳಕರ್ ಹೇಳಿದರು.

ವಿರೋಧ ಪಕ್ಷದ ಶಾಸಕಿಯಾಗಿದ್ದರೂ 5 ವರ್ಷದ ಹಿಂದೆ ಮತದಾರರಿಗೆ ನೀಡಿದ್ದ ಭರವಸೆಗಳನ್ನೆಲ್ಲ ಈಡೇ–ರಿಸಿದ್ದೇನೆ. ಬಾಕಿ ಇರುವುದು ಕೇವಲ ಒಂದೆರಡು ಮಾತ್ರ. ಅವುಗಳನ್ನೂ ಈ ಬಾರಿ ಪ್ರಥಮ ಆದ್ಯತೆಯ ಮೇಲೆ



ಈಡೇರಿಸುತ್ತೇನೆ. ಕಳೆದ ಬಾರಿ ಜನರ ಅಪೇಕ್ಷೆಯಂತೆ ಮೂಲಸೌಕರ್ಯಗಳಿಗೆ ಮೊದಲ ಆದ್ಯತೆ ನೀಡಿದ್ದೆ. ರಸ್ತೆ, ಚರಂಡಿ, ಕುಡಿಯುವ ನೀರು, ಶಾಲೆ, ದೇವಸ್ಥಾನ, ಸಮುದಾಯ ಭವನಗಳ ಬೇಡಿಕೆಗಳನ್ನು ಈಡೇರಿಸಿದ್ದೇನೆ. ಇದರ ಜೊತೆಗೆ, ಕಾಲೇಜು ಮತ್ತು ಆಸ್ಪತ್ರೆ ಕಟ್ಟಿಸುವ ಯೋಜನೆಯನ್ನೂ ನಾನು ಹಾಕಿಕೊಂಡಿದ್ದೆ. ಆದ–'ರೆ ನಮ್ಮ ಸರಕಾರವಿಲ್ಲದ್ದರಿಂದ ಅದು ಸಾಧ್ಯವಾಗಲಿಲ್ಲ. ಮುಂದಿನ ದಿನಗಳಲ್ಲಿ ಅವುಗಳನ್ನು ಈಡೇರಿಸುತ್ತೇನೆ ಎಂದು ಅವರು ತಿಳಿಸಿದರು.

ಕೊರೋನಾ, ಪ್ರವಾಹದಂತಹ ಸಂಕಷ್ಟದ ಸಂದರ್ಭದಲ್ಲಿ ನಿಮ್ಮ ಮನೆ ಮಗಳಾಗಿ ನನ್ನ ಕರ್ತವ್ಯ ನಿಭಾಯಿಸಿದ್ದೇನೆ. ಉಚಿತ ಅಂಬುಲೆನ್ಸ್ ಒದಗಿಸಿದ್ದೇನೆ. ಔಷಧ, ಆಹಾರದ ಕಿಟ್ ಗಳನ್ನು ವಿತರಿಸಿದ್ದೇನೆ. ಗ್ರಾಮೀಣ



ಮಕ್ಕಳಿಗೆ, ಯುವಕರಿಗೆ ಜಿಮ್ ಹಾಗೂ ಕ್ರೀಡಾ ಸಾಮಗ್ರಿಗಳನ್ನು ಒದಗಿಸಿದ್ದೇನೆ. ಸರಕಾರದ ಅನುದಾನವಲ್ಲದೆ ಲಕ್ಷ್ಮೀ ತಾಯಿ ಫೌಂಡೇಶನ್ ಮೂಲಕ ಸ್ವಂತ ಹಣವನ್ನೂ ಒದಗಿಸಿ ಅಗತ್ಯ ಕೆಲಸ, ಬಡವರ ಬೇಡಿಕೆಗಳಿಗೆ ಸ್ಪಂದಿಸಿದ್ದೇನೆ ಎಂದು ಲಕ್ಷ್ಮೀ ಹೆಬ್ಬಾಳಕರ್ ವಿವ–ರಿಸಿದರು.

ಗ್ರಾಮೀಣ ಬಸ್ ನಿಲ್ದಾಣ, ವಾಲ್ಮೀಕಿ ಭವನ, ಮರಾಠಾ ಭವನ, ಅಂಬೇಡ್ಕರ್ ಭವನ, 103 ದೇವಸ್ಥಾನಗಳ ನಿರ್ಮಾಣ ಮತ್ತು ಜೀರ್ಣೋದ್ಧಾರ, ಜೈನ ಬಸದಿ, ಮಸೀದಿ, ಚರ್ಚ್ ಗಳ ನಿರ್ಮಾಣ–ಕ್ಕೆ ಅನುದಾನ ಒದಗಿಸಿದ್ದೇನೆ. ರಾಜಹಂಸಗಡದಲ್ಲಿ ದೇಶದಲ್ಲೇ ಬೃಹತ್ತಾದ, ಅಪರೂಪದ ಛತ್ರಪತಿ ಶಿವಾಜಿ ಮಹಾರಾಜರ ಪುತ್ಥಳಿ ನಿರ್ಮಾಣ ಮಾಡಿ, ಕೋಟೆಯ ಅಭಿವೃದ್ಧಿ ಮಾಡಿಸಿದ್ದೇನೆ. ಮಕ್ಕಳ ವಿದ್ಯಾಭ್ಯಾಸಗಳಿಗೆ ನೆರವಾಗಿದ್ದೇನೆ ಎಂದು ತಿಳಿಸಿದರು.

ಜಲಸಂಪನ್ಮೂಲ ಇಲಾಖೆಯಿಂದ 695.81 ಕೋಟಿ ರೂ., ಸಣ್ಣ ನೀರಾವರಿ ಇಲಾಖೆಯಿಂದ 3092 ಲಕ್ಷ ರೂ., ಪದವಿ ಪೂರ್ವ ಶಿಕ್ಷಣ ಇಲಾಖೆಯಿಂದ 5142.74 ಲಕ್ಷ ರೂ., ಲೋಕೋಪಯೋಗಿ ಇಲಾಖೆಯಿಂದ 1694.35 ಲಕ್ಷರೂ., ಮುಖ್ಯಮಂತ್ರಿಗಳ ಪರಿಹಾರ ನಿಧಿಯಿಂದ 100 ಲಕ್ಷ ರೂ., ಕನ್ನಡ ಮತ್ತು ಸಂಸ್ಕೃತಿ ಇಲಾಖಿಯಿಂದ 50 ಲಕ್ಷ ರೂ., ಪ್ರವಾಸೋದ್ಯಮ ಇಲಾಖೆಯಿಂದ 300 ಲಕ್ಷ ರೂ., ಹಿಂದುಳಿದ ವರ್ಗಗಳ ಇಲಾಖಿಯಂದ 100 ಲಕ್ಷ ರೂ., ಶಾಸಕರ ನಿಧಿಯಿಂದ 792 ಲಕ್ಷ ರೂ., ಗ್ರಾಮೀಣಾಭಿವೃದ್ಧಿ ನಿಗಮದಿಂದ 800 ಲಕ್ಷ ರೂ., ಮುಜರಾಯಿ ಇಲಾಖೆಯಿಂದ 960 ಲಕ್ಷ ರೂ., ರಸ್ತೆ, ದೇವಸ್ಥಾನ, ಬ್ರಿಡ್ಜ್ ಕಂ ಬಾಂದಾರ, ಕೆರೆಗಳ ಅಭಿವೃದ್ಧಿ, ಸರಕಾರಿ ಶಾಲೆಗಳ ಕೊಠಡಿ ನಿರ್ಮಾಣ – ದುರಸ್ತಿ, ಶಾಲಾ ಮೈದಾನಗಳ ಅಭಿವೃದ್ಧಿಗೆ ವಿಶೇಷ ಅನುದಾನ ತಂದಿದ್ದೇನೆ ಎಂದು ಅವರು ತಿಳಿಸಿದರು.

ವಿರೋಧ ಪಕ್ಷದ ಶಾಸಕಿಯಾಗಿ, ಅದರಲ್ಲೂ ಮೊದಲ ಬಾರಿಗೆ ಶಾಸಕರಾಗಿ ಇಷ್ಟೊಂದು ಅನುದಾನ ತರುವುದು ಸುಲಭವಿರಲಿಲ್ಲ. ಈ ಬಾರಿ ನಮ್ಮದೇ ಸರಕಾರ ಬರುವುದರಿಂದ ಹೆಚ್ಚಿನ ಕೆಲಸ ತರಲು ಸಾಧ್ಯವಾಗುತ್ತದೆ ಎನ್ನುವ ವಿಶ್ವಾಸವಿದೆ. ವಿಶೇಷವಾಗಿ ಯುವಕ–ರಿಗೆ ಉದ್ಯೋಗ ಒದಗಿಸುವಂತಹ ಯೋಜನೆಗಳನ್ನು ತರುತ್ತೇನೆ. ಉನ್ನತ ಶಿಕ್ಷಣ ಗ್ರಾಮೀಣ ಕ್ಷೇತ್ರದಲ್ಲೇ ಸಿಗುವಂತೆ ಮಾಡುವ ಸಂಕಲ್ಪ ಮಾಡಿದ್ದೇನೆ. ಅತ್ಯಂತ ಕಡಿಮೆ ದರದಲ್ಲಿ ಆರೋಗ್ಯ ಸೇವೆ ಒದಗಿಸುವ ವ್ಯವಸ್ಥೆ ಮಾಡುತ್ತೇನೆ ಎಂದು ಹೆಬ್ಬಾಳಕರ್ ಭರವಸೆ ನೀಡಿದರು.

ಬ್ಯಾಲೆಟ್ ಯುನಿಟ್ ನಲ್ಲಿ 4ನೇ ನಂಬರ್ ನಲ್ಲಿರುವ ನನ್ನ ಚುನಾವಣೆ ಚಿಹ್ನೆಯಾಗಿರುವ ಹಸ್ತದ ಗುರುತಿನ ಮುಂದಿರುವ ಬಟನ್ ಒತ್ತುವ ಮೂಲಕ ನನ್ನನ್ನು ಬೆಂಬಲಿಸಿ, ಅಭಿವೃದ್ಧಿಗೆ ಕೈ ಜೋಡಿಸಿ ಎಂದು ಅವರು ಮನವಿ ಮಾಡಿದರು.

ಕ್ಷೇತ್ರದ ಜನರ ಪ್ರೀತಿ ನೋಡಿ ನನ್ನ ಮನಸ್ಸು ತುಂಬಿ ಬರುತ್ತಿದೆ. ಹೆಚ್ಚು ಮಾತನಾಡಲು ಆಗುತ್ತಿಲ್ಲ. ಯಾವ ಜನ್ಮದ ಪುಣ್ಯವೋ ಗೊತ್ತಿಲ್ಲ, ಶಾಸಕಿಯಾಗಿ ನಿಮ್ಮೆಲ್ಲರ ಪ್ರೀತಿಯನ್ನು ಗಳಿಸಿದ್ದೇನೆ. ಇದು ನನ್ನ ಸುದೈವವೇ ಸರಿ.

ಬರುವ ಈ ಚುನಾವಣೆಯಲ್ಲಿ ನಿಮ್ಮ ಮನೆ ಮಗಳನ್ನು ಹರಸಿ, ಆಶೀರ್ವದಿಸಿ ವಿಧಾನಸಭೆಗೆ ಮತ್ತೊಮ್ಮೆ ಆಯ್ಕೆ ಮಾಡಿ ಎಂದು ಕೇಳಿಕೊಳ್ಳುತ್ತೇನೆ ಎಂದು ಅವರು ಹೇಳಿದರು.ಈ ಸಂದರ್ಭದಲ್ಲಿ ಸ್ಥಳೀಯ ವಿವಿಧ ಸಂಘಟನೆಗಳು ಲಕ್ಷ್ಮೀ ಹೆಬ್ಬಾಳಕರ್ ಅವರಿಗೆ ಸಂಪೂರ್ಣ ಬೆಂಬಲ ಘೋಷಿಸಿದವು. ಪಕ್ಷಾತೀತವಾಗೆ ಕ್ಷೇತ್ರದ ಅಭಿವೃದ್ಧಿಗಾಗಿ ನಾವು ನಿಮ್ಮ ಜೊತೆಗಿರುತ್ತೇವೆ. ಜಾತಿ, ಭಾಷೆಯ ಭೇದ ಮಾಡದ ನಿಮಗೂ ನಾವೆಲ್ಲ ಸಂಪೂರ್ಣ ಬೆಂಬಲ ನೀಡುತ್ತೇವೆ ಎಂದು ತಿಳಿಸಿದರು.

## ಸರ್ಕಾರದ ಯೋಜನೆ ಜನರಿಗೆ ಮುಟ್ಟಿಸುವಲ್ಲಿ ಸಫಲನಾಗಿದ್ದೇನೆ: ಸಾಸನೂರ

ತಾಳಿಕೋಟೆ : ದೇವರ ಹಿಪ್ಪರಗಿ ಮತಕ್ಷೇತ್ರ ಜನರಿಗೆ ಅಗತ್ಯವಾಗಿ ಬೇಕಾಗಿದ್ದ ನೀರಾವರಿ ಯೋಜನೆಗಳನ್ನು ಪೂರ್ಣಗೊಳಿಸುವ ನಿಟ್ಟಿನಲ್ಲಿ ಪ್ರಾಮಾಣಿಕವಾದ ಪ್ರಯತ್ನ ಮಾಡಿದ್ದೇನೆಂದು ದೇವರ ಹಿಪ್ಪರಗಿ ಮತಕ್ಷೇತ್ರದ ಶಾಸಕ ಬಿಜೆಪಿ ಅಭ್ಯರ್ಥಿ ಸೋಮನಗೌಡ ಪಾಟೀಲ(ಸಾಸನೂರ) ಅವರು ಹೇಳಿದರು.

ಗುರುವಾರರಂದು ತಾಲೂಕಿನ ಗೊಟಖಂಡ್ಕಿ ಗ್ರಾಮದಲ್ಲಿ ವಿಧಾನ ಸಭಾ ಚುನಾವಣಾ ಪ್ರಚಾರಾರ್ಥವಾಗಿ ನಡೆದ ಬಿಜೆಪಿ ಕಾರ್ಯಕರ್ತರ ಸಭೆಯಲ್ಲಿ ಮಾತನಾಡುತ್ತಿದ್ದ ಅವರು ಬೂದಿಹಾಳ–ಪೀರಾಪೂರ ಏತನೀರಾವರಿ ಯೋಜನೆಗೆ 793 ಕೋಟಿ ರೂ. ಅನುದಾನ ಒದಗಿಸಿ ಕಾಮಗಾರಿಗೆ ಚಾಲನೆ ನೀಡಿದ್ದೇನೆ ಅದರ ಜೊತೆಗೆ ವಿಜಯಪೂರ ಮುಖ್ಯ ಕಾಲುವೆಗೆ 800 ಕೋಟಿ ರೂ. ಅನುದಾನ ಒದಗಿಸಿ ಸದರಿ ಕಾಮಗಾರಿಗೆ ಚಾಲನೆ ನೀಡಿದ್ದೇನೆ, 33 ಕೇರೆಗಳನ್ನು ತುಂಬಿದ್ದೇನೆ.

ನಾನೇಂದು ಜಾತಿ ರಾಜ–ಕಾರಣ ಮಾಡಿದವನಲ್ಲಾ ಅಭಿವೃದ್ಧಿ



ಮಾನದಂಡದ ಮೇಲೆ ರಾಜಕಾರಣ ಮಾಡುತ್ತಾ ಬಂದಿದ್ದೇನೆ ಮತ್ತು ಪ್ರತಿ ಗ್ರಾಮಗಳಿಗೆ ಸಂಪರ್ಕ ರಸ್ತೆಗಳನ್ನು ಅಭಿವೃದ್ಧಿ ಪಡಿಸಿದ್ದೇನೆ ಜಲ ಜೀವನ ಮಶಿನ ಯೋಜನೆಯಡಿ ಎಲ್ಲ ಗ್ರಾಮಗಳಿಗೂ ಶುದ್ದ ಕುಡಿಯುವ ನೀರಿನ ಯೋಜನೆಯನ್ನು ಒದಗಿಸಿದ್ದೇನೆ ಗೊಟ–ಖಂಡ್ಕಿ ಗ್ರಾಮದಲ್ಲಿ ಮುರಾರ್ಜಿ ದೇಸಾಯಿ ಶಾಲೆ ಕಟ್ಟಡ ಮುಗಿದಿದೆ ಮಕ್ಕಳಿಗೆ ಓದಲಿಕ್ಕೆ ಎಲ್ಲ ಅವಕಾಶ ಮಾಡಿದ್ದೇನೆ ಬಿಜೆಪಿ ಸರ್ಕಾರದ ಅವಧಿಯಲ್ಲಿ ಜನರಿಗಾಗಿ ಬಂದ ಎಲ್ಲ ಯೋಜನೆಗಳಲ್ಲಿ ಶೇ.99 ರಷ್ಟು ಮುಟ್ಟಿಸುವಂತಹ ಕೆಲಸ ಮಾಡಿದ್ದೇನೆ ಅಭಿವೃದ್ಧಿ ಕಾರ್ಯಗಳನ್ನು ಮುಂದಿಟ್ಟುಕೊಂಡು ಮತಯಾಚನೆ ಮಾಡಲು ಮುಂದಾಗಬೇಕೆಂದ ಅವರು ಯಾರೂ ಕಾರ್ಯಕರ್ತರನ್ನು ಗಣನೆಗೆ ತೆಗೆದುಕೊಂಡಿಲ್ಲಾವೆಂಬ ಆಲೋಚನೆ ಬಿಡಿ ಮುಂದಿನ ದಿನಗಳಲ್ಲಿ ಎಲ್ಲರನ್ನು ವಿಸ್ವಾಸಕ್ಕೆ ತೆಗೆದುಕೊಂಡು ಹೋಗುವಂತಹ ಕೆಲಸ ಮಾಡುತ್ತೇನೆಂದರು.

ಇನ್ನೋರ್ವ ಬಿಜೆಪಿ ಮುಖಂಡ ಡಾ.ಬಸವರಾಜ ಅಸ್ಕಿ ಅವರು ಮಾತನಾಡಿ 5 ವರ್ಷಗಳ ಕಾಲ ದೇವರ ಹಿಪ್ಪರಗಿ ಕ್ಷೇತ್ರದ ಶಾಸಕರಾಗಿ ಸೇವೆ ಮಾಡಿದ ಸೋಮನಗೌಡ ಪಾಟೀಲರು ಸೌಮ್ಯಸ್ವಭಾವದವರಾಗಿದ್ದಾರೆ ಅವರ ಚಿಂತನೆ ಅಭಿವೃದ್ಧಿ ಕಡೆಗೆ ಇದೆ 5 ವರ್ಷದಲ್ಲಿ 5 ಸಾವಿರ ಕೋಟಿ ಅನುದಾನ ತಂದು ಅಭಿವೃದ್ಧಿ ಪರ ಕೆಲಸಗಳನ್ನು ಮಾಡಿದ್ದಾರೆ ಇಂತಹ ಶಾಸಕರನ್ನು ಯಾರೂ ಬಿಟ್ಟು ಕೊಡುವದು ಬೇಡಾ ಎರಡನೇ ಭಾ–ರಿಗೆ ಅವರಿಗೆ ಶಾಸಕರನ್ನಾಗಿ ಮಾಡಿ ಕ್ಷೇತ್ರದ ಚಿತ್ರಣ ಬದಲಿಸುವಂತಹ ಕೆಲಸ ಎಲ್ಲರೂ ಸೇರಿ ಮಾಡೋಣವೆಂದರು.

ಬಿಜೆಪಿ ಮುಖಂಡರಾದ ಶಿವನಗೌಡ ಪಾಟೀಲ, ರಾಮನಗೌಡ ಬಿರಾದಾರ(ಮಿಲ್ಟ್ರೀ), ಚನ್ನಬಸ್ಸು ಗೊಟಗುಣಕಿ, ಬಸನಗೌಡ ಬಿರಾದಾರ, ಅವರು ಮಾತನಾಡಿ ಕಳೆದ ಭಾರಿಗಿಂತ ಈ ಭಾರಿ ಗೊಟಖಂಡ್ಕಿ ಗ್ರಾಮದಿಂದ ಮತವನ್ನು ಕೊಡಿಸುವಲ್ಲಿ ಶ್ರಮ ವಹಿಸುವದಾಗಿ ಹೇಳಿದರು.

ಈ ಸಮಯದಲ್ಲಿ ಮುಖಂಡರುಗಳಾದ ಪ್ರಶಾಂತ ಹಾವರಗಿ, ಸಂಗನಗೌಡ ಹೆಗರಡ್ಡಿ, ಮುದಿಗೌಡ ಪಾಟೀಲ, ಬಸನಗೌಡ ಬಿರಾದಾರ, ಅಮೃತಗೌಡ ಬಿರಾದಾರ, ಮಲ್ಲನಗೌಡ ಪಾಟೀಲ, ಸೋಮನಗೌಡ ಬಿರಾದಾರ, ಶರಣಗೌಡ ಗೊಟಗುಣಕಿ, ಬಸನಗೌಡ ಬಿರಾದಾರ, ಗುರುಶಾಂತಪ್ಪಗೌಡ, ಚಂದಣ್ಣ ಚೌದ್ರಿ, ಕೆಂಚಪ್ಪ ಮಾದರ, ರಾಮನಗೌಡ ನಾವದಗಿ, ಮಧುಗೌಡ ಫೀರಾಪೂರ, ಸಾಯಬಣ್ಣ ಆಲ್ಯಾಳ, ಮೊದಲಾದವರು ಇದ್ದರು.

## ಮಿಲಿಟರಿ ಬಾಲಕರ ವಸತಿ ನಿಲಯ: ಪ್ರವೇಶಾತಿಗಾಗಿ ಅರ್ಜಿ ಆಹ್ವಾನ

ಬೆಳಗಾವಿ: 2023–2024ನೇ ಸಾಲಿನ ಶೈಕ್ಷಣಿಕ ವರ್ಷಕ್ಕೆ ಅಥಣಿ ಮಿಲಿಟರಿ ಬಾಲಕರ ವಸತಿ ನಿಲಯದ ಪ್ರವೇಶಕ್ಕಾಗಿ ಯುದ್ಧ ಸಂತ್ರಸ್ಥರು ಮತ್ತು ಮಾಜಿ ಸೈನಿಕರ ಮಕ್ಕಳಿಂದ ಅರ್ಜಿಗಳನ್ನು ಅಹ್ವಾನಿಸಲಾಗಿದೆ.

ವಿದ್ಯಾರ್ಥಿಗಳು ಅಥಣಿ ನಗರದ ಶೈಕ್ಷಣಿಕ ಸಂಸ್ಥೆಗಳಲ್ಲಿ 5ನೇ ತರಗತಿಯಿಂದ ಪಿಯುಸಿ, ಡಿಪ್ಲೋಮಾ ಹಾಗೂ ಐಟಿಐ ದಲ್ಲಿ ವ್ಯಾಸಾಂಗಕ್ಕಾಗಿ ಪ್ರವೇಶವನ್ನು ಪಡೆದಿರಬೇಕು. ನಿಲಯದಲ್ಲಿ ಊಟ , ಉಪಹಾರ ಹಾಗೂ ವಸತಿ ಉಚಿತವಾಗಿರುತ್ತದೆ.


ಆಸಕ್ತ ಮಾಜಿ ಸೈನಿಕರು ಹಾಗೂ ಯುದ್ಧ ಸಂತ್ರಸ್ಥರು ನಿಲಯದ ಪ್ರವೇಶಕ್ಕೆ ಅರ್ಜಿಗಳನ್ನು ಅಧೀಕ್ಷರು ಮಿಲಿಟರಿ ಬಾಲಕರ ವಸತಿ ನಿಲಯ ಅಥಣಿ ಇವರ ಕಾರ್ಯಾಲಯದಿಂದ ಉಚಿತವಾಗಿ ಪಡೆದು ಮೇ.15 2023 ರ ಒಳಗಾಗಿ ಅರ್ಜಿ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಜಂಟಿ ನಿರ್ದೇಶಕರು, ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಬೆಳಗಾವಿ ಇವರ ಕಾರ್ಯಾಲಯಕ್ಕೆ ವೈಯಕ್ತಿಕವಾಗಿ ಭೇಟಿಯಾಗಿ ಅಥವಾ ಮೋಬೈಲ ಸಂಖ್ಯೆ 9592139991 ಕ್ಕೆ ಸಂಪರ್ಕಿಸಬಹುದು ಎಂದು ಕಮಾಂಡರ ಇಂದುಪ್ರಭಾ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಯುವ ಬರೆಹಗಾರರು ಸಾಹಿತ್ಯದತ್ತ ಒಲವು ತೋರುತ್ತಿದ್ದಾರೆ: ಡಾ. ಜಿನದತ್ತ ದೇಸಾಯಿ

ಬೆಳಗಾವಿ: ಯುವ ಬರೆಹಗಾರರು ಸಾಹಿತ್ಯದತ್ತ ಒಲವು ತೋರಿಸುವುದೇ ಅತ್ಯಂತ ವಿರಳ ಇಂತಹ ವಾತಾವರಣದಲ್ಲಿ ಡಾ. ಆನಂದ ಜಕ್ಕಣ್ಣವರ ಮತ್ತು ಶ್ರೀಮತಿ ಅನುರಾಧಾ ಕಂಚಿ ಇವರ ಸಂಪಾದಕತ್ವದಲ್ಲಿಯ 'ಸಮರಸ' ಕೃತಿ ತುಂಬ ಅಚ್ಚುಕಟ್ಟಾಗಿ ಮೂಡಿ ಬಂದಿದೆ. ಇವರ ಕಾರ್ಯ ನಿಜಕ್ಕೂ ಶ್ಲಾಘನೀಯ. ಯುವ ಲೇಖಕರು ಸಾಹಿತ್ಯದತ್ತ ಗಮನ ಹರಿಸುತ್ತಿಲ್ಲವೆಂಬ ನೋವನ್ನು ಮರೆಸಿದ್ದಾರೆ ಎಂದು ಹಿರಿಯ ಕವಿ ಡಾ. ಜಿನದತ್ತ ದೇಸಾಯಿಯವರು ಇಂದಿಲ್ಲಿ ಹೇಳಿದರು.

ಬೆಳಗಾವಿ ಜಿಲ್ಲಾ ಚುಟುಕು ಸಾಹಿತ್ಯ ಪರಿಷತ್ತು ಇವರು ತೃತೀಯ ಜಿಲ್ಲಾ ಚುಟುಕು ಸಾಹಿತ್ಯ ಸಮ್ಮೇಳನದ ಸ್ಮರಣ ಸಂಚಿಕೆ 'ಚುಟುಕು ಪ್ರಭೆ' ಮತ್ತು 'ಸಮರಸ' ಕೃತಿ ಲೋಕಾರ್ಪಣೆ ಕಾರ್ಯಕ್ರಮವನ್ನು ಇತ್ತೀಚೆಗೆ ಚೆನ್ನಮ್ಮ ವೃತ್ತದ ಬಳಿಯಿರುವ ಸಾಹಿತ್ಯ ಭವನದಲ್ಲಿ ಹಮ್ಮಿಕೊಂಡಿದ್ದರು ಈ ಸಂದರ್ಭದಲ್ಲಿ ಅಧ್ಯಕ್ಷತೆಯನ್ನು



ವಹಿಸಿದ್ದ ಡಾ. ಜಿನದತ್ತ ದೇಸಾಯಿಯವರು ಮೇಲಿನಂತೆ ಹೇಳಿದರು.

'ಸಮರಸ' ಕೃತಿ ಲೋಕಾರ್ಪಣೆ ಮಾಡಿದ ನಿವೃತ್ತ ಪ್ರಾಚಾರ್ಯ ಡಾ. ಬಸವರಾಜ ಜಗಜಂಪಿಯವರು ಮಾತನಾಡಿ ಇಂದಿನ ಯಾಂತ್ರಿಕ ಜೀವನದಲ್ಲಿ ಆಕಾಶ, ನಕ್ಷತ್ರ, ನಿಸರ್ಗದ ಸೌಂದರ್ಯವನ್ನು ನೋಡುವ, ನೋಡುವ ನೋಡಿ ಆನಂದಿಸುವ ಮನಸ್ಥಿತಿಯನ್ನು ಮನುಷ್ಯ ಕಳೆದುಕೊಳ್ಳುತ್ತಿದ್ದಾನೆ. 'ಸಮರಸ' ಸಂಪಾದನಾ ಕೃತಿಯನ್ನು ಹೊರತಂದಿರುವ ಡಾ. ಆನಂದ ಜಕ್ಕಣ್ಣವರ ಮತ್ತು ಶ್ರೀಮತಿ ಅನುರಾಧಾ ಕಂಚಿ ಇವರ ಸಾಧನೆ ಬಹು ದೊಡ್ಡದು ಎಂದು ಹೇಳಿದರು.

'ಚುಟುಕು ಪ್ರಭೆ' ಕೃತಿ ಲೋಕಾರ್ಪಣೆಯನ್ನು ಚುಸಾಪ ರಾಜ್ಯ ಸಂಚಾಲಕರಾದ ಡಾ. ಎಂ.ಜಿ.ಆರ್. ಅರಸ್ ಮಾಡಿದರು. ಕೌಸ್ತುಭ ಪತ್ರಿಕೆ ಸಂಪಾದಕರಾದ ಮೈಸೂರಿನ ಶ್ರೀಮತಿ ರತ್ನಾ ಹಾಲಪ್ಪಗೌಡ, 3 ನೇ ಚುಟುಕು ಸಾಹಿತ್ಯ ಸಮ್ಮೇಳನ ಸರ್ವಾಧ್ಯಕ್ಷ ಹಿರಿಯ ಪತ್ರಕರ್ತ ಎಲ್. ಎಸ್ . ಶಾಸ್ತ್ರಿಯವರು ಮಾತನಾಡಿದರು.

ಪಿ. ಬಿ. ಸ್ವಾಮಿ, ಎಂ. ಎ. ಪಾಟೀಲ, ಡಾ. ಆನಂದ ಜಕ್ಕಣ್ಣವರ ಮತ್ತು ಶ್ರೀಮತಿ ಅನುರಾಧಾ ಕಂಚಿ, ಮದನ ಕಣಬೂರ, ಉಪಸ್ಥಿತ–ರಿದ್ದರು. ಶ್ರೀಮತಿ ಸುನಂದಾ ಮುಳೆ ಪ್ರಾರ್ಥಿಸಿದರು. ಶ್ರೀಮತಿ ರಾಜೇಶ್ವರಿ ಹಿರೇಮಠ ನಿರೂಪಿಸಿದರು. ಅಶೋಕ ಮಳಗಲಿ ಸ್ವಾಗತಿಸಿದರು.

## ಕಾರ್ಮಿಕ ಬಂಧುಗಳ ಆರೋಗ್ಯ ಕಾಳಜಿಗಾಗಿ ಕೆಎಲ್ಇ ವೆಲ್‌ನೆಸ್ ಸೆಂಟರ: ಡಾ. ಪ್ರಭಾಕರಕೋರೆ

ಬೆಳಗಾವಿ: ದುಡಿಮೆಯೇ ದುಡ್ಡಿನ ದೇವರು ಎಂದು ಸದಾ ಕಾಲ ಕೈಗಾರಿಕಾ ಕಾರ್ಯದಲ್ಲಿ ತೊಡಗಿರುವ ಕಾರ್ಮಿಕ ಬಂಧುಗಳ ಆರೋಗ್ಯ ಕಾಳಜಿಯ ದೃಷ್ಟಿಯನ್ನಿಟ್ಟುಕೊಂಡು ಕೆ ಎಲ್ ಇ ವೆಲ್‌ನೆಸ್ ಸೆಂಟರನ್ನು ಪ್ರಾರಂಭಿಸಲಾಗಿದೆ–ಎಂದು ಕೆ ಎಲ್ ಇ ಸಂಸ್ಥೆಯಕಾಯಾ ರ್ಧ್ಯಕ್ಷರಾದಡಾ. ಪ್ರಭಾಕರಕೋರೆಅವರು ಮಾತನಾಡುತ್ತಿದ್ದರು ಅವರು ಬುಧವಾರ ದಿನಾಂಕ 03ನೇ ಮೇ 2023 ರಂದು ಬೆಳಗಾವಿ ನಗರದ ಕೆ ಎಲ್ ಇ ಎಮ್ಎಸ್ ಶೇಷಗಿರಿ ಇಂಜಿನೀಯರಿಂಗ ಕಾಲೇಜಿನ ಆವರಣದಲ್ಲಿ ಕೆ ಎಲ್ ಇ ಶತಮಾನೋತ್ಸವ ಚಾರಿಟೆಬಲ್ ಆಸ್ಪತ್ರೆಯ ಪ್ರಾಯೋಜಕತ್ವದಲ್ಲಿ ನೂತನವಾಗಿ ಪ್ರಾರಂಭಿಸಲಾದ"ಕೆ ಎಲ್ ಇ ವೆಲ್‌ನೆಸ್ ಸೆಂಟರ್" ನ್ನು ಲೋಕಾರ್ಪಣೆಗೊಳಿಸಿ ಮಾತನಾಡುತ್ತಿದ್ದರು.

106 ವರ್ಷಗಳ ಇತಿಹಾಸ ಹೊಂದಿರುವ ಕೆ ಎಲ್ ಇ ಸಂಸ್ಥೆಯು ಪ್ರಾರಂಭದಲ್ಲಿ ಅನೇಕ ಸವಾಲುಗಳನ್ನು ಎದುರಿಸಿ ಇಂದುಜಗತ್ತಿನಾದ್ಯಂತ 300 ಕ್ಕೂ ಅಧಿಕ ಸಂಸ್ಥೆಗಳನ್ನು ಹೊಂದಿದೆ. ಆರೋಗ್ಯ ಹಾಗೂ ಶಿಕ್ಷಣದಲ್ಲಿ ತನ್ನದೇಆದ ಮೌಲ್ಯಗಳನ್ನು ಹೊಂದಿರುವ ನಮ್ಮ ಸಂಸ್ಥೆಯು ಇಂದು ಕೈಗಾರಿಕಾ ಕಾರ್ಮಿಕರ ಒಳಿತಿಗಾಗಿ ಈ ಸೆಂಟರ್‌ನ್ನು ಪ್ರಾರಂಭಿಸಿದ್ದೇವೆ. ರಾಜ್ಯ, ಭಾಷೆ, ಧರ್ಮ, ಮತ ಭೇದಗಳಿಲ್ಲದೇ ಎಲ್ಲ ವರ್ಗದಜನರಿಗೂ ಸಮಾನ ಅವಕಾಶಗಳು ಮುಟ್ಟುವಂತೆ ಮಾಡುವ ಉದ್ದೇಶವನ್ನು ಹೊಂದಿದೆ ಎಂದು ಅಭಿಮತ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಬೆಳಗಾಂ ಫೌಂಡ್ರಿಕ್ಲಸ್ಟರ್ ನ ಚೇರಮನ ಶ್ರೀ ರಾಮ್ ಭಂಡಾರೆಅವರು ಮಾತನಾಡುತ್ತ" 50 ಸಾವಿರಕ್ಕಿಂತಲೂ ಅಧಿಕ ಕಾರ್ಮಿಕರು ಉದ್ಯಮಭಾಗ ಭಾಗಕ್ಕೆ ಇ ಎಸ್ ಐ ಆಸ್ಪತ್ರೆಯನ್ನು ಪ್ರಾರಂಭಿಸ ಬೇಕೆಂದು ಈ ಮೊದಲು ಹಲವಾರು ಬಾರಿ ಸರ್ಕಾರಕ್ಕೆ ವಿನಂತಿಸಿದ್ದರೂ ಸಹ ಸರ್ಕಾರವು ಸ್ಪಂದಿಸಿರಲಿಲ್ಲ. ಈ ನಿಟ್ಟಿನಲ್ಲಿ ನಾವು ಕೆ ಎಲ್ ಇ ಸಂಸ್ಥೆಯ ಗಮನಕ್ಕೆ ತಂದ ಕೇವಲ ಮೂರೆ ಮೂರು ತಿಂಗಳಲ್ಲಿ ಈ ಕೆ ಎಲ್ ಇ ವೆಲ್‌ನೆಸ್ ಸೆಂಟರ ನ್ನು ಪ್ರಾರಂಭಿಸಿರುವದು ಕೆ ಎಲ್ ಇ ಸಂಸ್ಥೆಯ ಕಾರ್ಯದಕ್ಷತೆಯನ್ನು ಸಾರುವ ಸಾಕ್ಷಿಯಾಗಿದೆ ಎಂದು ಮೆಚ್ಚುಗೆ ವ್ಯಕ್ತ ಪಡಿಸಿದರು.



ಈ ಸಂದರ್ಬದಲ್ಲಿ ಬೆಳಗಾಂ ಪೌಂಡ್ರಿಕ್ಲಸ್ಟರ್, ಬೆಳಗಾವಿ ಲಘು ಉದ್ಯೋಗ ಭಾರತಿ, ಸಣ್ಣ ಉದ್ದಿಮೆಗಳ ಅಸೋಶಿಯೇಷನ್, ಬೆಳಗಾವಿ ಚೇಂಬರ ಆಫ 'ಕಾಮರ್ಸ್ ಗಳ ಜೊತೆಗೆ ಕೆ ಎಲ್ ಇ ವೆಲ್‌ನೆಸ್ ಸೆಂಟರ ನ ಆರೋಗ್ಯ ಸೇವೆಗಳಿಗೆ ಸಂಬಂಧ ಪಟ್ಟಂತೆ ಪರಸ್ಪರ ಒಡಂಬಡಿಕೆಯನ್ನು ಹಸ್ತಾಂತರಿಸಲಾಯಿತು.

ಈ ಸಂದರ್ಭದಲ್ಲಿ ಮತ್ತೊಬ್ಬ ಅತಿಥಿ–ಯಾಗಿ ಆಗಮಿಸಿದ್ದ ಸಣ್ಣ ಉದ್ದಿಮೆಗಳ ಅಸೋಶಿಯೇಷನ್ ನ ಅಧ್ಯಕ್ಷರಾದ ಶ್ರೀ ಮಹಾದೇವ ಚೌಗಲೆ ಅವರು ಮಾತನಾಡುತ್ತ" ಈ ಭಾಗದಲ್ಲಿ ಕಾರ್ಮಿಕರು ಕಾರ್ಯಪ್ರವರ್ತರಾಗಿರುವಾಗ ಸಣ್ಣ ಪುಟ್ಟ ಆಕಸ್ಮಿಕಗಳು ಸಂಭವಿಸಿದಾಗ ಆರೋಗ್ಯ ಸೇವೆಗಳನ್ನು ಪಡೆಯುವದುತುಂಬ ದುಸ್ತರವಾಗಿತ್ತು, ಅದರಲ್ಲಿಯೂರಾತ್ರಿಯ ವೇಳೆಯಲ್ಲಿಏನಾದರೂ ಇಂತಹ ಅವಘಡಗಳು ಸಂಭವಿಸಿದರೆ ಅಂಬುಲೆನ್ಸನ ಸೌಲಭ್ಯವೂ ಸಹ ಸಿಗುವದು ಕಷ್ಟವಾಗಿತ್ತು. ಇಂತಹ ಸಂದರ್ಭದಲ್ಲಿ ಕೆ ಎಲ್ ಇ ಸಂಸ್ಥೆಯು ಈಸೆಂಟರ್‌ನ್ನು ಪ್ರಾರಂಭಿಸಿರುವದು ನಿಜಕ್ಕೂ ನಮ್ಮಕಾರ್ಮಿಕ ಬಂಧುಗಳ ಅದೃಷ್ಟವೇ ಸರಿಎಂದು ಸಂತಸ ವ್ಯಕ್ತ ಪಡಿಸಿದರು.

ಕಾರ್ಯಕ್ರಮದಲ್ಲಿ ಅತಿಥಿಗಳಾಗಿ ಆಗಮಿಸಿದ್ದ ಅಶೋಕ ಐರನ್ ವರ್ಕ್ಸ್ ನ ಮ್ಯಾನೇಜಿಂಗ ಡೈರೆಕ್ಟರ ಶ್ರೀ ಜಯಂತ ಹುಂಬರವಾಡಿ, ಬೆಳಗಾವಿ ಲಘು ಉದ್ಯೋಗ ಭಾರತಿಯಅಧ್ಯಕ್ಷರಾದ ಶ್ರೀ ದಯಾನಂದ ನೇತಾಲ್ಕರ ಹಾಗೂ ಬೆಳಗಾವಿ ಚೇಂಬರ ಆಫಕಾಮರ್ಸ್ ನ ಅಧ್ಯಕ್ಷ ಶ್ರೀ ಹೇಮೆಂದ್ರ ಪೋರವಾಲಅವರು ಸಾಂದರ್ಭಿಕವಾಗಿ ಮಾತನಾಡಿದರು.

ಕಾರ್ಯಕ್ರಮವನ್ನು ಹಿರಿಯ ವೈದ್ಯರಾದಡಾ.ಸಿ ಎನ್‌ತುಗ ಶೆಟ್ಟಿ ಅವರು ನಿರೂಪಿಸಿದರು. ಯು–ಎಸ್‌ಎಮ್ ಕೆ ಎಲ್ ಇ ಯ ನಿರ್ದೇಶಕರಾದ ಡಾ. ಹೆಚ್ ಬಿ ರಾಜಶೇಖರಅವರು ಅತಿ–ತಿಗಳನ್ನು ಸ್ವಾಗತಿಸುತ್ತಾ ಕೆ ಎಲ್ ಇ ವೆಲ್‌ನೆಸ್ ಸೆಂಟರ ನ ಕಾರ್ಯದರೂಪು ರೇಷೆಗಳನ್ನು ತಿಳಿಸಿದರು. ಕೆ ಎಲ್ ಇ ವೆಲನೆಸ್ ಸೆಂಟರ ನಲ್ಲಿರಬಹುದಾದ ಸೇವೆಗಳು, ವಿಶೇಷತೆಗನ್ನು ತಿಳಿಸುತ್ತ ಕೆ ಎಲ್ ಇ ಶತಮಾನೋತ್ಸವ ಚಾ–ರಿಟೆಬಲ್ ಆಸ್ಪತ್ರೆಯ ನಿರ್ದೇಶಕರಾದಡಾ.ಎಸ್ ಸಿ ಧಾರವಾಡಅವರುಎಲ್ಲರಿಗೂ ವಂದಿಸಿರು.

ಕಾರ್ಯಕ್ರಮದಲ್ಲಿ ಬೆಳಗಾವಿ ಮೈಕ್ರೊ ಇಂ–ಡಸ್ಟ್ರೀಸ ನ ಅಧ್ಯಕ್ಷ ಶ್ರೀ ರಮೇಶದೇಸೂರಕರ ಹಾಗೂ ಮತ್ತಿತರೆ ಪದಾಧಿಕಾರಿಗಳು.ಕೆ ಎಲ್ ಇ ವಿಶ್ವವಿದ್ಯಾಲಯದ ನಿವೃತ್ತರೆಜಿಸ್ಟ್ರಾರ್‌ಡಾ. ವಿ.ಡಿ ಪಾಟೀಲ, ಡಾ.ಎಮ್ ವಿ ಜಾಲಿ, ಶ್ರೀಎಸ್ ವಿ ವಿರಗೆ,

ಕೆಎಲ್ಇ ಹೊಮಿಯೊಪಥಿಕ ಕಾಲೇಜಿನ ಪ್ರಾಂಶುಪಾಲರಾದ ಡಾ.ಎಮ್ ಎ ಉಡ–'ಚನ ಕರ, ಕೆಎಲ್ಇ ಶ್ರೀ ಬಿ ಎಮ್ ಕಂಕಣವಾಡಿ ಆಯುರ್ವೇದಿಕಕಾಲೇಜಿನ ಪ್ರಾಂಶುಪಾಲರಾದಡಾ.ಸುಹಾಸ ಶೆಟ್ಟಿ,

ಕೆಎಲ್ಇ ಎಮ್ಎಸ್ ಶೇಷಗಿರಿಕಾಲೇಜಿನ ಪ್ರಾಂಶುಪಾಲರಾದ ಡಾ.ಬಸವರಾಜ–ಕಟಗೇರಿ, ಕೆಎಲ್ಇ ಸೆಂಟಿನರಿಚಾರಿಟೇಬಲನ್ ಪ್ರಾಂಶುಪಾಲರಾದ ಶ್ರೀ.ವಿಕ್ರಾಂತ ನೆಸ–ರಿ,ಕೆ ಎಲ್ ಇ ಚಾರಿಟೆಬಲ್ ಆಸ್ಪತ್ರೆಯ–ಎಲ್ಲ ವಿಭಾಗದ ಮುಖ್ಯಸ್ಥರು, ಹಿರಿಯ ವೈದ್ಯರುಗಳು ಹಾಗೂ ಅಪಾರ ಪ್ರಮಾಣದಕಾರ್ಮಿಕ ಬಂಧುಗಳು ಮತ್ತು ಕೆ ಎಲ್ ಇ ಸಿಬ್ಬಂದಿ ವೃಂದಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.

Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089